29 April 2026 Wednesday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

**ಭಾವನಾಂತರಂಗ**

ಯಾವುದೇ ಬಾಂಧವ್ಯವನ್ನು ಶಾಶ್ವತವಾಗಿ ಉಳಿಸಿ ಕೊಳ್ಳಬೇಕೆಂದರೆ ಮರೆಯಲಾಗದ್ದನ್ನು ಕ್ಷಮಿಸಬೇಕು,
ಕ್ಷಮಿಸಲಾಗದ್ದನ್ನು ಮರೆತುಬಿಡಬೇಕು!

-ಸ್ನೇಹಾ ಆನಂದ್



ಬಿಜೆಪಿ ನಾಯಕರ ಅಪಪ್ರಚಾರ ಸರಿಯಲ್ಲ: ಮಾಜಿ ಸಚಿವೆ ರಾಣಿ ಸತೀಶ್ — ಪುಟ ಸಂ. 2



ಒಳಮೀಸಲಾತಿ ಜಾರಿ: ಹೆಚ್.ಸಿ.ಮಹದೇವಪ್ಪ ಅವರ ಪಾತ್ರ, ಮಹತ್ವದ್ದು — ಪುಟ ಸಂ. 3



ಅಂಬೇಡ್ಕರ್ ಬ್ಯಾನರ್‌ಗೆ ಕಿಡಿಗೇಡಿಗಳಿಂದ ಕತ್ತರಿ- ಕ್ರಮಕ್ಕೆ ಆಗ್ರಹಿಸಿ ದೂರು — ಪುಟ ಸಂ. 4

info.varthaman@gmail.com

9742504916 ಮೈಸೂರು ಮಂಡ್ಯ ಬೆಂಗಳೂರು ಹಾಸನ ಚಾಮರಾಜನಗರ ರಾಮನಗರ ಬೆಂಗಳೂರು ಗ್ರಾಮಾಂತರ ಕೊಡಗು ಕಾರ್ಯನಿರ್ವಾಹಕ ಸಂಪಾದಕ – ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 158 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

## ಅಧಿಕಾರ ತ್ಯಜಿಸಲು 'ಸಿದ್ಧ'ರಾಮಯ್ಯ

### ಈಗ ರಾಹುಲ್ ಗಾಂಧಿ ಹೇಳಿದಂತೆ ಕೇಳುವ ಸಿಎಂ: ಕೆ.ಎನ್.ರಾಜಣ್ಣ


ಬೆಂಗಳೂರು: ರಾಜ್ಯದಲ್ಲಿ ಅಧಿಕಾರ ಹಸ್ತಾಂತರದ ಬಗ್ಗೆ ಚರ್ಚೆಗಳು ಜೋರಾಗಿರುವ ನಡುವೆಯೇ ಮುಖ್ಯಮಂತ್ರಿ ಸಿದ್ದರಾಮಯ್ಯ ಆಪ್ತ ವಲಯದಲ್ಲಿರುವ ಮಾಜಿ ಸಚಿವ ಕೆ.ಎನ್.ರಾಜಣ್ಣ ಹೇಳಿಕೆ ಮತ್ತಷ್ಟು ಕುತೂಹಲಕ್ಕೆ ಕಾರಣವಾಗಿದೆ.

ಸುದ್ದಿಗಾರರ ಜೊತೆ ಮಾತನಾಡಿದ ಅವರು, ಸಿದ್ದರಾಮಯ್ಯ ಈ ಹಿಂದೆ ಇದ್ದಂತೆ ಇಲ್ಲ. ಸಿಎಂ ಕುರ್ಚಿ ಬಿಡೋಕು ಸಿದ್ದರಾಮಯ್ಯ ರೆಡಿಯಾಗಿದ್ದಾರೆ ಎನ್ನುವ ಅಚ್ಚರಿಯ ಹೇಳಿಕೆ ನೀಡಿದ್ದಾರೆ.

ಸಿದ್ದರಾಮಯ್ಯ ಅಧಿಕಾರದಲ್ಲಿ ಮುಂದುವರಿಯಲು ಸಿದ್ಧರಾಗಿದ್ದಾರೆ. ಅಲ್ಲದೆ, ಪದ ತ್ಯಾಗಕ್ಕೂ ಸಿದ್ಧರಾಗಿದ್ದಾರೆ. ಹೈಕಮಾಂಡ್ ಏನು ಹೇಳುತ್ತದೆಯೊ ಅದಕ್ಕೆ ಬದ್ಧರಾಗಿದ್ದಾರೆ. ಆದರೆ, ಇದು ಆತುರದಲ್ಲಿ ತೆಗೆದುಕೊಳ್ಳುವ ನಿರ್ಧಾರ ಅಲ್ಲ. ಪಕ್ಷದ ಭವಿಷ್ಯ ಇದರಲ್ಲಿ ಅಡಗಿದೆ. ಹೀಗಾಗಿ, ಸೂಕ್ತ ನಿರ್ಧಾರವನ್ನು ಹೈಕಮಾಂಡ್ ತೆಗೆದುಕೊಳ್ಳುವ ವಿಶ್ವಾಸವಿದೆ ಎಂದು ಹೇಳಿದರು. ಈ ಹಿಂದೆ ಇದ್ದ ಸಿದ್ದರಾಮಯ್ಯ ಅಂದರೆ 2013–2018 ರ ಅವಧಿಯಲ್ಲಿದ್ದ ಸಿದ್ದರಾಮಯ್ಯ ಈಗ ಇಲ್ಲ. ಈಗ ಸಿದ್ದರಾಮಯ್ಯ ರಾಹುಲ್ ಗಾಂಧಿ ಹೇಳಿದಂತೆ ಕೇಳುತ್ತಿದ್ದಾರೆ ಎಂದು ಕೆ.ಎನ್.ರಾಜಣ್ಣ ಹೇಳಿದರು.



PTI




#### ಗೊಂದಲ ಶೀಘ್ರ ಬಗೆಹರಿಯಲಿ

ಹೈಕಮಾಂಡ್ ಗೊಂದಲಗಳನ್ನು ಶೀಘ್ರ ಬಗೆಹರಿಸಬೇಕು. ಗೊಂದಲ ಬೇಗ ಬಗೆಹರಿಸಿದಷ್ಟು ರಾಜ್ಯಕ್ಕೆ ಒಳ್ಳೆಯದು. ಗೊಂದಲ ಮುಂದುವರಿಯಲು ಹೈಕಮಾಂಡ್ ಅವಕಾಶ ನೀಡಬಾರದು. ಸಿದ್ದರಾಮಯ್ಯ ಅವರ ಜೊತೆಗೆ ಚರ್ಚೆ ಮಾಡಿದಾಗಲೂ ಅವರು ಮುಕ್ತ ಮನಸ್ಸಿನಲ್ಲಿದ್ದಾರೆ. ರಾಹುಲ್ ಗಾಂಧಿಯ ಸೂಚನೆ ಪಾಲಿಸುವುದಾಗಿ ಹೇಳಿದ್ದಾರೆ. ಆಗ ನಿಮ್ಮೆಲ್ಲರ ಸಹಕಾರ ಇರಬೇಕು ಎಂಬುದು ಅವರ ಅಭಿಮತ. ರಾಹುಲ್ ಗಾಂಧಿ ಏನು ತೀರ್ಮಾನ ಮಾಡ್ತಾರೊ ಅದರಂತೆ ನಡೆಯೋಣ ಎಂದಿದ್ದಾರೆ. ಅಧಿಕಾರ ಶಾಶ್ವತವಲ್ಲ. ಅಧಿಕಾರ ಕಳೆದುಕೊಂಡವರು ಗಳಿಸು ತ್ತಾರೆ. ಸಿ.ಎಂ ಮನಸ್ಥಿತಿ ರಾಹುಲ್ ನಿರ್ದೇಶನದಂತೆ ಹೋಗಬೇಕು ಎಂಬುದಾಗಿದೆ ಎಂದು ತಿಳಿಸಿದರು.

#### ದಲಿತ ಸಿಎಂ ಹೇಳಿಕೆಗೆ ಬದ್ಧ

ಮುಖ್ಯಮಂತ್ರಿ ಸ್ಥಾನದಲ್ಲಿ ಸಿದ್ದರಾಮಯ್ಯ ಅವರು ಮುಂದುವರಿಯಬೇಕೆಂಬ ಅಭಿಪ್ರಾಯವನ್ನು ನಾವೆಲ್ಲ ಹೈಕಮಾಂಡ್‌ಗೆ ಹೇಳಿದ್ದೇವೆ ಎಂದು ಶಾಸಕ ಕೆ.ಎನ್.ರಾಜಣ್ಣ ಹೇಳಿದರು. ಸುದ್ದಿಗಾರರ ಜೊತೆ ಮಾತನಾಡಿದ ಅವರು, ದಲಿತ ಸಿಎಂ ಆಗಬೇಕು ಎಂಬುದಕ್ಕೆ ನಾನು ಈಗಲೂ ಬದ್ಧ. ಅಹಿಂದ ವರ್ಗ ನಿಜವಾಗಿಯೂ ಸಮಾಧಾನವಾಗಿಲ್ಲ. ಮುಂದಿನ ಚುನಾವಣೆಗೆ ಎರಡು ವರ್ಷ ಇದೆ. ಮುಂದಿನ ರಾಜಕೀಯ ಹೀಗೇ ಆಗಬಹುದು ಎಂದು ಈಗಲೇ ಹೇಳಲು ಸಾಧ್ಯವಿಲ್ಲ. ರಾಜಕಾರಣದಲ್ಲಿ ಬಹಳಷ್ಟು ನೀರು ಹರಿಯಬೇಕಾದ ಸಮಯವೂ ಇದೆ ಎಂದರು. 2013–18ರಲ್ಲಿದ್ದ ಸಿದ್ದರಾಮಯ್ಯಗೂ ಈ ಅವಧಿ ಸಿದ್ದರಾಮಯ್ಯಗೂ ಬಹಳ ವ್ಯತ್ಯಾಸ ಇದೆ. ರಾಹುಲ್ ಗಾಂಧಿ ಹೇಳಿದ್ದನ್ನು ಸಿದ್ದರಾಮಯ್ಯ ಪಾಲನೆ ಮಾಡುವ ಮನಸ್ಥಿತಿಯಲ್ಲಿ ಇದ್ದಾರೆ. ನಾವು ಏನೇನು ಹೇಳಬೇಕು ಹೇಳಿದ್ದೇವೆ ಎಂದು ರಾಜಣ್ಣ ಹೇಳಿದರು.

## ಮೇ 15ಕ್ಕೆ ಡಿಕೆಶಿ ಸಿಎಂ ಆಗೋದು ಫಿಕ್ಸ್: ಇಕ್ಬಾಲ್



ರಾಮನಗರ: ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮೇ 15ಕ್ಕೆ ಮುಖ್ಯಮಂತ್ರಿ ಆಗೋದು ಫಿಕ್ಸ್ ಆಗಿದೆ. ಹಿಂದೆ ನಾನು ಎರಡ್ಮೂರು ಬಾರಿ ದಿನಾಂಕಗಳನ್ನು ಹೇಳಿದ್ದೇನೆ. ವಿವಿಧ ಕಾರಣಕ್ಕೆ ಆಗ ಆಗಲಿಲ್ಲ. ಈಗಿನದು ಅಂತಿಮ ದಿನಾಂಕ. ಡಿಕೆಶಿ ಸಿ.ಎಂ ಆಗೇ ಆಗುತ್ತಾರೆ ಎಂದು ಶಾಸಕ ಎಚ್.ಎ. ಇಕ್ಬಾಲ್ ಹುಸೇನ್ ಭರವಸೆಯ ಮಾತನಾಡಿದ್ದಾರೆ.

ರಾಮನಗರ ತಾಲ್ಲೂಕಿನ ಕೇತೋಹಳ್ಳಿ ಯಲ್ಲಿ ಮಂಗಳವಾರ ಮುಖ್ಯಮಂತ್ರಿ ಬದಲಾವಣೆಗೆ ಸಂಬಂಧಿಸಿದ ಬೆಳವಣಿಗೆ ಕುರಿತ ಸುದ್ದಿಗಾರರ ಪ್ರಶ್ನೆಗೆ ಅವರು ಪ್ರತಿಕ್ರಿಯಿಸಿದರು.

ಮೇ 15ರಂದು ನಮ್ಮ ನಾಯಕನ ಜನ್ಮ ದಿನವಿದೆ. ಅಂದು ಮುಖ್ಯಮಂತ್ರಿ ಹುದ್ದೆಯ ಉಡುಗೊರೆ ಸಿಗಲಿದೆ. ಈ ಅವಧಿಯಲ್ಲೇ ಅವರು ಸಿ.ಎಂ ಆಗಬೇಕು ಮತ್ತು ಅವರ ನಾಯಕತ್ವದಲ್ಲಿ ಮತ್ತಷ್ಟು ಅಭಿವೃದ್ಧಿ ಕೆಲಸಗಳಾಗಬೇಕು ಎಂಬುದು ಎಲ್ಲರ ಬಯಕೆಯಾಗಿದೆ ಎಂದು ಹೇಳಿದರು. ಸಿದ್ದರಾಮಯ್ಯ ಅವರನ್ನೇ ಮುಂದುವರಿಸುವಂತೆ ಹೈಕಮಾಂಡ್‌ಗೆ ಮನವಿ ಮಾಡುತ್ತೇವೆ ಎಂಬ ಶಾಸಕ ಕೆ.ಎನ್.ರಾಜಣ್ಣ ಹೇಳಿಕೆಗೆ

ಪ್ರತಿಕ್ರಿಯಿಸಿದ ಹುಸೇನ್, ರಾಜಕಾರಣದಲ್ಲಿ ನಾವು ಬದಲಾವಣೆ ಬಯಸಿ ನಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದೇವೆ. ಅದರಂತೆ, ರಾಜಣ್ಣ ಅವರೂ ತಮ್ಮ ಅಭಿಪ್ರಾಯ ಹೇಳಿದ್ದಾರೆ. ರಾಜಕಾರಣದಲ್ಲಿ ಅಭಿಪ್ರಾಯ ಬೇಧ ಸಹಜ. ಜಾತಿ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲೂ ಗುಂಪುಗಾರಿಕೆ ಇದೆ. ರಾಜಕೀಯವೂ ಅದರಿಂದ ಹೊರತಾಗಿಲ್ಲ ಎಂದರು.

ಪಕ್ಷದ ಹಿರಿಯ ನಾಯಕರೂ ಆಗಿರುವ ಸಚಿವರಾದ ಸತೀಶ ಜಾರಕಿಹೊಳಿ ಮತ್ತು ಡಾ.ಎಚ್.ಸಿ. ಮಹದೇವಪ್ಪ ಅವರು ಪಕ್ಷದ ವರಿಷ್ಠರನ್ನು ಭೇಟಿ ಮಾಡಿರುವುದರಲ್ಲಿ ಯಾವುದೇ ತಪ್ಪಿಲ್ಲ.

ಪುಟ 2ಕ್ಕೆ

## ಒಳ ಮೀಸಲಾತಿ ಜಾರಿ ಆದೇಶ

### 56,432 ಹುದ್ದೆಗಳ ನೇಮಕಾತಿ: ತುರ್ತು ಕ್ರಮಕ್ಕೆ ಸೂಚನೆ



ಬೆಂಗಳೂರು: ಒಳ ಮೀಸಲಾತಿ ಜಾರಿಗೊಳಿಸಿ ರಾಜ್ಯ ಸರ್ಕಾರ ಮಂಗಳವಾರ ಅಧಿಕೃತ ಆದೇಶ ಹೊರಡಿಸಿದೆ. ಪರಿಶಿಷ್ಟ ಜಾತಿಯ ಶೇ.15 ಮೀಸಲಾತಿಯಲ್ಲಿ ಪ್ರವರ್ಗ ಎ (ಎಡಗೈ ಜಾತಿಗಳು) ಮತ್ತು ಪ್ರವರ್ಗ ಬಿ (ಬಲಗೈ) ತಲಾ ಶೇ.5.25, ಮತ್ತು ಪ್ರವರ್ಗ ಸಿಗೆ (ಸ್ಪೃಶ್ಯ, ಅಲೆಮಾರಿ ಜಾತಿಗಳು) ಶೇ.4.5ರಷ್ಟು ಒಳ ಮೀಸಲಾತಿ ಜಾರಿ ಮಾಡಲಾಗಿದೆ.

ಈಗಾಗಲೇ ಆರ್ಥಿಕ ಇಲಾಖೆ ಅನುಮೋದನೆ ನೀಡಿರುವ 56,432 ಹುದ್ದೆಗಳ ನೇರ ನೇಮಕಾತಿಗೆ ತುರ್ತು ಕ್ರಮಗಳನ್ನು ಕೈಗೊಳ್ಳಬೇಕು ಎಂದು ಎಲ್ಲ ನೇಮಕಾತಿ ಪ್ರಾಧಿಕಾರಗಳಿಗೆ ಸೂಚನೆಯನ್ನೂ ನೀಡಲಾಗಿದೆ.

ಪುಟ 2ಕ್ಕೆ

#### ನೇಮಕಾತಿ ಅಧಿಸೂಚನೆ

ಸರ್ಕಾರ 2025ರ ಸೆ. 3ರಂದು ಹೊರಡಿಸಿದ್ದ ಆದೇಶದ ಅನ್ವಯ ಒಳ ಮೀಸಲಾತಿ ಅಳವಡಿಸಿಕೊಂಡು ನೇಮಕಾತಿ ಪ್ರಕ್ರಿಯೆಯ ಹಂತದಲ್ಲಿರುವ ಅಥವಾ 2026ರ ಫೆ.27ರಂದು ಹೊರಡಿಸಿದ ಆದೇಶದ ಅನ್ವಯ ಒಳ ಮೀಸಲಾತಿ ಅಳವಡಿಸದೇ ಹೊರಡಿಸಿರುವ ಎಲ್ಲ ನೇಮಕಾತಿ ಅಧಿಸೂಚನೆಗಳನ್ನು ಹಿಂಪಡೆದು ಪ್ರವರ್ಗ ಎ, ಪ್ರವರ್ಗ ಬಿ, ಪ್ರವರ್ಗ ಸಿಗೆ ಕ್ರಮವಾಗಿ ಶೇ 5.25, 5.25, 4.50 ಒಳ ಮೀಸಲಾತಿ ಅಳವಡಿಸಿ ತಕ್ಷಣ ಪರಿಷ್ಕೃತ ನೇಮಕಾತಿ ಅಧಿಸೂಚನೆ ಹೊರಡಿಸಿ ನೇಮಕಾತಿ ಮಾಡಬೇಕು ಎಂದು ರಾಜ್ಯ ಸರ್ಕಾರ ಸೂಚನೆ ನೀಡಿದೆ.

## ಚಿತ್ರದುರ್ಗ: ಕೆಎಸ್‌ಆರ್‌ಟಿಸಿ ಬಸ್ ಪಲ್ಟಿ 45 ಪ್ರಯಾಣಿಕರು ಪಾರು





ಚಿತ್ರದುರ್ಗ: ಚಳ್ಳಕೆರೆ ತಾಲ್ಲೂಕಿನ ಹೆಗ್ಗರೆ ಸಮೀಪ ಮಂಗಳವಾರ ಮುಂಜಾನೆ ಕೆಎಸ್‌ಆರ್‌ಟಿಸಿ ಬಸ್ ಪಲ್ಟಿಯಾದ ಪರಿಣಾಮ 15ಕ್ಕೂ ಹೆಚ್ಚು ಪ್ರಯಾಣಿಕರು ಸಣ್ಣಪುಟ್ಟ ಗಾಯಗಳೊಂದಿಗೆ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ರಾಯಚೂರಿನಿಂದ ಬೆಂಗಳೂರಿಗೆ ತೆರಳುತ್ತಿದ್ದ ಬಸ್ ಹೆಗ್ಗರೆ ಗ್ರಾಮದ ಸಮೀಪ ಅಪಘಾತ ಸಂಭವಿಸಿದೆ. ಚಾಲಕನ ನಿಯಂತ್ರಣ ತಪ್ಪಿದ ವಾಹನವು ರಸ್ತೆ ವಿಭಜಕಕ್ಕೆ ಡಿಕ್ಕಿ ಹೊಡೆದು ರಸ್ತೆಯ ಮೇಲೆ ಉರುಳಿ ಬಿದ್ದಿದೆ. ಹೆಗ್ಗರೆ ಬಳಿ ಬೆಳಿಗ್ಗೆ 7 ಗಂಟೆ ಸುಮಾರಿಗೆ ಈ ಅಪಘಾತ ಸಂಭವಿಸಿದೆ.

ಬಸ್ ನಲ್ಲಿ 45 ಪ್ರಯಾಣಿಕರಿದ್ದರು. ಇವರಲ್ಲಿ 15 ಪ್ರಯಾಣಿಕರಿಗೆ ಸಣ್ಣಪುಟ್ಟ ಗಾಯಗಳಾಗಿವೆ. ಅವರನ್ನು ಚಳ್ಳಕೆರೆ ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಬಸ್ ಚಾಲಕನಿಗೆ ಮುಂಜಾನೆ ವೇಳೆ ನಿದ್ದೆಯ ಮಂಪರು ಆವರಿಸಿದ್ದರಿಂದ ಈ ಅವಘಡ ಸಂಭವಿಸಿರಬಹುದು ಎಂದು ಪೊಲೀಸರು ಶಂಕಿಸಿದ್ದಾರೆ.

## ಅನ್ನ–ನೀರಿಗೂ ಹಾಹಾಕಾರ; ಅಪಮೃತ್ಯು ಸಂಖ್ಯೆ ಹೆಚ್ಚಳ


### ಕೋಡಿಮಠದ ಡಾ.ಶಿವಾನಂದ ಶ್ರೀಗಳ ಭಯಾನಕ ಭವಿಷ್ಯ

ಮಂಡ್ಯ: ಹವಾಮಾನ ವೈಪರಿತ್ಯದಿಂದ ಪ್ರಕೃತಿಯಲ್ಲಿ ಭಾರೀ ಏರುಪೇರು ಆಗಲಿದೆ. ಮುಂದಿನ ದಿನಗಳಲ್ಲಿ ದೇಶದ ಜನರಿಗೆ ಅನ್ನ–ನೀರಿಗೂ ಹಾಹಾಕಾರ ಉಂಟಾಗಲಿದೆ ಎಂದು ಕೋಡಿಮಠ ಶ್ರೀಗಳು ಭಯಾನಕ ಭವಿಷ್ಯ ನುಡಿದಿದ್ದಾರೆ.

ತಮ್ಮ ನಿಖರ ಭವಿಷ್ಯ ವಾಣಿಗಳಿಗೆ ಹೆಸರಾಗಿರುವ ಕೋಡಿಮಠ ಸಂಸ್ಥಾನದ ಡಾ.ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿಗಳು, ಇದೀಗ ದೇಶದ ಭವಿಷ್ಯದ ಕುರಿತು ಭಯಾನಕ ಮುನ್ಸೂಚನೆ ನೀಡಿದ್ದಾರೆ. ಮಾಧ್ಯಮಗಳ ಜೊತೆ ಮದ್ದೂರಿನಲ್ಲಿ ಮಾತನಾಡಿದ ಶ್ರೀಗಳು, ಹವಾಮಾನ ವೈಪರಿತ್ಯದಿಂದ ಪ್ರಕೃತಿಯಲ್ಲಿ ಭಾರೀ ಏರುಪೇರು ಉಂಟಾಗಲಿದೆ ಎಂದು ಎಚ್ಚರಿಸಿದರು. ಈ ಹವಾಮಾನ ಬದಲಾವಣೆಯು ದೇಶದ ಹಲವು ಭಾಗಗಳಲ್ಲಿ ಅನ್ನ ಮತ್ತು ನೀರಿಗಾಗಿ ತೀವ್ರ ಹಾಹಾಕಾರ ಸೃಷ್ಟಿಸಲಿದೆ. ಅಪಮೃತ್ಯುಗಳ (ಅಕಾಲಿಕ ಮರಣ) ಸಂಖ್ಯೆ ಹೆಚ್ಚಾಗಲಿದೆ ಎಂಬ ಆಘಾತಕಾರಿ ಭವಿಷ್ಯ ನುಡಿದಿದ್ದಾರೆ.

ಆದರೆ ಕರ್ನಾಟಕಕ್ಕೆ ಯಾವುದೇ ರೀತಿಯ ಸಮಸ್ಯೆ ಇರುವುದಿಲ್ಲ. ಪ್ರತಿಯೊಬ್ಬ ಮನುಷ್ಯನಿಗೂ ಗುರು ಸ್ಥಾನದಲ್ಲಿದ್ದು, ಸರಿ ತಪ್ಪುಗಳನ್ನು ತಿದ್ದಿ ಬುದ್ಧಿ ಸನ್ಮಾರ್ಗದಲ್ಲಿ ನಡೆಸಲಿದ್ದಾರೆ. ಇತ್ತೀಚಿನ ದಿನಗಳಲ್ಲಿ ಜನರಲ್ಲಿ ಸಾಕಷ್ಟು ದೈವಾರಾಧನೆಗಳು ಹೆಚ್ಚಿದ ಪರಿಣಾಮ ನಾಡಿನಲ್ಲಿ ಮಳೆ ಬೆಳೆ ಚೆನ್ನಾಗಿರಲಿದೆ.

ಪುಟ 2ಕ್ಕೆ



#### ಜಾಗತಿಕ ಮಟ್ಟದಲ್ಲಿಯೂ ಅಪಾಯ

ಜಾಗತಿಕ ಮಟ್ಟದಲ್ಲಿಯೂ ಭಾರಿ ಅಪಾಯಗಳು ಸಂಭವಿಸುವ ಲಕ್ಷಣಗಳಿವೆ ಎಂದು ಹೇಳಿರುವ ಶ್ರೀಗಳು, 2026ರ ಸಾಲಿನ ಬಗ್ಗೆ ಮಾರ್ಮಿಕವಾಗಿ ಮಾತನಾಡಿದ್ದಾರೆ. ಜಗತ್ತಿನಾದ್ಯಂತ ಜಲಪ್ರಳಯ ಹಾಗೂ ಅಗ್ನಿ ಅವಘಡಗಳಿಂದ ಲಕ್ಷಾಂತರ ಜನರು ಸಾವನ್ನಪ್ಪಿದ್ದಾರೆ. ಆದರೆ ಅತೃಪ್ತ ಆತ್ಮಗಳಿಗೆ ಸರಿಯಾದ ಸಂಸ್ಕಾರ ನಡೆಯದ ಕಾರಣ ಅವು ಮನುಕುಲಕ್ಕೆ ಕಂಟಕವಾಗಲಿವೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

## ಚೇತನ್ ಚುನಾವಣೆಗೆ ಸ್ಪರ್ಧಿಸಲಿ: ನಿಖಿಲ್




ಮೈಸೂರು: ಚೇತನ್ ಅಹಿಂಸಾಗೆ ತಾಕತ್ತಿದ್ದರೆ ಯಾವುದಾದರೊಂದು ಕ್ಷೇತ್ರದಲ್ಲಿ ಚುನಾವಣೆಗೆ ಸ್ಪರ್ಧಿಸಲಿ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಸವಾಲು ಹಾಕಿದರು.

ಡಾ.ರಾಜಕುಮಾರ್ ಸ್ಮಾರಕಕ್ಕೆ ಸರ್ಕಾರ ನೀಡಿರುವ ಜಾಗದ ಕುರಿತು ನಟ ಚೇತನ್ ಅಹಿಂಸಾ ಮಾಡಿರುವ ಆಕ್ಷೇಪ ವಿಚಾರ ಕುರಿತು ಪ್ರತಿಕ್ರಿಯಿಸಿದ ಅವರು, ಕನ್ನಡದ ಮೇರು ನಟ ಡಾ.ರಾಜಕುಮಾರ್, ವಿಷ್ಣುವರ್ಧನ್, ಅಂಬರೀಶ್ ಕನ್ನಡ ಚಿತ್ರರಂಗಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಇದೇ ಕಾರಣದಿಂದ ಇವರೆಲ್ಲ ನಿಧನರಾದಾಗ ರಾಜ್ಯ ಸರ್ಕಾರ ಸೂಕ್ತ ಗೌರವ ನೀಡಿದೆ. ಡಾ. ರಾಜಕುಮಾರ್ ನಿಧನರಾದ ಸಂದರ್ಭದಲ್ಲಿ ಮುಖ್ಯಮಂತ್ರಿ ಆಗಿದ್ದ ಕುಮಾರಣ್ಣ ಸ್ಮಾರಕ ನಿರ್ಮಾಣಕ್ಕೆ ಜಾಗ ನೀಡಿದರು. ಅಂಬರೀಶಣ್ಣ ನಿಧನರಾದಗಲೂ ಕುಮಾರಣ್ಣ ಸಿಎಂ ಆಗಿದ್ದರು. ಆಗಲೂ ಅಂಬರೀಶ್ ಅವರಿಗೆ ಸೂಕ್ತ ಗೌರವ ನೀಡಿದರು. ಇದರಲ್ಲಿ ತಪ್ಪೇನಿದೆ? ಎಂದರು.

ಚೇತನ್ ಅಹಿಂಸಾ ಟ್ವಿಟರ್ ನಲ್ಲಿ ಅದು ಇದು ಬರೆದುಕೊಂಡಿದ್ದಾರೆ. ಇದರ ಬದಲು ಅವರಿಗೆ ತಾಕತ್ತು ಇದ್ದರೆ ಯಾವುದಾದರೊಂದು ಕ್ಷೇತ್ರದಲ್ಲಿ ಚುನಾವಣೆಗೆ ಸ್ಪರ್ಧಿಸಲಿ ಎಂದು ಹೇಳಿದರು.

## ವಿಚಾರಣೆಗೆ ಹಾಜರಾಗಲ್ಲ: ಮನೀಷ್ ಸಿಸೋಡಿಯಾ

ನವದೆಹಲಿ: ದೆಹಲಿ ಅಬಕಾರಿ ನೀತಿ ಪ್ರಕರಣದಲ್ಲಿ ಆಮ್ ಆದ್ಮಿ ಪಕ್ಷದ ಹಿರಿಯ ನಾಯಕ ಮನೀಷ್ ಸಿಸೋಡಿಯಾ



ಅವರು ನ್ಯಾಯಮೂರ್ತಿ ಸ್ವರ್ಣ ಕಾಂತ ಶರ್ಮಾ ಅವರ ನ್ಯಾಯಪೀಠದ ಮುಂದೆ ಹಾಜರಾಗುವುದಿಲ್ಲ ಎಂದು ಘೋಷಿಸಿದ್ದಾರೆ.

ಈ ನಿರ್ಧಾರವನ್ನು ಸಿಸೋಡಿಯಾ ಅವರು ಅಧಿಕೃತ ಪತ್ರದ ಮೂಲಕ ತಿಳಿಸಿದ್ದಾರೆ, ತಮ್ಮ ಪರವಾಗಿ ಯಾವುದೇ ವಕೀಲರೂ ಹಾಜರಾಗುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

ಈ ಪ್ರಕರಣದಲ್ಲಿ ನ್ಯಾಯ ಸಿಗುವ ನಿರೀಕ್ಷೆ ಇಲ್ಲ ಎಂದು ಹೇಳಿದ್ದು, ಇನ್ನು ಮುಂದೆ ಸತ್ಯಾಗ್ರಹದ ಮಾರ್ಗವನ್ನು ಅನುಸರಿಸುವುದಾಗಿ ತಿಳಿಸಿದ್ದಾರೆ.

ಪುಟ 2ಕ್ಕೆ

## ವೋಟಿಗಾಗಿ ಉಗ್ರರನ್ನು ಬ್ರದರ್ ಅನ್ನುವರಿಗೆ ಸಿಎಂ ಪಟ್ಟದ ಆಸೆ!

### ಡಿ.ಕೆ.ಶಿವಕುಮಾರ್ ವಿರುದ್ಧ ಆರ್.ಅಶೋಕ್ ವಾಗ್ದಾಳಿ

ಬೆಂಗಳೂರು: ಉಗ್ರ ಚಟುವಟಿಕೆಯಲ್ಲಿ ತೊಡಗಿಕೊಂಡವರನ್ನು ನಾಲ್ಕು ವೋಟಿಗೋಸ್ಕರ ಬ್ರದರ್ಸ್ ಎಂದು ಸಮರ್ಥನೆ ಮಾಡಿಕೊಳ್ಳುವ ಸ್ವಾರ್ಥಿಗಳು ಈಗ ನಾಡಿನ ಮುಖ್ಯಮಂತ್ರಿ ಆಗಲು ಹೊರಟಿರುವುದು ರಾಜ್ಯದ ದುರಂತ ಎಂದು ವಿರೋಧ ಪಕ್ಷದ ನಾಯಕ ಆರ್.ಅಶೋಕ್ ಕಿಡಿಕಾರಿದ್ದಾರೆ.



ಮಂಗಳೂರು ಕುಕ್ಕರ್ ಬಾಂಬ್ ಸ್ಫೋಟವನ್ನು ಕೇವಲ ಡೈವರ್ಶನ್ ಪಾಲಿಟಿಕ್ಸ್ ಎಂದು ಲೇವಡಿ ಮಾಡಿ ಉಗ್ರರ ಪರ ನಿಂತಿದ್ದ ಡಿ.ಕೆ.ಶಿವಕುಮಾರ್ ಮತ್ತು ಕಾಂಗ್ರೆಸ್ ನಾಯಕರಿಗೆ ಈಗ ಸತ್ಯದ ದರ್ಶನವಾಗಿದೆ ಎಂದು ಅವರು ಎಕ್ಸ್ ನಲ್ಲಿ ಪೋಸ್ಟ್ ಮಾಡಿ ಟೀಕಿಸಿದ್ದಾರೆ. ಕುಕ್ಕರ್ ಬಾಂಬ್ ಸ್ಫೋಟ ಪ್ರಕರಣದ ಉಗ್ರ ಶಾರೀಕ್‌ನ ಕೃತ್ಯ ಸಾಬೀತಾಗಿದೆ. ಎನ್‌ಐಎ ನ್ಯಾಯಾಲಯ ಆತನಿಗೆ 10 ವರ್ಷಗಳ ಕಠಿಣ ಶಿಕ್ಷೆ ವಿಧಿಸಿದೆ. ರಾಷ್ಟ್ರೀಯ ಭದ್ರತೆಯಂತಹ ಗಂಭೀರ


ಪುಟ 2ಕ್ಕೆ

## 8 ಸಾವಿರ ಪೊಲೀಸರ ನೇಮಕಾತಿ

### ಒಳಮೀಸಲಾತಿ ನಿಯಮದಡಿ ನೇಮಕ: ಡಾ.ಜಿ.ಪರಮೇಶ್ವರ್



ಕಲಬುರಗಿ: ಒಳಮೀಸಲಾತಿ ವಿವಾದ ಬಗೆಹರಿದಿರುವುದರಿಂದ ಒಂದು ವಾರದಲ್ಲಿ 8 ಸಾವಿರ ಪೊಲೀಸ್ ಕಾನ್‌ಸ್ಟೆಬಲ್‌ಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದರು.



ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿ ಯಲ್ಲಿ ಮಾತನಾಡಿದ ಅವರು, 545 ಪಿಎಸ್‌ಐಗಳು ಇಲಾಖೆಗೆ ಸೇರ್ಪಡೆಯಾಗಿದ್ದಾರೆ. ಹೊಸದಾಗಿ 600 ಪಿಎಸ್‌ಐಗಳನ್ನು ನೇಮಕ ಮಾಡಿಕೊಳ್ಳಲಾಗುವುದು. ಖಾಲಿ ಇರುವ ಹುದ್ದೆಗಳ ಪೈಕಿ 8 ಸಾವಿರ ಕಾನ್‌ಸ್ಟೆಬಲ್‌ಗಳ ನೇಮಕಾತಿ ಶೀಘ್ರವೇ ನಡೆಯಲಿದೆ. 56,834 ಹುದ್ದೆಗಳನ್ನು ನೇಮಕ ಮಾಡಿಕೊಳ್ಳುವುದಾಗಿ ಈಗಾಗಲೇ ಮುಖ್ಯಮಂತ್ರಿ ಪ್ರಕಟಿಸಿದ್ದಾರೆ. ಅದರಲ್ಲಿ ಕಾನ್‌ಸ್ಟೆಬಲ್ ಹುದ್ದೆಗಳೂ ಸೇರಿವೆ ಎಂದು ಹೇಳಿದರು.

ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಅಗತ್ಯಕ್ಕೆ ತಕ್ಕಂತೆ ಹೊಸ ಪೊಲೀಸ್ ಠಾಣೆಗಳನ್ನು ಆರಂಭಿಸಲಾಗುವುದು. ಪ್ರಸಕ್ತ ವರ್ಷ ರಾಜ್ಯದಲ್ಲಿ 12 ಪೊಲೀಸ್ ಠಾಣೆಗಳನ್ನು ಆರಂಭಿಸಲಾಗುವುದು ಎಂದು ತಿಳಿಸಿದರು.

#### ಸೈಬರ್ ಅಪರಾಧ ಹೆಚ್ಚಳ: ಡಿಜಿಪಿ ಹುದ್ದೆ ಸೃಷ್ಟಿ

ರಾಜ್ಯದಲ್ಲಿ ಡಿಜಿಟಲ್ ಅರೆಸ್ಟ್ ಹೆಸರಿನಲ್ಲಿ ಕೋಟ್ಯಂತರ ರೂಪಾಯಿ ವಂಚನೆ ಮಾಡುವ ಪ್ರಕರಣಗಳ ಬಗ್ಗೆ ಇಲಾಖೆ ಗಂಭೀರವಾಗಿ ತನಿಖೆ ನಡೆಸುತ್ತಿದೆ. ಅದಕ್ಕಾಗಿಯೇ ಸೈಬರ್ ಅಪರಾಧಗಳ ಮೇಲ್ವಿಚಾರಣೆಗಾಗಿ ಡಿಜಿಪಿ ಹುದ್ದೆಯನ್ನು ಸೃಷ್ಟಿಸಲಾಗಿದೆ. 24 ಸಾವಿರ ಪ್ರಕರಣಗಳ ಪೈಕಿ 10 ಸಾವಿರ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ಪೊಲೀಸರಿಗೂ ಸೈಬರ್ ಅಪರಾಧಗಳ ಬಗ್ಗೆ ತಾಂತ್ರಿಕ ತರಬೇತಿ ನೀಡಲಾಗುತ್ತಿದೆ ಎಂದು ಸಚಿವ ಪರಮೇಶ್ವರ್ ಮಾಹಿತಿ ನೀಡಿದರು. ಸಚಿವರು ತಮ್ಮ ಇಲಾಖೆ ಕೆಲಸಕ್ಕೆ ದೆಹಲಿಗೆ ಹೋದಾಗ ಎಐಸಿಸಿ ಕಚೇರಿಗೂ ಭೇಟಿ ಕೊಡುತ್ತಾರೆ. ಕಾಂಗ್ರೆಸ್ ಕಚೇರಿ ನಮ್ಮ ಪಾಲಿಗೆ ದೇವಸ್ಥಾನವಿದ್ದಂತೆ. ಇಲಾಖೆ ಕೆಲಸದ ಜೊತೆಗೆ ರಾಜಕೀಯ ಮಾಡುವುದರಲ್ಲಿ ತಪ್ಪೇನಿದೆ? ಎಂದು ಪ್ರಶ್ನಿಸಿದರು.

## ಮೈಸೂರು ಸ್ಯಾಂಡಲ್‌'ಗೆ 507 ಕೋಟಿ ಲಾಭ

### 2025–26ನೇ ಸಾಲಿನಲ್ಲಿ 2,016 ಕೋಟಿ ರೂ. ಐತಿಹಾಸಿಕ ವಹಿವಾಟು

ಬೆಂಗಳೂರು: 110 ವರ್ಷಗಳ ಇತಿಹಾಸವಿರುವ ಸರ್ಕಾರಿ ಸ್ವಾಮ್ಯದ ಕರ್ನಾಟಕ ಸಾಬೂನು ಮತ್ತು ಮಾರ್ಜಕಗಳ ನಿಯಮಿತ (ಮೈಸೂರು ಸ್ಯಾಂಡಲ್) 2025–26ನೇ ವರ್ಷದಲ್ಲಿ ಮೊದಲ ಬಾರಿಗೆ 2,016 ಕೋಟಿ ರೂ. ವಹಿವಾಟು ನಡೆಸಿ 507 ಕೋಟಿ ರೂ. ಲಾಭ ಗಳಿಸಿದೆ.

ಮೈಸೂರು ಸ್ಯಾಂಡಲ್ ಸಂಸ್ಥೆಯ ಪಾಲಿಗೆ ಇದು ಚಾರಿತ್ರಿಕ ಮೈಲುಗಲ್ಲು. ಸಾರ್ವಜನಿಕ ಉದ್ದಿಮೆಗಳ ಸಾಧನೆಯಲ್ಲಿ ಕಿರೀಟ ಪ್ರಾಯವಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ತಿಳಿಸಿದರು. ಸಂಸ್ಥೆಯ ಅಪೂರ್ವ ಸಾಧನೆಯ ಹಿನ್ನೆಲೆಯಲ್ಲಿ ಮಂಗಳವಾರ ಆಯೋಜಿಸಿದ್ದ ಮೈಸೂರು ಸ್ಯಾಂಡಲ್ ಸಾಧನೆಯ ಶಿಖರ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಸಂಸ್ಥೆಯು ಮೊದಲ ಒಂದು ಸಾವಿರ ಕೋಟಿ ರೂ.ಗಳ ವಹಿವಾಟನ್ನು ತಲುಪಲು 105 ವರ್ಷ ತೆಗೆದುಕೊಂಡಿತ್ತು. ಆದರೆ, ಅಲ್ಲಿಂದ 2 ಸಾವಿರ ಕೋಟಿ ರೂ. ವಹಿವಾಟನ್ನು ಕೇವಲ ನಾಲ್ಕು ವರ್ಷಗಳಲ್ಲಿ ತಲುಪಿದೆ. ಅದರಲ್ಲೂ 2022–23 ರಲ್ಲಿ 1,375 ಕೋಟಿ ರೂ. ವಹಿವಾಟು ನಡೆಸಿದ್ದ ಸಂಸ್ಥೆಯು, ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಕಳೆದ ಮೂರು ವರ್ಷಗಳಲ್ಲಿ 2,016 ಕೋಟಿ ರೂ. ತಲುಪಿದೆ. ಇಷ್ಟು ಅಲ್ಪಾವಧಿಯಲ್ಲಿ ಕೆ.ಎಸ್.ಡಿ.ಎಲ್ ವಹಿವಾಟು 641 ಕೋಟಿ ರೂ.ಗಳನ್ನು ಹೆಚ್ಚಳ ಕಂಡಿದೆ

ಪುಟ 2ಕ್ಕೆ





#### 5 ಸಾವಿರ ಕೋಟಿಗೆ ವಿಸ್ತರಣೆ

ಸಂಸ್ಥೆಯ ವಹಿವಾಟನ್ನು 2028ರ ಹೊತ್ತಿಗೆ 3 ಸಾವಿರ ಕೋಟಿ ರೂ. ಮತ್ತು 2030ರ ಹೊತ್ತಿಗೆ 5 ಸಾವಿರ ಕೋಟಿ ರೂ.ಗಳಿಗೆ ಕೊಂಡೊಯ್ಯುವ ಗುರಿ ಇಟ್ಟುಕೊಳ್ಳಲಾಗಿದೆ. ಇದಕ್ಕೆ ಪೂರಕವಾಗಿ ವಿಜಯಪುರದಲ್ಲಿ 50 ಎಕರೆಯಲ್ಲಿ ನೂತನ ಉತ್ಪಾದನಾ ಘಟಕ ಆರಂಭವಾಗಲಿದೆ. ಇದಕ್ಕೆ 229 ಕೋಟಿ ರೂ. ಮಂಜೂರು ಮಾಡಲಾಗಿದೆ ಎಂದು ಕೈಗಾರಿಕಾ ಸಚಿವ ಎಂ.ಬಿ ಪಾಟೀಲ್ ತಿಳಿಸಿದರು.
ಕಳೆದ ಮೂರು ವರ್ಷಗಳಲ್ಲಿ ಸಂಸ್ಥೆಯು ರೈತರಿಂದಲೇ ನೇರವಾಗಿ 174 ಟನ್ ಗಂಧ ಖರೀದಿಸಿದೆ. 6.08 ಕೋಟಿ ರೂ.ಗಳನ್ನು ನೇರ ಪಾವತಿ ಮಾಡಿದೆ. ಬೆಂಗಳೂರು, ಡಾಬಸಪೇಟೆ, ಮೈಸೂರು ಮತ್ತು ಶಿವಮೊಗ್ಗದಲ್ಲಿ ಖಾಲಿ ಜಾಗ ಹೊಂದಿದೆ. ಇವುಗಳ

# ಗ್ಯಾರಂಟಿ: ಫಲಾನುಭವಿಗಳು ವಂಚಿತರಾಗದಿರಲಿ



ಚಾಮರಾಜನಗರ, ರಾಜ್ಯ ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳು ಜನರನ್ನು ತಲುಪುತ್ತಿದ್ದು, ಅರ್ಹ ಫಲಾನುಭವಿಗಳು ಯೋಜನೆಯಿಂದ ವಂಚಿತರಾಗದಂತೆ ಅಧಿಕಾರಿಗಳು ನಿಗಾವಹಿಸಬೇಕು ಎಂದು ಕರ್ನಾಟಕ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಮೈಸೂರು ವಿಭಾಗದ ಉಪಾಧ್ಯಕ್ಷರಾದ ಡಾ. ಪುಷ್ಪ ಅಮರನಾಥ್ ಅವರು ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯ ಸರ್ಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳು ಫಲಾನುಭವಿಗಳಿಗೆ ತಲುಪುತ್ತಿರುವ ಬಗ್ಗೆ ಪರಿಶೀಲಿಸಲು ಜಿಲ್ಲೆಯ ಗ್ಯಾರಂಟಿ ಯೋಜನೆಯ ಉಪಾಧ್ಯಕ್ಷರು ಮುಂದಾಗಬೇಕಿದೆ. ಹೀಗಾಗಿ ಪ್ರತೀ ತಾಲೂಕಿಗು ಉಪಾಧ್ಯಕ್ಷರಿಗೆ ಜವಾಬ್ದಾರಿ ನೀಡಿ ಪೂರ್ಣ ಪ್ರಮಾಣದಲ್ಲಿ ಪರಿಶೀಲಿಸಬೇಕು. ಅರ್ಹ ಫಲಾನುಭವಿಗಳು ಯೋಜನೆಯಿಂದ ಹೊರಗುಳಿಯ ದಂತೆ ನೋಡಿಕೊಳ್ಳಬೇಕು ಎಂದರು ಪ್ರತಿ ಗ್ರಾಮ ಪಂಚಾಯಿತಿಯಲ್ಲೂ ಗ್ರಾಮ ಸಭೆಗಳಲ್ಲಿ ಗ್ಯಾರಂಟಿ ಯೋಜನೆಗಳ ಬಗ್ಗೆ ಪರಿಶೀಲಿಸಬೇಕು. ಎಷ್ಟು ಜನರಿಗೆ ಗ್ಯಾರಂಟಿ ಯೋಜನೆಗಳ ಸೌಲಭ್ಯ ಸಿಗುತ್ತಿದೆ ಎಂಬುದನ್ನು ತಿಳಿದುಕೊಳಬೇಕು. ಯಾವುದಾದರೂ ತೊಡಕುಗಳಿದ್ದಲ್ಲಿ ಪರಿಹರಿಸಬೇಕು ಎಂದು ಉಪಾಧ್ಯಕ್ಷರು ತಿಳಿಸಿದರು.

ಗೃಹಲಕ್ಷ್ಮಿ ಯೋಜನೆ ಪಡೆಯುತ್ತಿರುವ ಕುಟುಂಬದ ಮುಖ್ಯಸ್ಥರು ಮರಣ ಹೊಂದಿದ್ದಲ್ಲಿ ಯೋಜನೆ ಪಡೆಯಬೇಕಿರುವ ಕುಟುಂಬದ ಮುಂದಿನ ಮುಖ್ಯಸ್ಥ ಫಲಾನುಭವಿಯ ಪ್ರಸ್ತಾವನೆಯನ್ನು ಸಲ್ಲಿಸಿ ಆ ಕುಟುಂಬಕ್ಕೆ ಗೃಹಲಕ್ಷ್ಮಿ ಸೌಲಭ್ಯ ತ್ವರಿತವಾಗಿ ತಲುಪುವಂತೆ ಅಧಿಕಾರಿಗಳು ಕ್ರಮವಹಿಸಬೇಕು. ಸರ್ಕಾರದ ಯೋಜನೆಗಳು ಪರಿಣಾಮಕಾರಿಯಾಗಿ ಅನುಷ್ಠಾನವಾಗುವ ನಿಟ್ಟಿನಲ್ಲಿ ನಿರಂತರವಾಗಿ ಗಮನಿಸಬೇಕು ಎಂದು ಕರ್ನಾಟಕ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಮೈಸೂರು ವಿಭಾಗದ ಉಪಾಧ್ಯಕ್ಷರಾದ ಡಾ. ಪುಷ್ಪ ಅಮರನಾಥ್ ಅವರು ತಿಳಿಸಿದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಹೆಚ್.ವಿ. ಚಂದ್ರು, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶೃತಿ, ಮುಖ್ಯ ಯೋಜನಾಧಿಕಾರಿ ಹೊನ್ನರಾಜು, ಸಹಾಯಕ ಯೋಜನಾಧಿಕಾರಿ ಶ್ರೀಕಂಠರಾಜೇ ಅರಸ್, ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮದ ಕಾರ್ಯನಿರ್ವಾಹಕ ಇಂಜಿನಿಯರ್ ಪ್ರದೀಪ್, ಜಿಲ್ಲಾ ಉದ್ಯೋಗಾಧಿಕಾರಿ ಮಹಮ್ಮದ್ ಅಕ್ಬರ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಹೆಚ್.ಆರ್. ಸುರೇಶ್, ಕೆಎಸ್‌ಆರ್ಟಿಸಿ, ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕ ವ್ಯವಹಾರಗಳ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

# ಏ.30ಕ್ಕೆ ಅಂಬೇಡ್ಕರ್ ಜನ್ಮ ದಿನಾಚರಣೆ




ಮೈಸೂರು: ದಲಿತ ಸಂಘರ್ಷ ಸಮಿತಿ ಜಿಲ್ಲಾ ಶಾಖೆಯಿಂದ ಬಿ.ಆರ್.ಅಂಬೇಡ್ಕರ್ 135ನೇ ಜನ್ಮದಿನಾಚರಣೆ ಪ್ರಯುಕ್ತ ಏ.30ರಂದು ಬೆಳಿಗ್ಗೆ 10.30ಕ್ಕೆ ನಗರದ ಎಂಜಿನಿಯರ್‌ಗಳ ಸಂಸ್ಥೆ ಸಭಾಂಗಣದಲ್ಲಿ ಕೆಪಿಎಸ್ ಮ್ಯಾಗ್ನೆಟ್ ಹೆಸರಿನಲ್ಲಿ ಬಡಮಕ್ಕಳ ಶಿಕ್ಷಣ ಕಸಿಯುತ್ತಿರುವ ಸರ್ಕಾರ ವಿಷಯ ಕುರಿತ ವಿಚಾರ ಸಂಕಿರಣ ಆಯೋ ಜಿಸಲಾಗಿದೆ ಎಂದು ಸಂಘಟನಾ ಸಂಚಾಲಕ ಯಡದೊರೆ ಮಹದೇವಯ್ಯ ತಿಳಿಸಿದರು.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಶಿಕ್ಷಣ ಇಲಾಖೆ ನಿವೃತ್ತ ಜಂಟಿ ನಿರ್ದೇಶಕ ಆರ್.ಮಹದೇವಪ್ಪ ಕಾರ್ಯಕ್ರಮ ಉದ್ಘಾಟಿಸುವರು. ಅಖಿಲ ಭಾರತ ಶಿಕ್ಷಣ ಉಳಿಸಿ ಸಮಿತಿ ಉಪಾಧ್ಯಕ್ಷ ವಿ.ಎನ್.ರಾಜಶೇಖರ್ ವಿಷಯ ಮಂಡಿಸುವರು. ಪ್ರೊ.ಆನಂದ, ಎಐಡಿಎಸ್‌ಒ ಜಿಲ್ಲಾಧ್ಯಕ್ಷೆ ಚಂದ್ರಕಲಾ, ಮೈಸೂರು ವಿಶ್ವವಿದ್ಯಾಲಯ ದಲಿತ ವಿದ್ಯಾರ್ಥಿ ಪರಿಷತ್ ಅಧ್ಯಕ್ಷ ಎಚ್.ಪಿ.ವಿಶ್ವಪ್ರಸಾದ್, ಸಮಿತಿ ಜಿಲ್ಲಾ ಸಂಚಾಲಕ ಕೆ.ವಿ.ದೇವೇಂದ್ರ ಪಾಲ್ಗೊಳ್ಳುವರು. ಜಿಲ್ಲಾ ಸಂಚಾಲಕ ಚೋರನಹಳ್ಳಿ ಶಿವಣ್ಣ ಅಧ್ಯಕ್ಷತೆ ವಹಿಸುವರು ಎಂದರು. ಸುದ್ದಿಗೋಷ್ಠಿಯಲ್ಲಿ ಸಮಿತಿ ಜಿಲ್ಲಾ ಖಜಾಂಚಿ ಶಿವಮೂರ್ತಿ ಶಂಕರಪುರ, ವಿವಿಧ ತಾಲ್ಲೂಕು ಸಮಿತಿ ಪದಾಧಿಕಾರಿಗಳಾದ ಸೋಮನಾಯಕ, ಚಿಕ್ಕಲಿಂಗಯ್ಯ, ರವಿಕುಮಾರ್ ಏಚಗಳ್ಳಿ, ಗೋಪಾಲಕೃಷ್ಣ ಇದ್ದರು.

ಮೊದಲ ಪುಟದಿಂದ

## ಒಳ ಮೀಸಲಾತಿ ಜಾರಿ ಆದೇಶ

ಪ್ರವರ್ಗ ಸಿಗೆ ಲಭ್ಯವಾಗುವ ಹುದ್ದೆಗಳಲ್ಲಿ ಮತ್ತು ಶೈಕ್ಷಣಿಕ ಸಂಸ್ಥೆಗಳಲ್ಲಿ ಪ್ರವೇಶಾತಿ ಸೀಟುಗಳಲ್ಲಿ ಶೇ 20ರಷ್ಟನ್ನು ಪರಿಶಿಷ್ಟ ಜಾತಿಗಳಲ್ಲಿನ 59 ಅತ್ಯಂತ ಹಿಂದುಳಿದ ಜಾತಿಗಳಿಗೆ ಮೀಸಲಿರಿಸಲಾಗುವುದು. ಒಂದೊಮ್ಮೆ 59 ಅತ್ಯಂತ ಹಿಂದುಳಿದ ಜಾತಿಗಳಿಗೆ ಸೇರಿದವರು ಲಭ್ಯವಾಗದೇ ಇದ್ದರೆ, ಆ ಹುದ್ದೆಗಳನ್ನು ಹಾಗೂ ಪ್ರವೇಶಾತಿ ಸೀಟುಗಳನ್ನು ಪ್ರವರ್ಗ ಸಿಯಲ್ಲಿರುವ ಇತರೆ ಜಾತಿಗಳಿಗೆ ನೀಡಲಾಗುವುದು ಎಂದು ಆದೇಶದಲ್ಲಿ ಸ್ಪಷ್ಟವಾಗಿ ತಿಳಿಸಲಾಗಿದೆ. ನೇಮಕಾತಿಗಳಲ್ಲಿ ಒಳಮೀಸಲಾತಿ ಜಾರಿಗೊಳಿಸಲು 400 ರೋಸ್ಟರ್ ಬಿಂದುಗಳ ವರ್ತುಲಗಳನ್ನು ಪಾಲಿಸಲಾಗುವುದು. ಯಾವುದೇ ವೃಂದಲ್ಲಿ ಪರಿಶಿಷ್ಟ ಜಾತಿಯ ರೋಸ್ಟರ್ ಬಿಂದುಗಳು ಮೂರಕ್ಕಿಂತ ಕಡಿಮೆ ಲಭ್ಯವಾಗದೇ ಇದ್ದರೆ, ಪರಿಶಿಷ್ಟ ಜಾತಿಗೆ ಮೀಸಲಾದ ಆ ಹುದ್ದೆಗಳನ್ನು ಪರಿಶಿಷ್ಟ ಜಾತಿ (ಸಾಮಾನ್ಯ) ಎಂದು ಪರಿಗಣಿಸಿ ನೇಮಕಾತಿ ಮಾಡಿಕೊಳ್ಳಲಾಗುವುದು ಎಂದು ಆದೇಶದಲ್ಲಿ ವಿವರಿಸಲಾಗಿದೆ.

## ವಿಚಾರಣೆಗೆ ಹಾಜರಾಗಲ್ಲ:

ಮಹಾತ್ಮ ಗಾಂಧೀಜಿ ಅವರ ಅಹಿಂಸಾತ್ಮಕ ಹೋರಾಟದ ಮಾರ್ಗವನ್ನು ಉಲ್ಲೇಖಿಸಿ ಈ ಹೇಳಿಕೆಯನ್ನು ನೀಡಿದ್ದಾರೆ. ಆಮ್ ಆದ್ಮಿ ಪಕ್ಷದ ರಾಷ್ಟ್ರೀಯ ಸಂಚಾಲಕ ಅರವಿಂದ್ ಕೇಜ್ರಿವಾಲ್ ಕೂಡ ಇದೇ ನ್ಯಾಯಪೀಠದ ಮುಂದೆ ವೈಯಕ್ತಿಕವಾಗಿಯೂ ಅಥವಾ ವಕೀಲರ ಮೂಲಕವೂ ಹಾಜರಾಗುವುದಿಲ್ಲ ಎಂದು ಘೋಷಿಸಿದ್ದರು.

ನ್ಯಾಯಮೂರ್ತಿ ಸ್ವರ್ಣ ಕಾಂತಾ ಶರ್ಮಾ ಅವರಿಂದ ತಮ್ಮ ಅರ್ಜಿ ತಿರಸ್ಕೃತವಾದ ಬಳಿಕ ಅವರು ಈ ನಿರ್ಧಾರ ತೆಗೆದುಕೊಂಡಿದ್ದರು. ಕೇಜ್ರಿವಾಲ್ ತಮ್ಮ ಪತ್ರದಲ್ಲಿ, ನ್ಯಾಯಮೂರ್ತಿ ಸ್ವರ್ಣ ಕಾಂತ ಅವರಿಂದ ನ್ಯಾಯ ಸಿಗುವ ನನ್ನ ಭರವಸೆ ಕುಸಿದಿದೆ. ಆದ್ದರಿಂದ, ನಾನು ಮಹಾತ್ಮ ಗಾಂಧಿಯವರ ಸತ್ಯಾಗ್ರಹದ ಮಾರ್ಗವನ್ನು ಅನುಸರಿಸಲು ನಿರ್ಧರಿಸಿದ್ದೇನೆ ಎಂದು ಹೇಳಿದ್ದರು.

ಈ ನಿರ್ಧಾರವು ಆತ್ಮಸಾಕ್ಷಿಯ ವಿಷಯವಾಗಿದೆ ಎಂದು ಹೇಳಿದ್ದ ಅವರು, ಹೈಕೋರ್ಟ್ ನ್ಯಾಯಮೂರ್ತಿಗಳು ತನ್ನ ಅರ್ಜಿಯನ್ನು ವಜಾಗೊಳಿಸಿರುವುದನ್ನು ಪ್ರಶ್ನಿಸಿ ತಾವು ಸುಪ್ರೀಂ ಕೋರ್ಟ್ ಮೊರೆ ಹೋಗುವುದಾಗಿ ತಿಳಿಸಿದ್ದರು.

## ಬ್ರದರ್ ಅನ್ನುವರಿಗೆ ಪಟ್ಟದ ಆಸೆ!

ವಿಚಾರದಲ್ಲೂ ತುಷ್ಟೀಕರಣ ಮತ್ತು ಓಲೈಕೆ ರಾಜಕಾರಣ ಮಾಡುವ ಕಾಂಗ್ರೆಸ್‌ನ ನೈಜ ಮುಖವಾಡ ಕಳಚಿದೆ ಎಂದು ಅವರು ಹೇಳಿದ್ದಾರೆ. ಕಾಂಗ್ರೆಸ್‌ಗೆ ದೇಶದ ಭದ್ರತೆಗಿಂತ ವೋಟ್ ಬ್ಯಾಂಕ್ ರಾಜಕಾರಣವೇ ಮುಖ್ಯವಾಗಿದೆ. ಕಾಂಗ್ರೆಸ್ ಇನ್ನಾದರೂ ಮತಾಂಧರನ್ನು ತಮ್ಮ ಬ್ರದರ್ಸ್ ಎಂದು ಸಮರ್ಥನೆ ಮಾಡಿಕೊಳ್ಳುವುದನ್ನು ಬಿಡಬೇಕಿದೆ ಎಂದು ತಿಳಿಸಿದ್ದಾರೆ.

## ಮೇ 15ಕ್ಕೆ ಡಿಕೆಶಿ ಸಿಎಂ ಆಗೋದು ಫಿಕ್ಸ್

ತಮ್ಮ ಕಷ್ಟಸುಖದ ಜೊತೆಗೆ ರಾಜ್ಯದ ಕೆಲವು ವಿಷಯಗಳ ಕುರಿತು ಚರ್ಚಿಸಲು ಇಬ್ಬರೂ ದೆಹಲಿಗೆ ಹೋಗಿದ್ದಾರೆ ಎಂದು ಹೇಳಿದರು. ನನ್ನ ಕ್ಷೇತ್ರದಲ್ಲಿ ನಾನೇ ಮುಖ್ಯಮಂತ್ರಿ, ನಾನೇ ಸಚಿವ. ಜನರ ನಿರೀಕ್ಷೆಗೆ ತಕ್ಕಂತೆ ಕೆಲಸಗಳನ್ನು ಮಾಡಿಕೊಂಡು ಹೋಗುತ್ತಿದ್ದೇನೆ. ನನಗೆ ಜನರ ಪ್ರೀತಿ ಮತ್ತು ವಿಶ್ವಾಸ ಬಿಟ್ಟರೆ, ಬೇರಾವ ಸ್ಥಾನವೂ ಬೇಡ ಎಂದು ತಾವು ಸಚಿವ ಸ್ಥಾನದ ಆಕಾಂಕ್ಷಿಯೇ ಎಂಬ ಪ್ರಶ್ನೆಗೆ ಅವರು ಉತ್ತರಿಸಿದರು.

## ಅಪಮೃತ್ಯು ಸಂಖ್ಯೆ ಹೆಚ್ಚಳ

ರಾಜ್ಯದ ಜನರು ದೈವಾರಾಧನೆಯ ಮೂಲಕ ಸಮೃದ್ಧಿ ಜೀವನ ನಡೆಸಲಿದ್ದಾರೆ ಎಂದು ಹೇಳಿದ್ದಾರೆ.

## ಮೈಸೂರು ಸ್ಯಾಂಡಲ್'ಗೆ ಲಾಭ

ಎಂದು ಶ್ಲಾಘಿಸಿದರು. ಮೊದಲು ಸಂಸ್ಥೆಯು ಕೇವಲ 34 ಉತ್ಪನ್ನಗಳನ್ನು ಹೊಂದಿತ್ತು. ಮೂರು ವರ್ಷಗಳಲ್ಲಿ ನಾವು 57 ಹೊಸ ಉತ್ಪನ್ನಗಳನ್ನು ಮಾರುಕಟ್ಟೆಗೆ ಬಿಡುಗಡೆ ಮಾಡಿದ್ದೇವೆ. ಈಗ ಒಟ್ಟು 94 ಉತ್ಪನ್ನಗಳಿವೆ. ಯಾವುದೇ ಹೊಸ ನೇಮಕಾತಿ ಇಲ್ಲದೆ, ಯಂತ್ರೋಪಕರಣಗಳ ಖರೀದಿ ಇಲ್ಲದೆ ಇದನ್ನೆಲ್ಲ ಸಾಧಿಸಲಾಗಿದೆ. ಬಂದಿರುವ 507 ಕೋಟಿ ರೂ. ಲಾಭದಲ್ಲಿ ಸರಕಾರಕ್ಕೆ 157 ಕೋಟಿ ರೂ. ಲಾಭಾಂಶ (ಡಿವಿಡೆಂಡ್) ಮತ್ತು ಮುಖ್ಯಮಂತ್ರಿ ಪರಿಹಾರ ನಿಧಿಗೆ 5 ಕೋಟಿ ರೂ. ಹಸ್ತಾಂತರಿಸಲಾಗುವುದು. ಹೋದ ವರ್ಷ 135 ಕೋಟಿ ರೂ. ಕೊಡಲಾಗಿತ್ತು. ಇದರಲ್ಲಿ ಈಗ 22 ಕೋಟಿ ರೂ. ಹೆಚ್ಚಳವಾಗಿದೆ ಎಂದು ಅವರು ವಿವರಿಸಿದರು.

ಸಂಸ್ಥೆಯ ಅಧ್ಯಕ್ಷ ಸಿ ಎಸ್ ಅಪ್ಪಾಜಿ ನಾಡಗೌಡ ಮಾತನಾಡಿ, ಆಸ್ಟ್ರೇಲಿಯಾ ಸೇರಿದಂತೆ ದೇಶ ವಿದೇಶಗಳಿಗೆ ಹೋಗಿ ಸಾಬೂನು ಮಾರಾಟ ವಿಸ್ತರಣೆಗೆ ಪ್ರಯತ್ನ ಮಾಡಿದ್ದೇವೆ. ಆಧುನಿಕ ಮಾರಾಟ ವ್ಯವಸ್ಥೆ ಅಭಿವೃದ್ಧಿಗೆ ಹೆಚ್ಚು ಒತ್ತು ಕೊಟ್ಟಿದ್ದು ಇವತ್ತಿನ ಸಾಧನೆಗೆ ಕಾರಣವಾಯಿತು ಎಂದು ಹೇಳಿದರು.

ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಡಾ.ಪಿಕೆಎಂ ಪ್ರಶಾಂತ್ ಮಾತಮಾಡಿ, ಸಂಸ್ಥೆಯ ನೌಕರರಿಗೆ 4.83 ಕೋಟಿ ರೂಪಾಯಿಯನ್ನು ವೇತನ ಒಪ್ಪಂದದ ಮೂಲಕ ನೀಡಲಾಗಿದೆ. 20 ಕೋಟಿ ರೂಪಾಯಿ ಕ್ಯಾಂಪಸ್ ಸಂರಕ್ಷಣೆ ವಿನಿಯೋಗಿಸಲಾಗಿದೆ ಎಂದು ತಿಳಿಸಿದರು.

## 5 ಸಾವಿರ ಕೋಟಿಗೆ ವಿಸ್ತರಣೆ

ಸದ್ಬಳಕೆಗೆ ನೀಲನಕ್ಷೆ ಸಿದ್ಧಪಡಿಸಲಾಗಿದೆ. ಇದು ಸಾಧ್ಯವಾದರೆ ಸಂಸ್ಥೆಯ ಪಾಲಿಗೆ ಆರ್ಥಿಕ ಹರಿವಿನ ಶಾಶ್ವತ ಸಂಪನ್ಮೂಲವೊಂದು ಸೃಷ್ಟಿಯಾಗಲಿದೆ ಎಂದು ಅವರು ಅಭಿಪ್ರಾಯಪಟ್ಟರು.

ಸಂಸ್ಥೆಯ ಹೆಮ್ಮೆಯ ಉತ್ಪನ್ನವಾದ ಮೈಸೂರು ಸ್ಯಾಂಡಲ್ ಸೋಪ್ ತಯಾರಿಕೆಗೆ ಗಂಧದ ಎಣ್ಣೆಯೇ ಮೂಲವಸ್ತುವಾಗಿದೆ. ಇದರ ಸುಗಮ ಪೂರೈಕೆಗೆ ಸಂಸ್ಥೆಯು ರೈತರೊಂದಿಗೆ ಕೈಜೋಡಿಸಿದ ಗ್ರೋ ಮೋರ್ ಸ್ಯಾಂಡಲ್ ಕಾರ್ಯಕ್ರಮ ರೂಪಿಸಿದೆ. ಇದರಡಿಯಲ್ಲಿ 10 ವರ್ಷಗಳಲ್ಲಿ 10 ಸಾವಿರ ಎಕರೆ ಗಂಧದ ನೆಡುತೋಪು ಬೆಳೆಸಲಾಗುವುದು. ಇದಕ್ಕಾಗಿ ರೈತರಿಗೆ ಪ್ರತಿ ಗಂಧದ ಗಿಡಕ್ಕೆ 3 ವರ್ಷಗಳಿಗೆ 500 ರೂ. ಪ್ರೋತ್ಸಾಹಧನ ನೀಡಲಾಗುವುದು. ಜತೆಗೆ ಬೆಂಗಳೂರಿನ ಜಿಕೆವಿಕೆ ಮತ್ತು ವಿಜಯಪುರದ ಕೃಷಿ ವಿದ್ಯಾಲಯಗಳ ಸಹಯೋಗದಲ್ಲಿ ಶ್ರೀಗಂಧದ ಅಧ್ಯಯನ ಪೀಠ ತೆರೆಯಲಾಗುವುದು ಎಂದು ಪಾಟೀಲ್ ತಿಳಿಸಿದ್ದಾರೆ.

# ನೀರು, ಮೇವಿಗೆ ಅಭಾವವಾಗದಿರಲಿ

### ಎಚ್ಚರವಹಿಸಲು ಡಿಸಿ ಕಟ್ಟುನಿಟ್ಟಿನ ಸೂಚನೆ | ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ

ರಾಮನಗರ: ಜನ ಹಾಗೂ ಜಾನುವಾರು ಗಳಿಗೆ ನೀರಿನ ಕೊರತೆಯಾಗದಂತೆ ಎಲ್ಲಾ ಮುನ್ನೆಚ್ಚರಿಕಾ ಕ್ರಮಗಳನ್ನು ವಹಿಸುವಂತೆ ಜಿಲ್ಲಾಧಿಕಾರಿ ಯಶವಂತ್ ವಿ ಗುರುಕರ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಜಿಲ್ಲಾ ಸರ್ಕಾರಿ ಕಚೇರಿಗಳ ಸಂಕೀರ್ಣದಲ್ಲಿರುವ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು. ಬೇಸಿಗೆಯಿದೆ ಜಾನುವಾರುಗಳಿಗೆ ಮೇವು ಅಭಾವ ಆಗು ವುದು ಬೇಡ ಎಂದು ಅವರು ಸೂಚಿಸಿದ್ದಾರೆ.

ಜಿಲ್ಲೆಯ ಕೆಲವೊಂದು ಕಡೆಗಳಲ್ಲಿ ಖಾಸಗಿ ಟ್ಯಾಂಕರ್‌ಗಳ ಮೂಲಕವೂ ನೀರನ್ನು ಪೂರೈಸಲಾಗುತ್ತಿದೆ. ಅಂತಹ ಸ್ಥಳಗಳಲ್ಲಿ ಬೋರ್‌ವೆಲ್ ಕೊರೆಸುವಂತೆ ಈ ಹಿಂದೆಯೇ ಸೂಚನೆ ನೀಡಲಾಗಿತ್ತು. ಆ ದಿಸೆಯಲ್ಲಿ ಕ್ರಮ ವಹಿಸುವಂತೆ ತಿಳಿಸಿದ ಜಿಲ್ಲಾಧಿಕಾರಿಗಳು ಬೋರ್‌ವೆಲ್ ಕೊರೆಸಲು ಟಾಸ್ಕ್‌ಫೋರ್ಸ್‌ನಿಂದ ಹಣ ಕಡಿಮೆ ಯಾದಲ್ಲಿ ಇತರೆ ಮೂಲದಿಂದ ಒದಗಿಸು ವುದಾಗಿ ತಿಳಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಅನ್ಮೋಲ್ ಜೈನ್, ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಶೇಖರ್, ಜಿಲ್ಲೆಯ ಎಲ್ಲಾ ತಾಲ್ಲೂಕು ತಹಶೀಲ್ದಾರರು, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು ಸಭೆಯಲ್ಲಿದ್ದರು.



### ಟ್ಯಾಂಕರ್ ಮೂಲಕ ನೀರು ಸರಬರಾಜು, ನಿಖರ ಲೆಕ್ಕ ಇಡಿ

ಬೇಸಿಗೆ ಸಂದರ್ಭದಲ್ಲಿ ಬೆಂಗಳೂರು ದಕ್ಷಿಣ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳು ಹಾಗೂ ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿನ ಪಟ್ಟಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗದಂತೆ ವಹಿಸಬೇಕಾದ ವಿವಿಧ ರೀತಿಯ ಮುನ್ನೆಚ್ಚರಿಕಾ ಕ್ರಮಗಳ ಬಗ್ಗೆ ನಿರ್ದೇಶನ ನೀಡಿದ ಅವರು, ಜಿಲ್ಲೆಯ ತಾಲ್ಲೂಕುಗಳಲ್ಲಿನ ಕೆಲವೆಡೆ ಟ್ಯಾಂಕರ್ ಮೂಲಕ ಈಗಾಗಲೇ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ, ಆ ಟ್ಯಾಂಕರ್‌ಗಳಲ್ಲಿ ಸರಬರಾಜು ಮಾಡುವ ಟ್ರಿಪ್‌ಗಳ ನಿಖರ ಲೆಕ್ಕಾಚಾರ ತಿಳಿಯಲು ಅನುಕೂಲವಾಗುವಂತೆ ನೀರಿನ ಟ್ಯಾಂಕರ್‌ಗಳ ಎಲ್ಲಾ ವಾಹನಗಳಿಗೆ ಕೂಡಲೇ ಜಿ.ಪಿ.ಎಸ್ ಅಳವಡಿಸಬೇಕು. ಆಗ ಟ್ರಿಪ್‌ಗಳ ಲೆಕ್ಕಾಚಾರ ನಿಖರವಾಗಿ ತಿಳಿದುಬರಲಿದೆ ಎಂದು ಸೂಚನೆ ನೀಡಿದರು.

### ಸಿಇಒ ಗಮನಕ್ಕೆ ತಂದು ನೂತನ ಕೊಳವೆ ಬಾವಿ ಕೊರೆಯಲು ಸೂಚನೆ

ಅಗತ್ಯವಿರುವ ಸ್ಥಳಗಳಲ್ಲಿ ಕೂಡಲೇ ಬೋರ್‌ವೆಲ್‌ಗಳನ್ನು ಕೊರೆಸಬೇಕು. ಹೊಸದಾಗಿ ಬೋರ್‌ವೆಲ್ ಕೊರೆಯಿಸಬೇಕಾದರೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳ ಗಮನಕ್ಕೆ ತರಬೇಕು. ಮುಖ್ಯವಾಗಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದಲೇ ಬೋರ್‌ವೆಲ್‌ಗಳನ್ನು ಕೊರೆಯಿಸಬೇಕು ಎಂದು ಕಟ್ಟುನಿಟ್ಟಾಗಿ ಸೂಚನೆ ನೀಡಿದರು.

ಕುಡಿಯುವ ನೀರಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಏನೇ ಘಟನೆಗಳು, ಅವಘಡಗಳು, ಸಮಸ್ಯೆಗಳು ಎದುರಾದ ಕೂಡಲೇ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಗಮನಕ್ಕೆ ತರಬೇಕು. ಇದೀಗ ಬೇಸಿಗೆ ಕಾಲವಾದ್ದರಿಂದ ಕುಡಿಯುವ ನೀರನ್ನು ಶೇಖರಿಸುವ ಟ್ಯಾಂಕರ್‌ಗಳನ್ನು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಸ್ವಚ್ಚಗೊಳಿಸಬೇಕು, ಕುಡಿಯುವ ನೀರು ಪೂರೈಸುವ ಮಾರ್ಗದ ಪೈಪ್‌ಗಳನ್ನು ತುಂಡರಿಸದಂತೆ ಗಮನ ಹರಿಸಬೇಕು. ಮುಖ್ಯವಾಗಿ ಈ ಬಗ್ಗೆ ಸಾರ್ವಜನಿಕರ ಗಮನಕ್ಕೆ ತರಬೇಕು. ಇಲ್ಲವಾದಲ್ಲಿ ಮಳೆಗಾಲದಲ್ಲಿ ಕುಡಿಯುವ ನೀರಿಗೆ ಕಲುಷಿತ ನೀರು ಮಿಶ್ರಣಗೊಳ್ಳುವ ಸಾಧ್ಯತೆ ಇರುತ್ತದೆ. ಈ ಕುರಿತು ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಪ್ರಸಕ್ತವಾಗಿ ಜಿಲ್ಲೆಯಲ್ಲಿ 21 ವಾರಗಳಿಗೆ ಆಗುವಷ್ಟು ಜಾನುವಾರುಗಳ ಮೇವು ಲಭ್ಯವಿದ್ದು, ಯಾವುದೇ ರೀತಿಯ ಕೊರತೆ ಇಲ್ಲ ಎಂದು ಪಶುಪಾಲನಾ ಇಲಾಖೆ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದಾಗ ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು ಬೇಸಿಗೆ ಅವಧಿಯಲ್ಲಿ ಜಾನುವಾರುಗಳಿಗೆ ಮೇವು ಅಭಾವವಾಗದಂತೆ ಸಂಗ್ರಹಣೆಗೆ ಆದ್ಯತೆ ನೀಡಬೇಕೆಂದರು.

## ತಕ್ಕ ಪಿಂಚಣಿಗೆ ನೌಕರರ ಒತ್ತಾಯ

ಮೈಸೂರು: ಜೆ.ಕೆ. ಟೈರಸ್ನ ಈಗಿನ ಮತ್ತು ನಿವೃತ್ತ ನೌಕರರ ಸಂಘದ ಸದಸ್ಯರಿಗೆ ಮೂಲ ವೇತನಕ್ಕೆ ತಕ್ಕಂತೆ ಹೆಚ್ಚಿನ ಪಿಂಚಣಿ ನೀಡಬೇಕೆಂದು ಹೈಕೋರ್ಟ್ ಆದೇಶಿಸಿದೆ. ಹೀಗಾಗಿ ಅಂತಹವರು ಸಂಘದ ಸದಸ್ಯರಾಗುವ ಮೂಲಕ ಪ್ರಯೋಜನ ಪಡೆದುಕೊಳ್ಳಲು ಮುಂದಾಗಬೇಕೆಂದು ವಿಕ್ರಾಂತ್ ಟರ?ಸ್ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಎಸ್.ಪಿ. ನಿಂಗೇಗೌಡ ಮನವಿ ಮಾಡಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಮೂಲ ವೇತನಕ್ಕೆ ತಕ್ಕಂತೆ ಹೆಚ್ಚಿನ ಪಿಂಚಣಿ ನೀಡಬೇಕೆಂದು ಕೋರಿ ಸುಪ್ರೀಂ ಕೋರ್ಟ್ಗೆ ಅರ್ಜಿ ಸಲ್ಲಿಸಲಾಗಿತ್ತು. ನಂತರ ಇದಕ್ಕೆ ಪೂರಕವಾಗಿ 2022 ರ ನವೆಂಬರ್‌ನಲ್ಲಿ ಆದೇಶ ಹೊರಡಿಸಿ ದೇಶದ ಎಲ್ಲಾ ಪಿಎಫ್ ಕಚೇರಿಯಿಂದ ಉದ್ಯೋಗಿಗಳು ಮತ್ತು ಉದ್ಯೋಗದಾತರಿಂದ ಜಂಟಿ ಅರ್ಜಿ ಆಹ್ವಾನಿಸಲಾಗಿತ್ತು. ಆದರೆ ಹೆಚ್ಚಿನ ಪಿಂಚಣಿಗೆ ಅರ್ಹರಲ್ಲ ಎಂದು 2025 ರ ಮಾ. 17 ರಂದು ಅರ್ಜಿ ತಿರಸ್ಕರಿಸಲಾಗಿತ್ತು. ಬಳಿಕ ಇದನ್ನು ಪ್ರಶ್ನಿಸಿ ಹೈಕೋರ್ಟ್ ಮೊರೆ ಹೋದ ಬಳಿಕ ತಮ್ಮಂತೆ ಆದೇಶ ಬಂದಿದೆ. ವಿಕ್ರಾಂತ್ ಟರ?ಸ್ ಕಾರ್ಖಾನೆಯ ನಿವೃತ್ತ ನೌಕರರು ಮೈಸೂರು, ಹಾಸನ, ಮಂಡ್ಯ ಮೊದಲಾದ ಜಿಲ್ಲೆಗಳಲ್ಲಿ ಹಂಚಿ ಹೋಗಿದ್ದು, ಅವರು ಹೈಕೋರ್ಟ್ ಆದೇಶ ವೀಕ್ಷಿಸಬಯಸಿದಲ್ಲಿ ರಿಟ್ ಅರ್ಜಿ ಸಂಖ್ಯೆ 36597– 2025 (ಎಲ್–ಪಿಎಫ್) ನೋಡಬಹುದಾಗಿದೆ ಎಂದರು. ಇನ್ನಿತರ ಪದಾಧಿಕಾರಿಗಳಾದ ಎನ್. ರಾಜಣ್ಣ, ಮಹಾದೇವಪ್ಪ, ಕಿರಣ್, ಎ.ಟಿ. ಗೋವಿಂದರಾಜು ಇದ್ದರು.



## ಸಮುದಾಯದ ಸಂಸ್ಕೃತಿ ಜೀವಂತ ಉಳಿಸುವುದು ಅಗತ್ಯ



ಮೈಸೂರು: ಒಂದು ಸಮುದಾಯದ ಸಂಸ್ಕೃತಿಯ ಜೀವಂತ ಮಾದರಿಗಳು ನಾಶವಾಗುವ ಅಪಾಯ ಇದೆ. ಅದನ್ನು ಪರಿಚಯಿಸುವ ತುರ್ತು ಇದೆ. ಆ ತುರ್ತನ್ನು ದೇವನೂರು ಮಹಾದೇವ ಸವಾಲಾಗಿ ಸ್ವೀಕರಿಸಿ ತಣ್ಣಗೆ ಅಭಿವ್ಯಕ್ತಿಸುವ ರೀತಿ ಅದು ಅನನ್ಯವಾದದ್ದು ಎಂದು ಸಂಸ್ಕೃತ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಡಾ.ಪದ್ಮಶೇಖರ್ ಹೇಳಿದರು.

ನಗರದ ಮಾನಸ ಗಂಗೋತ್ರಿಯ ಕುವೆಂಪು ಕನ್ನಡ ಅಧ್ಯಯನ ಸಂಸ್ಥೆಯ ಬಿ ಎಂಶ್ರೀ ಸಭಾಂಗಣದಲ್ಲಿ ಮಂಗಳವಾರ ನಡೆದ ಸಾಹಿತ್ಯ ಸಹವಾಸದ ಕಾರ್ಯಕ್ರಮವದ ಅಂಗವಾಗಿ ಹಿರಿಯ ಸಾಹಿತಿಗಳಾದ ತ್ರಿವೇಣಿ, ಕೆ.ಎಸ್. ನರಸಿಂಹಸ್ವಾಮಿ ಮತ್ತು ದೇವನೂರು ಮಹಾದೇವ ಅವರ ಕೊಡುಗೆಗಳನ್ನು ಕುರಿತಾದ ಸಾಹಿತ್ಯದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಪ್ರಜಾಪ್ರಭುತ್ವದ ಇವತ್ತಿನ ಹೊತ್ತಿನಲ್ಲಿಯೂ ಕೂಡ ಅದನ್ನು ಬಳಸುವ ದಾರಿಯಲ್ಲಿ ವಿವಿಧ ಸ್ವರೂಪದಲ್ಲಿ ಜೀವಂತವಾಗಿಸಿರುವ ಶೋಽಸುವ ಕೆಲಸವನ್ನು ಮಾಡಿಕೊಂಡು ದೇವನೂರು ಮಹಾದೇವ ಅವರು ಮಾಡಿಕೊಂಡು ಬರುತ್ತಿದ್ದಾರೆ. ಅಕ್ಷರ ಕಲಿತ ತಳ ಸಮುದಾಯದ ಮಕ್ಕಳು ತಮ್ಮ ಸಮುದಾಯಗಳಿಗೆ ಬಿಡುಗಡೆಗೊಳ್ಳಲು ಬಯಸಬೇದಾಂತಹ ಎಚ್ಚರದ ಬಗ್ಗೆ ಒಂದು ನಿರ್ದೇಶನ ಕೊಟ್ಟಿದ್ದಾರೆ ಎಂದು ತಿಳಿಸಿದರು.

ದೇವನೂರು ಮಹಾದೇವ ಅವರು ಬರೆದಿದ್ದು ಕಡಿಮೆ. ಆದರೂ ಅವೆಲ್ಲವೂ ಸಾಹಿತ್ಯ ಲೋಕದಲ್ಲಿ ವಾದ, ವಿವಾದ, ಚರ್ಚೆಗೆ ಆಹ್ವಾನಿಸಿತ್ತೆಂದರೆ ಆಯಾ ಕಾಲ ಘಟ್ಟದಲ್ಲಿ ಓದಿದವರಿಗೆ ಹಾಗೂ ಇದ್ದವರಿಗೆ ಅದು ಅರ್ಥವಾಗುತ್ತದೆ. ಶತ ಶತಮಾನಗಳಿಂದ ದಲಿತರ ಸಂಕಷ್ಟಗಳಿಗೆ ದನಿಯಾಗುವ ದೇವನೂರು ಮಹಾದೇವ ಶೋಷಿತ ವರ್ಗದ ನೋವು, ಮಾನ, ಅಪಮಾನ ಹಾಗೂ ಸಂಕಟಗಳನ್ನು ತಾತ್ವಿಕ ಗ್ರಹಿಕೆಯಾಗಿಸಿಕೊಂಡು ಅಭಿವ್ಯಕ್ತಿಯನ್ನು ಕೊಡುತ್ತಿದ್ದಾರೆ ಎಂದರು. ಸಾಹಿತಿ ತ್ರಿವೇಣಿ ಸಾಮಾಜಿಕ ಮತ್ತು ಸಾಂಸ್ಕೃತಿಕ ಎಚ್ಚೆತ್ತ ತಿಳುವಳಿಕೆಯಲ್ಲಿ ಕಥೆ ಗಳನ್ನು, ಕಾದಂಬರಿಗಳನ್ನು ಬರೆಯುತ್ತಾರೆ. ಮನಃ ಶಾಸ್ತ್ರಿಯ ನೆಲೆಯಲ್ಲಿ ಒಂದು ಹೆಣ್ಣಿನ ಒಳ ನೋಟಗಳನ್ನು, ವ್ಯಕ್ತಿಗತ ಅಪೇಕ್ಷೆಗಳನ್ನು, ಸಾಮಾಜಿಕ, ಸಾಂಸಾರಿಕ ತುಮುಲಗಳನ್ನು ಸಮಸ್ಯೆ ಗಳನ್ನು ಕೇಂದ್ರವಾಗಿಟ್ಟುಕೊಂಡು ಉದ್ದೇಶ ಪೂರ್ವಕವಾಗಿ ವರ್ತಮಾನಗಳ ಆಗುಹೋಗು ಗಳ ಬಗ್ಗೆ ಬರೆದಿದ್ದು ಎಂದರು. ಅಜೀಂ ಪ್ರೇಮ್‌ಜಿ ಫೌಂಡೇ ಷನ್ ಮುಖ್ಯ ಸಂವಹನಾಧಿಕಾರಿ ಸುದೀಶ್ ವೆಂಕಟೇಶ್, ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾನಿಲಯದ ವಿಮರ್ಶಕರು ಮತ್ತು ಪ್ರಾಧ್ಯಾಪಕರಾದ ಡಾ.ಎಂ.ಎಸ್.ಆಶಾದೇವಿ, ಕನ್ನಡ ಕುವೆಂಪು ಅಧ್ಯಯನ ಸಂಸ್ಥೆಯ ನಿರ್ದೇಶಕಿ ಪ್ರೊ.ಎನ್.ಕೆ. ಲೋಲಾಕ್ಷಿ ಸೇರಿ ಇತರರು ಉಪಸ್ಥಿತರಿದ್ದರು.

### ಮಾಜಿ ಸಚಿವೆ ರಾಣಿ ಸತೀಶ್ ಆಕ್ರೋಶ

# ಬಿಜೆಪಿ ನಾಯಕರ ಅಪಪ್ರಚಾರ ಸರಿಯಲ್ಲ



ಮೈಸೂರು:ಸ್ಥಳೀಯ ಸಂಸ್ಥೆಗಳಲ್ಲಿ ಮಹಿಳೆಯ ರಿಗೆ ಮೀಸಲಾತಿ ಸೌಲಭ್ಯ ಕಲ್ಪಿಸಿದ ಕಾಂಗ್ರೆಸ್ ಪಕ್ಷ ಮಹಿಳಾ ಮೀಸಲಾತಿ ವಿರೋಧಿ ಎಂದು ಬಿಜೆಪಿ ನಾಯಕರು ಅಪಪ್ರಚಾರ ಮಾಡುತ್ತಿದ್ದಾರೆ ಎಂದು ಮಾಜಿ ಸಚಿವೆ ರಾಣಿ ಸತೀಶ್ ಆಕ್ರೋಶ ವ್ಯಕ್ತಪಡಿಸಿದರು.

ಮೈಸೂರಿನ ಕಾಂಗ್ರೆಸ್ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಎಂದೂ ಮಹಿಳಾ ಮೀಸಲಾತಿಗೆ ವಿರುದ್ಧವಾಗಿಲ್ಲ. ಆದರೆ ಅವೈಜ್ಞಾನಿಕವಾಗಿ ಕ್ಷೇತ್ರ ಮರು ವಿಂಗಣೆ ಮಾಡಿ, ಇದರ ಆಧಾರದ ಮೇಲೆ ಮಹಿಳಾ ಮೀಸಲಾತಿ ಕಲ್ಪಿಸುತ್ತಿರುವ ಕೇಂದ್ರ ಸರ್ಕಾರದ ತೀರ್ಮಾನಕ್ಕೆ ವಿರುದ್ಧವಿದೆ ಎಂದು ಹೇಳಿದರು.

ಮಹಿಳಾ ಮೀಸಲಾತಿಗೆ ಸೋಲಾಗುತ್ತದೆ ಎಂಬ ಕಟು ಸತ್ಯ ತಿಳಿದಿದ್ದರೂ ಬಿಜೆಪಿ ಸರ್ಕಾರ ವಿಶೇಷ ಅಧಿವೇಶನ ಕರೆದು ವಿಧೇ ಯಕ ಮಂಡಿಸಿತು. ಒಳ ಮೀಸಲಾತಿ ಕಲ್ಪಿಸದಿ ರುವುದು ಸೇರಿ ಹಲವು ಲೋಪಗಳಿರುವ ಕಾರಣ ಕಾಂಗ್ರೆಸ್ ಇದನ್ನು ವಿರೋಧಿಸಿ ಮತ ಹಾಕಿತು. ಇದನ್ನೇ ಮಹಿಳಾ ಮೀಸಲಾತಿ ವಿರೋಧಿ ಎಂದು ಕಾಂಗ್ರೆಸ್ ವಿರುದ್ಧ ಬಿಜೆಪಿ ನಾಯಕರು ಬಿಂಬಿಸುತ್ತಿದ್ದಾರೆಂದು ಆಪಾದಿಸಿದರು. ಪಂಚ ರಾಜ್ಯಗಳ ಚುನಾವಣೆಯಲ್ಲಿ ಕಾಂಗ್ರೆಸ್ ಮಹಿಳಾ ವೀಸಲಾತಿ ವಿರೋಧಿ ಎಂದು ಅಪ ಪ್ರಚಾರ ಮಾಡುತ್ತಿರುವ ಕಾರಣ ನಮ್ಮ ಪಕ್ಷಕ್ಕೆ ಸಹಜವಾಗಿಯೇ ಸ್ವಲ್ಪ ಮಟ್ಟಿಗೆ ಪರಿಣಾಮ ಬೀರುತ್ತದೆ. ಆದರೆ, ಬಿಜೆಪಿಯ ಇಂತಹ ರಾಜಕೀಯ ತಂತ್ರಗಾರಿಕೆ ಇನ್ನು ಮುಂದೆ ನಡೆಯುವುದಿಲ್ಲ ಎಂದು ಎಚ್ಚರಿಸಿದರು.

ಬಿಜೆಪಿ ನಾಯಕರು ಮನುವಾದಿಗಳಾ ಗಿದ್ದು, ಎಂದಿಗೂ ಮಹಿಳೆಯರ ಪರವಾಗಿಲ್ಲ. ಪಂಚರಾಜ್ಯಗಳ ಚುನಾವಣೆಯ ರಾಜಕೀಯ ಲಾಭಕ್ಕಾಗಿ ಈ ವಿಧೇಯಕ ಮಂಡಿಸಿದ್ದಾರೆ. ಇದನ್ನು ದೇಶದ ಜನರು ಅರ್ಥ ಮಾಡಿಕೊಳ್ಳಬೇಕು ಎಂದರು.

ಇದೇ ವೇಳೆ ಮಾತನಾಡಿದ ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಉಪಾಧ್ಯಕ್ಷ ಪುಷ್ಪ ಅಮರನಾಥ್, ಇದುವರೆವಿಗೂ ಬಿಜೆಪಿ ಪಕ್ಷದ ಮಹಿಳಾ ಕಾರ್ಯಕರ್ತರು ಮನೆಯಲ್ಲಿ ಕುಳಿತಿದ್ದರು. ಆದರೆ, ಈಗ ಕಾಂಗ್ರೆಸ್ ಮಹಿಳಾ ಮೀಸಲಾತಿ ವಿರೋಧಿ ಎಂದು ಅಪಪ್ರಚಾರ ಮಾಡಲು ಬೀದಿಗಳಿದಿದ್ದಾರೆ ಟೀಕಿಸಿದರು.

ಬಿಜೆಪಿ ಮಹಿಳಾ ಮೀಸಲಾತಿ ವಿರೋಧಿ ಎಂದು ಸಾಬೀತು ಮಾಡಲು ನಾವು ಬಹಿ ರಂಗ ಚರ್ಚೆಗೆ ಸಿದ್ದರಿದ್ದೇವೆ. ಬಿಜೆಪಿ ನಾಯ ಕರು ಸಿದ್ದರಿದ್ದಾರೆಯೇ ಎಂದು ಸವಾಲು ಹಾಕಿದರು. ಮಾಜಿ ಮೇಯರ್ ಗಳಾದ ಮೋದಾಮಣಿ, ಪುಷ್ಪಲತಾ ಚಿಕ್ಕಣ್ಣ, ಮಾಜಿ ಉಪ ಮೇಯರ್ ಪುಷ್ಪವಲ್ಲಿ, ಮುಖಂಡರಾದ ವೀಣಾ, ಲತಾ ಸೇರಿದಂತೆ ಇತರರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ರಾಜ್ಯ ಮಟ್ಟದ ಚೆಸ್ ಚಾಂಪಿಯನ್ ಶಿಪ್‌ಗೆ ತೆರೆ

## ಅದ್ಧೂರಿ ಸಮಾರೋಪದೊಂದಿಗೆ ಸಂಪನ್ನಗೊಂಡ 13 ವರ್ಷದೊಳಗಿನ ಚೆಸ್ ಚಾಂಪಿಯನ್ ಶಿಪ್

ಮೈಸೂರು:ದಾಸಪ್ರಕಾಶ್ ಹೋಟೆಲ್ನಲ್ಲಿ ಕಳೆದ ಮೂರು ದಿನಗಳಿಂದ ನಡೆಯುತ್ತಿದ್ದ ಕರ್ನಾಟಕ ರಾಜ್ಯ ಮಟ್ಟದ 13 ವರ್ಷದೊಳಗಿನವರ ಮುಕ್ತ ಮತ್ತು ಬಾಲಕಿಯರ ಚೆಸ್ ಚಾಂಪಿಯನ್ಶಿಪ್–2026 ಅದ್ಧೂರಿಯಾಗಿ ಸಮಾರೋಪಗೊಂಡಿದೆ.

ರಾಜ್ಯದ 17 ಜಿಲ್ಲೆಗಳಿಂದ ಒಟ್ಟು 394 ಬಾಲ ಪ್ರತಿಭೆಗಳು ಈ ಕೂಟದಲ್ಲಿ ಭಾಗವಹಿಸಿದ್ದರು. ಮುಕ್ತ ವಿಭಾಗದಲ್ಲಿ 260 ಹಾಗೂ ಬಾಲಕಿಯರ ವಿಭಾಗದಲ್ಲಿ 134 ಸ್ಪರ್ಧಿಗಳು ತಮ್ಮ ಚಾಣಾಕ್ಷತನ ಮೆರೆದರು.



**ವಿಜೇತರ ವಿವರ**

**ಮುಕ್ತ ವಿಭಾಗ ಚಾಂಪಿಯನ್:**

ಆದ್ಯ ಗೌಡ (ಬೆಂಗಳೂರು, 8 ಪಾಯಿಂಟ್ಸ್), ರನ್ನರ್–ಅಪ್: ಇಶಾನ್ ಭನ್ಸಾಲಿ (ಬೆಂಗಳೂರು, 7.5 ಪಾಯಿಂಟ್ಸ್)

**ವಿಶೇಷ ಸಾಧನೆ**

ಬಾಲಕಿಯರಿಗಾಗಿ ಪ್ರತ್ಯೇಕ ವಿಭಾಗವಿದ್ದರೂ ಸಹ, ಬಾಲಕಿ ಆದ್ಯ ಗೌಡ ಮುಕ್ತ ವಿಭಾಗದಲ್ಲಿ ಸ್ಪರ್ಧಿಸಿ ಬಾಲಕರನ್ನು ಹಿಂದಿಕ್ಕಿ ಸಮಗ್ರ ಚಾಂಪಿಯನ್ ಆಗಿ ಹೊರಹೊಮ್ಮಿದರು.

**ಬಾಲಕಿಯರ ವಿಭಾಗ**

**ಚಾಂಪಿಯನ್**

ಶ್ರೇಯಾ ರಾಜೇಶ್ (ಬೆಂಗಳೂರು ನಗರ, 7.5 ಪಾಯಿಂಟ್ಸ್)

**ರನ್ನರ್–ಅಪ್**

ಇಂದುಶೀತಲ (ಬೆಂಗಳೂರು ನಗರ, 7.5 ಪಾಯಿಂಟ್ಸ್) (ಶ್ರೇಯಾ ರಾಜೇಶ್ ಅವರು ಟೈ–ಬ್ರೇಕರ್ ನಿಯಮದ ಆಧಾರದ ಮೇಲೆ ಪ್ರಥಮ ಸ್ಥಾನ ಪಡೆದರು.) ಬಹುಮಾನ ವಿತರಣಾ ಸಮಾರಂಭದಲ್ಲಿ ಮೈಸೂರು ಚೆಸ್ ಸೆಂಟರ್ ಸ್ಥಾಪಕ ನಾಗೇಂದ್ರ ಮುರಳೀಧರ್, ಹೊಸ ಮೈಸೂರು ಜಿಲ್ಲಾ ಚೆಸ್ ಸಂಸ್ಥೆಯ ಅಧ್ಯಕ್ಷ ಡಾ. ವೇಣುಗೋಪಾಲ್, ಕೆ. ಎಸ್.ಸಿ.ಎ ಪದಾಧಿಕಾರಿಗಳಾದ ಸುರೇಶ್ ಜೆ, ಸುರೇಶ್ ಬಾಬು ಎಂ.ಎಚ್, ದಾಸಪ್ರಕಾಶ್ ಹೋಟೆಲ್ ಮಾಲೀಕರಾದ ದಾಸ್, ಮಾಜಿ ಚಾಂಪಿಯನ್ ಕವನ ಎಂ, ಅಂತರಾಷ್ಟ್ರೀಯ ಆರ್ಬಿಟರ್ ರವಿಕಿರಣ್ ಡಿ.ಜೆ ಮತ್ತು ಏಷ್ಯನ್ ಕಂಚಿನ ಪದಕ ವಿಜೇತೆ ಮಾನಸ ಎಚ್.ಆರ್ ಉಪಸ್ಥಿತರಿದ್ದರು. ಕರ್ನಾಟಕ ರಾಜ್ಯ ಚೆಸ್ ಸಂಸ್ಥೆಯ ಅಧ್ಯಕ್ಷರಾದ ಟಿ. ಎನ್ ಮಧುಕರ್ ಮತ್ತು ಕಾರ್ಯದರ್ಶಿ ತೇಜ್ಕುಮಾರ್ ಎಂ.ಎಸ್ ಕ್ರೀಡಾಪಟುಗಳ ಸಾಧನೆಯನ್ನು ಶ್ಲಾಘಿಸಿದ್ದಾರೆ

### ರಾಷ್ಟ್ರ ಮಟ್ಟಕ್ಕೆ ಆಯ್ಕೆ

**ಈ ಪಂದ್ಯದಲ್ಲಿಮುಕ್ತ ಮತ್ತು ಬಾಲಕಿಯರ ವಿಭಾಗದ ಮೊದಲ ಎರಡು ಸ್ಥಾನ ಪಡೆದ ವಿಜೇತರು, ಬರುವ ಸೆಪ್ಟೆಂಬರ್ನಲ್ಲಿ ಪಾಂಡಿಚೇರಿಯಲ್ಲಿ ನಡೆಯಲಿರುವ ರಾಷ್ಟ್ರೀಯ ಮಟ್ಟದ 13 ವರ್ಷದೊಳಗಿನವರ ಚೆಸ್ ಚಾಂಪಿಯನ್ಶಿಪ್ನಲ್ಲಿ ಕರ್ನಾಟಕವನ್ನು ಪ್ರತಿನಿಧಿಸಲಿದ್ದಾರೆ.**

# ಶೇ.56ರಷ್ಟು ಮೀಸಲು ತಡೆಯಾಜ್ಞೆ ತೆರವಿಗೆ ಒತ್ತಾಯ



ಮೈಸೂರು: ಶೇ.56 ಮೀಸಲಾತಿ ಕಾನೂನಿನ ಅಡಿಯಲ್ಲಿ ನೇಮಕಾತಿ ನಡೆಸಲು ಉಚ್ಚ ನ್ಯಾಯಾಲಯುವು ನೀಡಿರುವ ತಡೆಯಾಜ್ಞೆ ತೆರವುಗೊಳಿಸಲು ರಾಜ್ಯ ಸರ್ಕಾರ ಕಾರ್ಯ ಪ್ರವೃತ್ತವಾಗಬೇಕು ಎಂದು ಕರ್ನಾಟಕ ರಾಜ್ಯ ನಾಯಕರ ಯುವ ಸೇನೆ ರಾಜ್ಯಾಧ್ಯಕ್ಷ ದೇವರಾಜ್ ಟಿ. ಕಾಟೂರು ಆಗ್ರಹಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ವಾಲ್ಮೀಕಿ ಗುರು ಪೀಠದ ಜಗದ್ಗುರು ಪ್ರಸನ್ನನಂದ ಸ್ವಾಮೀಜಿಯವರ 257 ದಿನಗಳ ಅಹೋರಾತ್ರಿ ಹೋರಾಟದ ಫಲವಾಗಿ ಬಿ.ಜೆ.ಪಿ. ನೇತೃತ್ವದ ಬಸವರಾಜು ಬೊಮ್ಮಾಯಿ ಸರ್ಕಾರ 2022ರ ಆಕ್ಟೋಬರ್‌ನಲ್ಲಿ ಸುಗ್ರೀವಾಜಿ ಮೂಲಕ 50% ಇದ್ದ ಮೀಸಲಾತಿಯನ್ನು ಶೇ. 56ಕ್ಕೆ ಏರಿಕೆ ಮಾಡಿ ಆದೇಶಿಸಿತ್ತು. ನಂತರ 2023ರಲ್ಲಿ ಅಧಿಕಾರಕ್ಕೆ ಬಂದ ಈಗಿನ ಕಾಂಗ್ರೇಸ್ ಸರ್ಕಾರ ಮೊದಲ ಅಧಿವೇಶನದಲ್ಲಿ ಶೇ. 56 ಮೀಸಲಾತಿ ಏರಿಕೆ ವಿಷಯವನ್ನು ಚರ್ಚಿಸಿ ಅನುಮೋದನೆ ಪಡೆದು ಕೇಂದ್ರಕ್ಕೆ 9 ಅನುಸೂಚಿಗೆ ಸೇರಿಸಲು, ಪ್ರಸ್ತಾವನೆಯನ್ನು ಕಳುಹಿಸಬೇಕಿತ್ತು. ಆದರೆ ಆ ಕೆಲಸವನ್ನು ಮಾಡದೆ ಕಾಟಾಚಾರಕ್ಕೆ ಕೇಂದ್ರಕ್ಕೆ ಪತ್ರ ಬರೆದು ಕೈಚಲ್ಲಿ ಕುಳಿತು ಬಿಟ್ಟಿತ್ತು. ನಿರುದ್ಯೋಗಿ ಯುವಕರು ಧಾರವಾಡದಲ್ಲಿ ಉದ್ಯೋಗ ನೇಮಕ ಮಾಡಿಕೊಳ್ಳಬೇಕು ಎಂದು ಬೃಹತ್ ಪ್ರತಿಭಟನೆ ಮಾಡಿದ ಮೇರೆಗೆ ರಾಜ್ಯಾ ಸರ್ಕಾರದ ಶೇ.56 ಮೀಸಲಾತಿ ಅಡಿಯಲ್ಲಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ತೀರ್ಮಾನಿಸಿದ್ದು, ಆದರೆ ಮಾನ್ಯ ಉಚ್ಚ ನ್ಯಾಯಾಲಯ ಕಳೆದ ವರ್ಷದ ನವೆಂಬರ್ 27 ರಂದು ತಡೆಯಾಜ್ಞೆ ನೀಡಿದೆ. ಮುಂಬರುವ ನೇರನೇಮಕಾತಿಗಳಲ್ಲಿ ಆಯ್ಕೆಯಾಗುವ ಒಟ್ಟು ಅಭ್ಯರ್ಥಿಗಳ ಪೈಕಿ ಎಸ್.ಎಸ್ಟಿ ಮೀಸಲಾತಿ ಹೆಚ್ಚಳ ಪ್ರಮಾಣದಲ್ಲಿ ಶೇ. 6 ಆಯ್ಕೆಯಾಗುವ ಆಭ್ಯರ್ಥಿಗಳಿಗೆ ನೇಮಕಾತಿ ಆದೇಶ ಪತ್ರವನ್ನು ಪ್ರಕರಣ ಇತ್ಯರ್ಥವಾಗುವವರೆಗೂ ಕಾಯ್ದಿರಿಸಿ ಉಳಿದ ಶೇ. 94 ಆಭ್ಯರ್ಥಿಗಳಿಗೆ ನೇಮಕಾತಿ ಆದೇಶ ಪತ್ರವನ್ನು ನೀಡುವ ಷರತ್ತಿನ ಮೇಲೆ ಹೊಸದಾಗಿ ನೇರ–ನೇಮಕಾತಿ ಅಧಿಸೂಚನೆಗಳನ್ನು ಹೊರಡಿಸಲು ಅನುಮತಿ ಕೋರಿ ರಾಜ್ಯಸರ್ಕಾರವು ಕೋರ್ಟಿಗೆ ಅರ್ಜಿ ಸಲ್ಲಿಸಿರುತ್ತಾರೆ. ಈ ಕುರಿತಂತೆ ಜನವರಿ 20ರಂದು ನಡೆದ ವಿಚಾರಣೆಯಲ್ಲಿ ಕೋರ್ಟ್ ರಾಜ್ಯ ಸರ್ಕಾರದಿಂದ ಸ್ಪಷ್ಟಿಕರಣವನ್ನು ಕೇಳಲಾಗಿದೆ. ಆದರೆ ಫೆ.12, ಮಾ.21, ಏ.1 ರಂದು ನಡೆದ ವಿಚಾರಣೆಗೆ ರಾಜ್ಯ ಸರ್ಕಾರದ ಪರ ಅಡ್ವಕೇಟ್ ಜನರಲ್ ಅವರು ಉದ್ದೇಶ ಪೂರ್ವಕವಾಗಿ ಗೈರಾಗಿದ್ದಾರೆ ಎಂದು ಬೇಸರಿಸಿದರು. ಈ ಮೂಲಕ ಈ ಕಾನೂನಿಗೆ ಸಾಂವಿಧಾನಿಕ ರಕ್ಷಣೆ ಒದಗಿಸಬೇಕೆಂದು ಒತ್ತಡ ತರಬೇಕೆಂದು ಒತ್ತಾಯಿಸಿದರು. ಪರಶಿವಮೂರ್ತಿ, ಸಿದ್ದರಾಜು, ಶಿವಕುಮಾರಸ್ವಾಮಿ, ಮಂಜುನಾಥ್, ಮಹದೇವಸ್ವಾಮಿ ಇದ್ದರು.

# ಮೇ 15ರಂದು ಡಿಕೆಶಿ ಮುಖ್ಯಮಂತ್ರಿ

## ಶಾಸಕ ಇಕ್ಬಾಲ್ ಹುಸೇನ್ ಭವಿಷ್ಯ । 5 ಕೋಟಿ ರೂ ವೆಚ್ಚದ ಕಾಮಗಾರಿಗಳಿಗೆ ಚಾಲನೆ

ರಾಮನಗರ: ಡಿ.ಕೆ.ಶಿವಕುಮಾರ್ ಅವರನ್ನು ಮುಖ್ಯಮಂತ್ರಿಯಾಗಿ ನೋಡಲು ಸಾಕಷ್ಟು ಸಚಿವರು, ಶಾಸಕರು, ಪಕ್ಷದ ಕಾರ್ಯಕರ್ತರು ಮತ್ತು ಜನರ ಅಪೇಕ್ಷಿಸುತ್ತಿದ್ದಾರೆ. ಮೇ 15ರಮದು ಅವರು ಮುಖ್ಯಮಂತ್ರಿಯಾಗುವುದು ಫಿಕ್ಸ್ ಎಂದು ರಾಮನಗರ ಕ್ಷೇತ್ರದ ಶಾಸಕ ಇಕ್ಬಾಲ್ ಹುಸೇನ್ ಹೇಳಿದರು.

ತಾಲೂಕಿನ ಕಸಬಾ ಹೋಬಳಿಯ ಮಾಯಗಾನಹಳ್ಳಿ ಗ್ರಾಮ ಪಂಚಾಯಿತಿಯ ವಿವಿಧ ಗ್ರಾಮಗಳಲ್ಲಿ ಸುಮಾರು 5 ಕೋಟಿ ರೂ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿದ ವೇಳೆ ಕೇತೋಹಳ್ಳಿ ಗ್ರಾಮದಲ್ಲಿ ಅವರು ಸುದ್ದಿಗಾರರೊಂದಿಗೆ ಮಾತನಾಡಿದರು.

ಮೇ 15ರಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ಹುಟ್ಟುಹಬ್ಬ, ಅಂದೇ ಅವರು ಮುಖ್ಯಮಂತ್ರಿಯಾಗುತ್ತಾರೆ. ಇದು ಅವರ ಬರ್ಥ್‌ಡೇ ಗಿಫ್ಟ್ ಎಂದರು. ಅವರನ್ನು ಮುಖ್ಯಮಂತ್ರಿಯಾಗಿ ನೋಡುವುದು ತಮ್ಮ ಆಸೆಯೂ ಆಗಿದೆ ಎಂದರು. ಈ ಹಿಂದೆಯೂ ಇಕ್ಬಾಲ್ ಹುಸೇನ್ ಅವರು ಡಿಕೆಶಿ ಅವರು ಮುಖ್ಯಮಂತ್ರಿಯಾಗುವ ದಿನಾಂಕಗಳನ್ನು ತಿಳಿಸಿದ್ದನ್ನು ಇಲ್ಲಿ ಸ್ಮರಿಸಬಹುದು.

### ರಾಜಣ್ಣರದ್ದು ತಮ್ಮ ಸ್ವಂತ ಅಭಿಪ್ರಾಯ

ಸಿದ್ದರಾಮಯ್ಯ ಅವರನ್ನೇ ಮುಖ್ಯಮಂತ್ರಿಯಾಗಿ ಮುಂದುವರೆಸುವಂತೆ ಮಾಜಿ ಸಚಿವ ಕೆ.ಎನ್. ರಾಜಣ್ಣ ಅವರು ಪಕ್ಷದ ವರಿ?ರಲ್ಲಿ ಮನವಿ ಮಾಡುವುದಾಗಿ ತಿಳಿಸಿದ್ದಾರೆ ಎಂದು ಶಾಸಕರ ಗಮನ ಸೆಳೆದಾಗ ಪ್ರತಿಕ್ರಿಯಿಸಿದ ಅವರು, "ನಾನು ನನ್ನ ಅಭಿಪ್ರಾಯ ಹೇಳಿದ್ದೇನೆ. ಹಾಗೆಯೇ ರಾಜಣ್ಣರವರು ಅವರ ಅಭಿಪ್ರಾಯ ತಿಳಿಸಿದ್ದಾರೆ. ರಾಜಕಾರಣದಲ್ಲಿ ವಿಭಿನ್ನ ಅಭಿಪ್ರಾಯ ಇರುವುದು ಸಹಜ. ಬೇರೆಯವರ ಅಭಿಪ್ರಾಯಗಳಿಗೆ ನಾನು ಪ್ರತಿಕ್ರಿಯೆ ನೀಡುವುದಿಲ್ಲ" ಎಂದರು.



### ಮಾದರಿ ಕ್ಷೇತ್ರವನ್ನಾಗಿಸುವ ಪ್ರಯತ್ನದಲ್ಲಿದ್ದೇನೆ: ಇಕ್ಬಾಲ್ ಹುಸೇನ್

**ಅಭಿವೃದ್ಧಿ ಕಾರ್ಯಗಳ ಮೂಲಕ ಕ್ಷೇತ್ರವನ್ನು ಮಾದರಿ ಯಾಗಿಸುವ ಕೆಲಸವನ್ನು ಮಾಡುತ್ತಿದ್ದೇನೆ ಎಂದು ಶಾಸಕ ಹೆಚ್.ಎ.ಇಕ್ಬಾಲ್ ಹುಸೇನ್ ಹೇಳಿದರು. ಮಾಯಗಾನಹಳ್ಳಿ ಗ್ರಾಮಪಂಚಾಯ್ತಿ ವ್ಯಾಪ್ತಿಯ ಗ್ರಾಮಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು. ಮಾಯಗಾನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಇದುವರೆಗೆ 15 ಕೋಟಿ ರೂ ವೆಚ್ಚದ ರಸ್ತೆ ಅಭಿವೃದ್ಧಿ, ಚರಂಡಿ ನಿರ್ಮಾಣದಂತಹ ಹಲವು ಕೆಲಸಗಳು ನಡೆದಿವೆ. ಜನರ ಸಮಸ್ಯೆಗಳಿಗೆ ಸ್ಪಂದಿಸುತ್ತಿದ್ದೇನೆ. ಕ್ಷೇತ್ರದ ಜನತೆ ನನ್ನ ಮೇಲೆ ವಿಶ್ವಾಸವಿಟ್ಟು ಶಾಸಕನಾಗಿ ಆಯ್ಕೆ ಮಾಡಿದ್ದಾರೆ. ನಾನು ಶಾಸಕ ಎಂಬುದಕ್ಕಿಂತ ಜನರ ಸೇವಕನಾಗಿ ಶಾಶ್ವತ ಅಭಿವೃದ್ಧಿ ಕೆಲಸಕ್ಕೆ ಒತ್ತುಕೊಟ್ಟಿದ್ದೇನೆ. ನನಗೆ ಜನರು ಮತ್ತು ಪಕ್ಷದ ಕಾರ್ಯಕರ್ತರ ಪ್ರೀತಿ, ವಿಶ್ವಾಸವೇ ಸಾಕು ಬೇರೆ ಯಾವ ಸ್ಥಾನವೂ ಬೇಡ. ಇದಕ್ಕಿಂತ ಬೇರೇನೂ ನನಗೆ ದೊಡ್ಡದು ಎನಿಸುತ್ತಿಲ್ಲ ಎಂದರು.**

**ಕೆಂಪನಹಳ್ಳಿ, ಕೆಂಜಿಗರಹಳ್ಳಿ, ಕೇತೋಹಳ್ಳಿ, ಅರಳೀಮರದದೊಡ್ಡಿ, ರಾಂಪುರದೊಡ್ಡಿ, ಬಸವನಪುರ, ಗಂಗರಾಜನಹಳ್ಳಿ, ಸಂಗಬಸವನದೊಡ್ಡಿ, ಮಾದಾಪುರ, ದಾರಾಪುರ, ಮಾಯಗಾನಹಳ್ಳಿ ಗ್ರಾಮಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಶಾಸಕರು ಇದೇ ದಿನ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ಕೊಟ್ಟರು.**

### ಗುಂಪುಗಾರಿಕೆ ಎಲ್ಲೆಡೆಯೂ ಇದೆ

**ಡಿ.ಕೆ.ಶಿವಕುಮಾರ್ ಹೆಸರು ಮುಖ್ಯಮಂತ್ರಿ ಸ್ಥಾನಕ್ಕೆ ಪ್ರಸ್ತಾಪವಾದಾಗಲೆಲ್ಲ, ಪಕ್ಷದೊಳಗೆ ಗುಂಪುಗಾರಿಕೆ ಆರಂಭವಾಗುತ್ತದೆಯಲ್ಲ ಎಂಬ ಪ್ರಶ್ನೆಗೆ ಶಾಸಕರು, ಯಾವ ಕ್ಷೇತ್ರದಲ್ಲಿ ಗುಂಪುಗಾರಿಕೆ ಇಲ್ಲ? ಎಲ್ಲಾ ಕ್ಷೇತ್ರ, ಜಾತಿಗಳಲ್ಲಿ ಗುಂಪುಗಾರಿಕೆ ಇದೆ. ರಾಜಕೀಯವೂ ಗುಂಪುಗಾರಿಕೆಯಿಂದ ಹೊರತಾಗಿಲ್ಲ. ನಾವು ರಾಜಕಾರಣದಲ್ಲಿ ಒಂದು ಬದಲಾವಣೆ ಆಗಲಿ ಅಂತ ಬಯಸಿದ್ದೀವಿ ಅ?ೀ ಎಂದು ಇಕ್ಬಾಲ್ ಹುಸೇನ್ ಹೇಳಿದರು.**


**ವರಿಷ್ಠರನ್ನು ಭೇಟಿ ಮಾಡುವುದರಲ್ಲಿ ತಪ್ಪೇನಿದೆ?**

ಸಚಿವರಾದ ಸತೀಶ್ ಜಾರಕಿಹೋಳಿ ಹಾಗೂ ಎಚ್.ಸಿ.ಮಹದೇವಪ್ಪರವರು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಮಾಡಿದ್ದಾರಲ್ಲ ಎಂದು ಮಾಧ್ಯಮ ಪ್ರತಿಗಳ ಮತ್ತೊಂದು ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಜಾರಕಿಹೋಳಿ ಮತ್ತು ಮಹದೇವಪ್ಪ ಅವರು ನಮ್ಮ ಪಕ್ಷದ ಹಿರಿಯ ನಾಯಕರು ಮತ್ತು ಸಚಿವರು. ಪಕ್ಷದ ವರಿ?ರನ್ನು ಭೇಟಿ ಮಾಡುವುದರಲ್ಲಿ ತಪ್ಪೇನಿದೆ. ತಮ್ಮ ಕ?–ಸುಖದ ಜೊತೆಗೆ ರಾಜ್ಯದ ಬಗ್ಗೆ ಕಾಳಜಿ ಇಟ್ಟುಕೊಂಡು ಚರ್ಚಿಸಲು ಹೋಗಿರಬಹುದು. ಅವರು ಯಾವ ವಿಚಾರವಾಗಿ ಚರ್ಚಿಸಲು ಹೋಗಿದ್ದಾರೊ ತಮಗೆ ಗೊತ್ತಿಲ್ಲ ಎಂದು ಹೇಳಿದರು. ಈ ವೇಳೆ ಗ್ಯಾರಂಟಿ ಯೋಜನೆಗಳ ಅನು?ನ ಸಮಿತಿ ಜಿಲ್ಲಾಧ್ಯಕ್ಷ ಕೆ.ರಾಜು, ಗ್ರಾಮಾಂತರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ವಿ.ಹೆಚ್.ರಾಜು, ಗ್ರಾಪಂ ಮಾಜಿ ಅಧ್ಯಕ್ಷರಾದ ಎಂ.ಎಚ್. ರಂಜಿತ್, ಗೀತಾಪರಮಶಿವಯ್ಯ, ಲೋಕೇಶ್, ಯುವ ಕಾಂಗ್ರೆಸ್ ಮಾಜಿ ಕಾರ್ಯಾಧ್ಯಕ್ಷ ಅನಿಲ್ ಮುಖಂಡರಾದ ರೇವಣ್ಣ, ಶಿವಗಂಗು, ಶಿವಲಿಂಗಯ್ಯ ಮತ್ತಿತರರು ಹಾಜರಿದ್ದರು.

### ಮೇ1ಕ್ಕೆ ಬುದ್ಧ ಜನ್ಮ ದಿನಾಚರಣೆ

ಮೈಸೂರು: ವಿಶ್ವಮೈತ್ರಿ ಬುದ್ಧ ವಿಹಾರದಿಂದ ಮೇ 1 ರಂದು ಸಂಜೆ 5.30ಕ್ಕೆ ನಗರದ ಅಶೋಕ ವೃತ್ತದ ಬುದ್ಧ ವಿಹಾರದಲ್ಲಿ ಭಗವಾನ್ ಬುದ್ಧರ 2570ನೇ ಜನ್ಮದಿನಾಚರಣೆ ಆಯೋಜಿಸಲಾಗಿದೆ ಎಂದು ವಿಹಾರದ ಮುಖ್ಯಸ್ಥ ವಿ.ಪುರುಷೋತ್ತಮ್ ತಿಳಿಸಿದರು.

ನಗರದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಹಾರದ ಕಲ್ಯಾಣಸಿರಿ ಭಂತೇಜಿ ಹಾಗೂ ಮಹಾಬೋಧಿ ಮಂಡಲದ ನಿರ್ದೇಶಕ ಸೊಬಾನ ಭಂತೇಜಿ ಸಮ್ಮುಖದಲ್ಲಿ ಗೃಹಸಚಿವ ಜಿ.ಪರಮೇಶ್ವರ್ ಕಾರ್ಯಕ್ರಮ ಉದ್ಘಾಟಿಸುವರು. ಸಚಿವ ಡಾ. ಎಚ್.ಸಿ.ಮಹದೇವಪ್ಪ ಅಧ್ಯಕ್ಷತೆ ವಹಿಸುವರು. ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಶಾಸಕ ಟಿ.ಎಸ್.ಶ್ರೀವತ್ಸ, ಭಾಗ್ಯಲಕ್ಷ್ಮಿ ?ಮ ಶ್ರೀನಿವಾಸಪ್ರಸಾದ್ ಪಾಲ್ಗೊಳ್ಳುವರು. ಮಹಾರಾಜ ಕಾಲೇಜು ಪ್ರಾಂಶುಪಾಲ ವಿ.ಷಣ್ಮುಗಂ ಮುಖ್ಯ ಭಾಷಣ ಮಾಡುವರು. ಎಂದು ಮಾಹಿತಿ ನೀಡಿದರು. ಪ್ರಮುಖರಾದ ಮಹೇಶ್, ನಾಗರಾಜು, ಸೋಮಯ್ಯ ಮಲೆಯೂರು, ಮಂಜುನಾಥ್, ಪುಟ್ಟರಾಜು, ರಮೇಶ್ ಹಾಜರಿದ್ದರು



**ಡಾ.ವಿ.ಎನ್.ಮಹದೇವಯ್ಯ । ಒಳಮೀಸಲಾತಿ ಪರಿಶಿಷ್ಟ ಜಾತಿಗಳಿಗೆ ಸಮಾನ ಹಂಚಿಕೆ : ಹೆಚ್.ಸಿ.ಮಹದೇವಪ್ಪಗೆ ಅಭಿನಂದನೆ**

# ಒಳಮೀಸಲಾತಿ ಜಾರಿ: ಹೆಚ್.ಸಿ.ಮಹದೇವಪ್ಪ ಅವರ ಪಾತ್ರ, ಕೊಡುಗೆ ಮಹತ್ವದ್ದು

ಚಾಮರಾಜನಗರ, ಒಳಮೀಸಲಾತಿಯಲ್ಲಿ ಪರಿಶಿಷ್ಟ ಜಾತಿಯ 101 ಜಾತಿಗಳಿಗೂ ಸಮಾನ ಹಂಚಿಕೆ ಮಾಡುವಲ್ಲಿ ಯಶ್ವಸಿಯಾಗಿರುವ ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ ಅವರಿಗೆ ಡಾ.ಹೆಚ್.ಸಿ.ಮಹದೇವಪ್ಪ ಅಭಿಮಾನಿ ಬಳಗದ ವತಿಯಿಂದ ಈ ಮೂಲಕ ಅಭಿನಂದನೆ ಸಲ್ಲಿಸಲಾಗುವುದು ಎಂದು ಅಭಿಮಾನಿ ಬಳಗದ

ಅಧ್ಯಕ್ಷ ಡಾ.ವಿ.ಎನ್.ಮಹದೇವಯ್ಯ ತಿಳಿಸಿದರು.

ನಗರದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಅಸಮಾನತೆ ಅನ್ಯಾಯಗಳನ್ನು ನಿವಾರಿಸಿ ಸರ್ವರಲ್ಲೂ ಸಮಾನತೆ ಸಾಧಿಸಲು ಡಾ.ಬಿ.ಆರ್.ಅಂಬೇಡ್ಕರ್ ಮೀಸಲಾತಿ ಎಂಬುದು ಪ್ರಾತಿನಿಧ್ಯ ಎಂದು ವ್ಯಾಖ್ಯಾನಿಸಿದ್ದರು. ಅದರಂತೆ ಮಹದೇವಪ್ಪ ಅವರು ಅಂಬೇಡ್ಕರ್ ಅವರ ಈ ತತ್ವದಂತೆ ಒಳ ಮೀಸಲಾತಿಯಲ್ಲೂ ಸರ್ವ ಪರಿಶಿಷ್ಟ ಜಾತಿಗಳ ಹಿತ ಕಾಯುವಲ್ಲಿ ಯಶಸ್ವಿಯಾಗಿದ್ದಾರೆ ಎಂದರು. ಎಸ್.ಸಿ101 ಜಾತಿಗಳು ಅಂಬೇಡ್ಕರರು ಕಲ್ಪಿಸಿದ ಮೀಸಲಾತಿಗೆ ಅರ್ಹರು. ಆದರೆ ನ್ಯಾಯಮೂರ್ತಿ ನಾಗಮೋಹನ್ ದಾಸ್ ವರದಿಯ ಸಾಧಕ ಬಾಧಕಗಳನ್ನು ಸರಿದೂಗಿಸಿ ಎಡಗೈ–ಬಲಗೈ–ಅಲೆಮಾರಿ ಮತ್ತು ಇತರೆ ವರ್ಗಗಳಿಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಸಮಾನ ಅವಕಾಶವನ್ನು ಕಲ್ಪಿಸುವಲ್ಲಿ ಸರ್ಕಾರವು ಎಚ್ಚರಿಕೆಯ ಹೆಜ್ಜೆ ಇಟ್ಟಿದೆ. ಇದರಲ್ಲಿ ಡಾ.ಮಹದೇವಪ್ಪ ಅವರ ಪಾತ್ರ ಮತ್ತು ಕೊಡುಗೆ ಮಹತ್ವದ್ದಾಗಿದೆ ಎಂದರು.



ಎಸ್.ಸಿ ಸಮುದಾಯಗಳ ಒಳ ಮೀಸಲಾತಿ ವಿಷಯ ಎದುರಾದಾಗ ಡಾ.ಹೆಚ್.ಸಿ.ಮಹದೇವಪ್ಪ ನಡೆದುಕೊಂಡ ನಡೆ, ವಿನಯ, ತಾಳ್ಮೆ, ಸಹನೆ ಮತ್ತು ಎಸ್.ಸಿ ಗಳ ವಿಷಯದಲ್ಲಿ ಅವರ ಬದ್ಧತೆ ಐತಿಹಾಸಿಕ ನಡೆಯಾಗಿದೆ. ಸರ್ಕಾರದಲ್ಲಿ ಸಚಿವರಾದವರಿಗೆ ಎಲ್ಲಾ ಪ್ರಜೆಗಳು ಸಮಾನರು ಹಾಗೆ ಎಲ್ಲಾ ಎಸ್.ಸಿ ಗಳಿಗೂ ಸಮಾನ ನ್ಯಾಯ ಕಲ್ಪಿಸಿಸುವ ಹೊಣೆಗಾರಿಕೆ–ಜವಾಬ್ದಾರಿಯನ್ನು ಡಾ.ಹೆಚ್.ಸಿ.ಮಹದೇವಪ್ಪ 'ಸಮರ್ಥವಾಗಿ ನಿಭಾಯಿಸಿದ್ದಾರೆ ಅದಕ್ಕಾಗಿ ಅವರು ಅಭಿನಂದನಾರ್ಹರು ಎಂದರು.

ಈಗ ಜಾರಿಗೊಳಿಸಿರುವ ಒಳಮೀಸಲಾತಿ ಸೂತ್ರದಿಂದ ಯಾರಿಗೂ ಅನ್ಯಾಯವಾಗುವುದಿಲ್ಲ. 1–2ಹುದ್ದೆಗಳಿದ್ದಾಗ ಎಸ್.ಸಿ ಸಾಮಾನ್ಯ ಎಂದು ಪರಿಗಣಿಸುವ ನಿಯಮ ರೂಪಿಸಲಾಗಿದೆ ಅಂದರೆ ಅದಕ್ಕೆ ಒಳಮೀಸಲಾತಿ ಅನ್ವಯಿಸುವುದಿಲ್ಲ.

ವಿಶೇಷವಾಗಿ ಪ್ರವರ್ಗ–ಬಿ ಮತ್ತು ಪ್ರವರ್ಗ–ಸಿ ಗುಂಪುಗಳಿಗೆ ಇದ್ದ ಬಹುದೊಡ್ಡ ಆತಂಕ ರೋಸ್ಟರ್ ಬಿಂದು ಸಮಸ್ಯೆ. ಇದನ್ನು ಎಸ್.ಸಿ ಸಾಮಾನ್ಯ ಎಂಬುದಾಗಿ ಪರಿವರ್ತಿಸುವ ಮೂಲಕ ಬಗೆಹರಿಸುವಲ್ಲಿ ಡಾ. ಹೆಚ್.ಸಿ.ಮಹದೇವಪ್ಪ ಯಶಸ್ವಿಯಾಗಿದ್ದಾರೆ. ಆದರೆ ಅನಗತ್ಯವಾಗಿ ಎಡಗೈ–ಬಲಗೈ ಸಮುದಾಯ–ಮುಖಂಡರು ಡಾ.ಹೆಚ್.ಸಿ.ಮಹದೇವಪ್ಪ ರವರನ್ನು ಟೀಕೆಗೆ ಗುರಿಯಾಗಿಸುತ್ತಿದ್ದಿದ್ದು ವ್ಯರ್ಥ ಪ್ರಲಾಪ ಎಂದರು.

ಸಮಾಜ ಕಲ್ಯಾಣ ಸಚಿವರಿಗೂ ಸರ್ಕಾರಕ್ಕೂ ಸಾಮೂಹಿಕವಾದ ಮತ್ತು ಸಮುದಾಯಗಳ ಹಿತಾಸಕ್ತಿಯ ಹೊಣೆಗಾರಿಕೆ ಇದ್ದೇಇದೆ. ಇದನ್ನು ಯಾವುದೇ ಸಮುದಾಯಗಳು ಅರ್ಥೈಸಿಕೊಳ್ಳಬೇಕಾಗುತ್ತದೆ. ಸರ್ಕಾರ ಅಥವಾ ಸಚಿವರು ಏಕ ಪಕ್ಷಿಯವಾಗಿ ಯಾವ ನಿರ್ಧಾರವನ್ನು ಮಾಡಲಾಗುವುದಿಲ್ಲವೆಂಬ ಪ್ರಜ್ಞೆ ಸಮುದಾಯಗಳಿಗೆ ಇರಬೇಕು. ಅದರಂತೆ ಡಾ.ಹೆಚ್.ಸಿ.ಮಹದೇವಪ್ಪ ನಡೆದುಕೊಂಡಿದ್ದಾರೆ ಹೊರತು ಅವರು ಯಾರೊಬ್ಬ ವಿರೋಧಿಗಳಲ್ಲ, ಪರಿಶಿಷ್ಟ ಜಾತಿಗಳ ಹಿತ ಕಾಯುವಲ್ಲಿ ಸೋತಿರುವುದಿಲ್ಲ. ಅವರ ಬದ್ಧತೆಯನ್ನು ಮೆಚ್ಚಲೇಬೇಕು ಎಂದರು. ಪತ್ರಿಕಾಗೋಷ್ಠಿಯಲ್ಲಿ ಡಾ.ಹೆಚ್.ಸಿ.ಮಹದೇವಪ್ಪ ಅಭಿಮಾನಿ ಬಳಗದ ಪಿ.ಸಂಘಸೇನಾ, ಭಾಗ್ಯಮ್ಮ ಉಮ್ಮತ್ತೂರು, ರಾಜೇಂದ್ರ ಹೊನ್ನೂರು, ಕೆಂಪರಾಜು ಹೊಂಗನೂರು, ರಘವೀರ್, ಮರಿಸ್ವಾಮಿ ಚಾಟೀಪುರ ಹಾಜರಿದ್ದರು.

# ವಿದ್ಯಾರ್ಥಿಗಳು ಅಂಕಗಳಿಗೆ ಸೀಮಿತರಾಗದೆ ಜ್ಞಾನವಂತರಾಗಿ

ಮೈಸೂರು: ವಿದ್ಯಾರ್ಥಿಗಳು ಅಂಕಗಳಿಗೆ ಸೀಮಿತ ರಾಗದೆ ಜ್ಞಾನವಂತರಾಗಿ ಎಂದು ಮೈಸೂರು ಆಕಾಶವಾಣಿಯ ಹಿರಿಯ ಉದ್ಘೋಷಕ ಹಾಗೂ ಕರ್ನಾಟಕ ಜಾನಪದ ಅಕಾಡೆಮಿಯ ಸದಸ್ಯ ಡಾ.ಮೈಸೂರು ಉಮೇಶ ಅಭಿಪ್ರಾಯಪಟ್ಟರು.

ನಗರದ ಸರಸ್ವತಿಪುರಂ ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣದಲ್ಲಿ ಸಾಂಸ್ಕೃತಿಕ ಸಾಹಿತ್ಯಕ ಮತ್ತು ಕ್ರೀಡಾ ವೇದಿಕೆಗಳ ಸಮಾರೋಪ ಸಮಾರಂಭದಲ್ಲಿ ಸಮಾರೋಪ ನುಡಿಗಳನ್ನಾಡಿದರು. ಗ್ರಾಮೀಣ ಜನರ ಬದುಕಿನ ಅನುಭವವೇ ನಿಜವಾದ ಶಿಕ್ಷಣ. ಯುದ್ಧ ಮನುಷ್ಯನ ಬದುಕಿಗೆ ಪೂರಕವಲ್ಲ. ಮಾರಕವಾಗಿದೆ. ಅರಮನೆಯವರ ಕಾಳಜಿ ಮತ್ತು ಗುರುಮನೆಯ ದರ್ಶನ ಮೈಸೂರಿನ ಸಾಂಸ್ಕೃತಿಕ ಪರಂಪರೆಯ ಹಿರಿಮೆಯನ್ನು ಹೆಚ್ಚಿಸಿದೆ. ಕಲೆ ಮತ್ತು ಸಂಸ್ಕೃತಿಯಿಂದ ಮಾತ್ರ ಜಗತ್ತನ್ನು ಪ್ರೀತಿಯಿಂದ ಕಾಣಲು ಸಾಧ್ಯ. ವಿದ್ಯಾರ್ಥಿಗಳು ವರ್ತಮಾನ ದಿಂದ ವಿಮುಖರಾಗಬಾರದು ಎಂದು ಹೇಳಿದರು.

ವಾರ್ಷಿಕ ಸಂಚಿಕೆ ಬಿಡುಗಡೆ ಮಾಡಿದ ವಿಶ್ರಾಂತ ಪ್ರಾಂಶುಪಾಲ ಪ್ರೊ.ಕೆ.ರಾಮಮೂರ್ತಿ ರಾವ್ ಮಾತನಾಡಿ, ಪುಸ್ತಕ ಜೀವನದ ಸಂಗಾತಿ ಎಂದು ಹೇಳುತ್ತಾ, ಉತ್ತಮ ಓದು ಮತ್ತು ಬರವಣಿಗೆ ನಿಮ್ಮನ್ನು ಕ್ರಿಯಾಶೀಲಗೊಳಿಸುತ್ತದೆ. ವಿದ್ಯಾರ್ಥಿಗಳ ಸುಪ್ತ ಪ್ರತಿಭೆಯನ್ನು ಅನಾವರಣ ಗೊಳಿಸಲು ಇಂತಹ ವೇದಿಕೆಗಳು ಸಹಾಯಕ. ವಿದ್ಯಾರ್ಥಿಗಳು ಧೈರ್ಯ, ಶೀಘ್ರತೆ ಮತ್ತು ನೈಪುಣ್ಯತೆಯಿಂದ ಸವಾಲುಗಳನ್ನು ಎದುರಿಸಬೇಕು. ಕಲೆಗೆ ತಿಲಕವಿಟ್ಟಂತೆ



ಕಾಲೇಜಿನ ಸಿಂಧೂರ ಬಿಡುಗಡೆಯಾಗಿರುವುದು ಬಹಳ ಸಂತೋಷ ನೀಡಿದೆ. ವಿದ್ಯಾರ್ಥಿಗಳು ಸ್ವಯಂ ಅವಲೋಕನ ಮಾಡಿಕೊಂಡು ತಮ್ಮ ಗುರಿ ಸಾಧಿಸಿ ಎಂದರು.

ಕಾಲೇಜಿನ ಹಿರಿಯ ವಿದ್ಯಾರ್ಥಿನಿ ಹಾಗೂ ಟೆಕ್ ಮಹೇಂದ್ರ ಬಿಜಿನೆಸ್ ಹೆಚ್‌ಆರ್ ಬಿ.ಎಚ್.ಹರ್ಷಿತಾ ರಾವ್ ಸಾಂಸ್ಕೃತಿಕ ಮತ್ತು ಕ್ರೀಡಾ ಸ್ಪರ್ಧೆಗಳ ಬಹುಮಾನ ವಿತರಿಸಿದರು. ಸರಸ್ವತಿ ಪುರಂ ಪೊಲೀಸ್ ಠಾಣೆಯ ನಿರೀಕ್ಷಕ ಜಿ.ಪುರು ಷೋತ್ತಮ್, ಉಪನಿರೀಕ್ಷಕಿ ರಮ್ಯಾ ಕಾನೂನು ಅರಿವು ಕುರಿತ ಕ್ಯೂ ಆರ್ ಕೋಡ್ ಅನ್ನು ಅನಾವರಣಗೊಳಿಸಿದರು. ವಿದ್ಯಾರ್ಥಿನಿ ಬಿ.ಎಸ್. ವಿನುತಾ ಸಾಂಸ್ಕೃತಿಕ ಮತ್ತು ಸಾಹಿತ್ಯಕ ವರದಿಯನ್ನು ಮಂಡಿಸಿದರು. ಎಸ್.ಗೌತಮಿ ಕ್ರೀಡಾ ವರದಿಯನ್ನು ಮಂಡಿಸಿದರು. ವೇದಿಕೆಯಲ್ಲಿ ಕಾಲೇಜಿನ ಪ್ರಾಚಾರ್ಯ ಡಾ.ರೇಚಣ್ಣ, ಸಾಂಸ್ಕೃತಿಕ ವೇದಿಕೆಯ ಸಂಚಾಲಕ ಹೊನ್ನಶೆಟ್ಟಿ, ವಾರ್ಷಿಕ ಸಂಚಿಕೆಯ ಸಂಪಾದಕ ಕನ್ನಡ ವಿಭಾಗದ ಮುಖ್ಯಸ್ಥ ಆರ್.ಎಸ್.ಕುಮಾರ್, ದೈಹಿಕ ವಿಭಾಗದ ನಿರ್ದೇಶಕಿ ಎ.ರಶ್ಮಿ ಇನ್ನಿತರರು ಉಪಸ್ಥಿತರಿದ್ದರು.


**ಪುರಸಭಾ ಕಾರ್ಯಾಲಯ, ಕೃಷ್ಣರಾಜನಗರ, ಮೈಸೂರು ಜಿಲ್ಲೆ**

**E-Mail ID: itstaff_ulb_krnagar@yahoo.co.in, Phone(O): 08223-262242, Fax: 08223-262241**

**ಸಂ:ಪುಸಕೃ/ಜೆ.ಇ.01/ಟೆ.ಪ್ರ/ಪಿ.ಆರ್–06/2026–27** **ದಿನಾಂಕ: 27.04.2026**

**ಟೆಂಡರ್ ಪ್ರಕಟಣೆ**

**(ಕೆ.ಪಿ.ಪಿ.ಪಿ–ಪ್ರಕ್ಯೂರ್‌ಮೆಂಟ್ ಪೋರ್ಟಲ್ ಮೂಲಕ)**

ಕೆ.ಆರ್ ನಗರ ಪುರಸಭೆ ವ್ಯಾಪ್ತಿಯಲ್ಲಿ ಪುರಸಭಾ ನಿಧಿಯಡಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು 1999 ಹಾಗೂ 2000ರ ಪಾರದರ್ಶಕ ಕಾಯ್ದೆಗೆ ಒಳಪಟ್ಟು ಪ್ರತ್ಯೇಕವಾಗಿ ಟೆಂಡರನ್ನು ಆಹ್ವಾನಿಸಲಾಗಿದೆ. ಆಸಕ್ತಿಯುಳ್ಳ ಟೆಂಡರ್‌ದಾರರು ಕಾಮಗಾರಿಗಳನ್ನು ಇ–ಪ್ರೊಕ್ಯುರ್‌ಮೆಂಟ್ ಪೋರ್ಟಲ್‌ನ https://kppp.karnataka.gov.in ನಿಂದ ಟೆಂಡರ್ ಷರತ್ತು ಹಾಗೂ ದಾಸ್ತಾವೇಜನ್ನು ಡೌನ್‌ಲೋಡ್ ಮಾಡಿಕೊಂಡು ಆನ್‌ಲೈನ್ ಮುಖಾಂತರ ಟೆಂಡರ್‌ಗಳನ್ನು ಸಲ್ಲಿಸಬಹುದಾಗಿದೆಂದು ತಿಳಿಸಿದೆ. **1)** ಟೆಂಡರ್‌ನ್ನು ಸಲ್ಲಿಸಲು ಕಡೆಯ ದಿನಾಂಕ: 08.05.2026 ಸಂಜೆ 5.30 ಗಂಟೆಯವರೆಗೆ. **2)** ಟೆಂಡರ್ ತೆರೆಯುವ ದಿನಾಂಕ: 11.05.2026ರಂದು ಕಛೇರಿಯ ಅವಧಿಯಲ್ಲಿ ಅಥವಾ ಮುಂದೆ ಸೂಚಿಸುವ /ನಿಗಧಿಪಡಿಸುವ ದಿನಾಂಕದಂದು ತೆರೆಯಲಾಗುವುದು.

| ಕ್ರ. ಸಂ | ವಿವರ | ಮೀಸಲಾತಿಯ ವಿವರ | ಯೋಜನೆಯ ವಿವರ | ಅಂದಾಜು ಮೊತ್ತ (ರೂ. ಲಕ್ಷಗಳಲ್ಲಿ) | ಇ.ಎಂ.ಡಿ ಮೊತ್ತ ರೂಗಳಲ್ಲಿ |
|---|---|---|---|---|---|
| 1. | DMA/2025-26/RD/WORK_INDENT56695/CALL-3 | ಸಾಮಾನ್ಯ | ಪುರಸಭಾ ನಿಧಿ | 3.98 | 9,950/– |
| 2. | DMA/2025-26/RD/WORK_INDENT56735/CALL-2 | ಸಾಮಾನ್ಯ | ಪುರಸಭಾ ನಿಧಿ | 4.00 | 10,000/– |
| 3. | DMA/2026-27/WS/WORK_INDENT 57043 | ಸಾಮಾನ್ಯ | ಪುರಸಭಾ ನಿಧಿ | 4.70 | 11,750/– |
| 4. | DMA/2025-26/IND5529/CALL-3 | ಸಾಮಾನ್ಯ | ಪುರಸಭಾ ನಿಧಿ + ಎಸ್.ಎಫ್.ಸಿ ಮುಕ್ತನಿಧಿ ಶೇ24.10 | 9.83 | 25,000/– |

**ಸೂಚನೆ:** ಕಾರಣಾಂತರಗಳಿಂದ ಮೇಲೆ ತಿಳಿಸಿದ ಟೆಂಡರ್ ದಿನಾಂಕಗಳು ಹಾಗೂ ಇತರೆ ಬದಲಾವಣೆಗಳು ಇದ್ದರೆ ದಿನಪತ್ರಿಕೆಗಳಲ್ಲಿ ಪ್ರಕಟಿಸಲಾಗುವುದಿಲ್ಲ, ಆದರೆ ಕೆ.ಪಿ.ಪಿ.ಪಿ–ಪ್ರಕ್ಯೂರ್‌ಮೆಂಟ್ ಪೋರ್ಟಲ್‌ನಲ್ಲಿ ಮಾತ್ರ ಸೂಚಿಸಲಾಗುವುದು. ಹೆಚ್ಚಿನ ವಿವರಗಳನ್ನು https://kppp.karnataka.gov.inಪೋರ್ಟಲ್‌ನಲ್ಲಿ ನೋಡಿಕೊಳ್ಳುವುದು.

**ಸಹಿ/– ಮಾನ್ಯ ಆಡಳಿತಾಧಿಕಾರಿಯವರು, ಪುರಸಭೆ, ಕೆ.ಆರ್.ನಗರ** **ಸಹಿ/– ಮುಖ್ಯಾಧಿಕಾರಿ, ಪುರಸಭೆ, ಕೆ.ಆರ್.ನಗರ**

DIPR/DDMYS/113/KSMCA/100/2026-27

## ಅಂಬೇಡ್ಕರ್ ಬ್ಯಾನರ್‌ಗೆ ಕಿಡಿಗೇಡಿಗಳಿಂದ ಕತ್ತರಿ–ಕ್ರಮಕ್ಕೆ ಆಗ್ರಹಿಸಿ ಠಾಣೆಗೆ ದೂರು







**ಹಾಸನ:** ಹಾಸನದ ಹೊರ ವಲಯದ ಹನುಮಂತಪುರ ರಸ್ತೆಯ ಕೊಕ್ಕನಘಟ್ಟ ಗ್ರಾಮದಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್ ಅಂಬೇಡ್ಕರ್ ಅವರ ಜಯಂತಿಗೆ ಶುಭ ಕೋರಿ ಹಾಕಲಾಗಿದ್ದ ಬ್ಯಾನರ್‌ಗೆ ಕಿಡಿಗೇಡಿಗಳು ಹರಿದು ಹಾಕಿದ್ದು ಇದರ ವಿರುದ್ಧ ಗ್ರಾಮಸ್ಥರು ಗ್ರಾಮಾಂತರ ಠಾಣೆಗೆ ದೂರು ನೀಡಿದ್ದಾರೆ.

ಈ ಬಗ್ಗೆ ಅಟ್ರಾಸಿಟಿ ಸಮಿತಿಯ ಸದಸ್ಯರಾದ ಶಿವಮ್ಮ ಅವರು ಮಾತನಾಡಿ, ಕೊಕ್ಕನಘಟ್ಟ ಗ್ರಾಮದಲ್ಲಿ ಭಾನುವಾರ ರಾತ್ರಿ ಕಿಡಿಗೇಡಿಗಳು ಬೀದಿ ದ್ವೀಪ ಹಾರಿಸಿ ಚಾಕು ಅಥವಾ ಹರಿತವಾದ ಆಯುಧದಿಂದ ಅಂಬೇಡ್ಕರ್ ಜಯಂತಿ ಅಂಗವಾಗಿ ಹಾಕಲಾಗಿದ್ದ ಬ್ಯಾನರ್ ಹರಿದು ಹಾಕಿದ್ದಾರೆ ಇದು ಖಂಡನೀಯ, ಇದು ವಿಶ್ವ ಶ್ರೇಷ್ಠ ಸಂವಿಧಾನ ನೀಡಿದ ಅಂಬೇಡ್ಕರ್ ಅವರಿಗೆ ಮಾಡಿದ ಅಪಮಾನವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಸರ್ವ ಜನಾಂಗಕ್ಕೂ ಸಮಾನ ಅವಕಾಶ ನೀಡಿ ಸಮಾಜದಲ್ಲಿ ಎಲ್ಲರೂ ಗೌರವಯುತವಾಗಿ ಬದು ಕುವಂತೆ ಸಂವಿಧಾನ ರೂಪಿಸಿದ್ದಾರೆ, ಆದರೆ ಕೆಲ ಕಿಡಿಗೇಡಿಗಳು ಇಂದಿಗೂ ಅವರನ್ನು ದ್ವೇಷಿಸುವ ಅಥವಾ ಅವರಿಗೆ ಪದೇ ಪದೇ ಅವಮಾನ ಮಾಡುವ ಕೆಲಸ ಮಾಡುತ್ತಿದ್ದು ಇಂತವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಕೊಕ್ಕನಘಟ್ಟ ಗ್ರಾಮದಲ್ಲಿ ನಡೆದಿರುವ ಅಹಿತಕರ ಘಟನೆ ಇದೇ ಮೊದಲ ಬಾರಿಗೆ ಅಲ್ಲ, ಕಳೆದ ಮೂರು ವರ್ಷಗಳಿಂದ ಇದೇ ರೀತಿಯ ದುಷ್ಕೃತ್ಯ ಎಸಗುತ್ತಿರುವ ಕಿಡಿಗೇಡಿಗಳನ್ನು ಕೂಡಲೇ ಬಂಧಿಸಬೇಕು ಇಲ್ಲವಾದರೆ ಮುಂದಿನ ದಿನಗಳಲ್ಲಿ ಎಸ್ಪಿ ಕಚೇರಿ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಗ್ರಾಮದಲ್ಲಿ ಅಶಾಂತಿ ವಾತಾವರಣ ಸೃಷ್ಟಿಯಾಗಬಾರದು ಎಂಬ ದೃಷ್ಟಿಯಿಂದ ಕಳೆದ ಎರಡು ವರ್ಷಗಳಿಂದ ಸಂಧಾನ ಮಾತುಕತೆ ಮಾಡಿ ಶಾಂತಿ ಕಾಪಾಡಿಕೊಂಡು ಬಂದಿದ್ದೇವೆ ಆದರೆ ಈ ಭಾರಿ ಅಲ್ಲಿನ ಸಿಸಿಟಿವಿ ವೀಡಿಯೋ ಆಧರಿಸಿ ಆರೋಪಿಗಳನ್ನು ಬಂಧಿಸಿ ಅವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಒತ್ತಾಯಿಸಿದರು.

ಗ್ರಾಮಸ್ಥರಾದ ಕುಮಾರ, ಸ್ವಾಮಿ, ಅರುಣ್, ಸಾಗರ್, ಗಿರೀಶ್, ರವಿ, ಪ್ರಮೋದ್, ಸ್ವಾಮಿ, ದೇವರಾಜ್, ಭರತ್, ಗೌತಮ್,ಸಚಿನ್, ಕಿರಣ್, ಶ್ರೀನಿವಾಸ್, ಸಾಗರ್, ಪಾಪಣ್ಣ, ಸುನೀಲ್ ಆನಂದ್ ಇತರರು ಉಪಸ್ಥಿತರಿದ್ದರು.

## ಸಿಸಿ ರಸ್ತೆ ಚರಂಡಿ ನಿರ್ಮಾಣಕ್ಕೆ ಶಾಸಕ ಗಣೇಶ್ ಪ್ರಸಾದ್ ಗುದ್ದಲಿಪೂಜೆ



**ಗುಂಡ್ಲುಪೇಟೆ:** ತಾಲ್ಲೂಕಿನ ಬೇಗೂರು ಸಮೀಪದ ಕಾಳನಹುಂಡಿ ಗ್ರಾಮದಲ್ಲಿ ಸುಮಾರು 20 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ನಿರ್ಮಾಣಕ್ಕೆ ಶಾಸಕ ಎಚ್ ಎಂ ಗಣೇಶ್ ಪ್ರಸಾದ್ ಗುದ್ದಲಿಪೂಜೆ ನೆರವೇರಿಸಿದರು.

ನಂತರ ಮಾತನಾಡಿ ಮುಖ್ಯಮಂತ್ರಿ ಗಳ ವಿಶೇಷ ಅನುದಾನದಲ್ಲಿ ಸಿಸಿ ರಸ್ತೆ ಚರಂಡಿ ಗಳ ಅಭಿವೃದ್ಧಿ ಮಾಡುತ್ತಿದ್ದು ಮುಂದಿನ ದಿನಗಳಲ್ಲಿ ಕ್ಷೇತ್ರದ ಅಭಿವೃದ್ಧಿ ಗೆ ಮುಖ್ಯಮಂತ್ರಿ ಗಳು ಹೆಚ್ಚಿನ ಅನುದಾನ ನೀಡುವುದಾಗಿ ಹೇಳಿದ್ದು ಎಲ್ಲಿ ರಸ್ತೆಗಳು ಹಾಗಿಲ್ಲ ಅಲ್ಲಿ ಸಿಸಿ ರಸ್ತೆ ನಿರ್ಮಾಣ ಮಾಡುವ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ತಾಪಂ ಮಾಜಿ ಅಧ್ಯಕ್ಷ ಬಸವರಾಜು, ಮಾಜಿ ಗ್ರಾಪಂ ಸದಸ್ಯ ಪುನೀತ್ ಬೇಗೂರು ಗ್ರಾಮ ಪಂ ಸದಸ್ಯೆರತ್ನಮ್ಮ ರಾಜುಗೌಡ, ಮಹದೇವೆಗೌಡ, ಕರಿಗೌಡ, ಶಿವಬಸವೇಗೌಡ ಸೇರಿದಂತೆ ಮತ್ತಿತರರಿದ್ದರು ಕೆಆರ್ ಡಿಐಎಲ್ ಇಂಜಿನೀಯರ್ ರಕ್ಷಿತ್ ಮತ್ತಿತರರಿದ್ದರು.

## ಮಕ್ಕಳಲ್ಲಿರುವ ಸುಪ್ತಪ್ರತಿಭೆ ಹೊರತರಲು ಬೇಸಿಗೆ ಶಿಬಿರ ಪೂರಕ: ಶಿಕ್ಷಕ ಮಹದೇವಸ್ವಾಮಿ

**ಚಾಮರಾಜನಗರ:** ಮಕ್ಕಳಲ್ಲಿರುವ ಸೂಪ್ತಪ್ರತಿಭೆಯನ್ನು ಗುರುತಿಸಿ ಹೊರ ತರಲು ಬೇಸಿಗೆ ಶಿಬಿರಗಳು ಪೂರಕವಾಗಿವೆ ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಕಾರ್ಯಾಧ್ಯಕ್ಷೆ ಮಹದೇವಸ್ವಾಮಿ ಹೇಳಿದರು.

ನಗರದ ನ್ಯಾಯಾಲಯದ ರಸ್ತೆಯಲ್ಲಿರುವ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಕಚೇರಿಯಲ್ಲಿ ಪವನ್‌ಸೇವಾ ಟ್ರಸ್ಟ್ ಮತ್ತು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಜಿಲ್ಲಾ ಶಾಖೆ ಇವರ ಸಂಯುಕ್ತಾಶ್ರಯದಲ್ಲಿ ಎಲ್‌ಜಿಯಿಂದ 8ನೇ ತರಗತಿ ಮಕ್ಕಳಿಗಾಗಿ 7 ದಿನಗಳ ಕಾಲ ಹಮ್ಮಿಕೊಂಡಿರುವ ಚಿತ್ರಕಲಾ ಬೇಸಿಗೆ ಶಿಬಿರಕ್ಕೆ ಅವರು ಚಾಲನೆ ನೀಡಿ ಮಾತನಾಡಿದರು. ಪಠ್ಯದಷ್ಟೆ, ಪಠ್ಯೇತರ ಚಟುವಟಿಕೆಗಳಿಗೆ, ಮಕ್ಕಳ ಕಲಿಕೆಗೆ ಸರ್ಕಾರ ಬಹಳಷ್ಟು ಒತ್ತು ನೀಡಿದೆ. ಪುಸ್ತಕ ಓದುವುದಷ್ಟೆ ಓದು ಅಲ್ಲ. ಪುಸ್ತಕ ಓದುವ ಜೊತೆಯಲ್ಲಿ ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸಿ ಹೊರತರುವುದು ನಿಜವಾದ ಕಲಿಕೆಯಾಗಿದೆ ಆ ನಿಟ್ಟಿನಲ್ಲಿ ಇಂತಹ ಬೇಸಿಗೆ ಶಿಬಿರಗಳು ಉಪಯುಕ್ತವಾಗಿವೆ ಎಂದರು.

ಪವನ್ ಸೇವಾ ಸಂಸ್ಥೆಯು ಬಹಳ ವರ್ಷಗಳಿಂದ ಸಾಮಾಜಮುಖಿ ಕಾರ್ಯಕ್ರಮಗಳನ್ನು ಸುಮಾರು ವರ್ಷಗಳಿಂದ ಆಯೋಜನೆ ಮಾಡಿಕೊಂಡು ಬರುತ್ತಿದ್ದಾರೆ. ಮತ್ತಷ್ಟು ಸಾಮಾಜಮುಖಿ ಕೆಲಸಗಳನ್ನು ಮಾಡಲಿ ಅವರ ಜೊತೆ ಸದಾ ಕರ್ನಾಟಕ ಸರ್ಕಾರಿ ನೌಕರರ ಸಂಘ, ಶಿಕ್ಷಕರ ಸಂಘ ಇರುತ್ತದೆ ಎಂದರು.

ಅಂತಾರಾಷ್ಟ್ರೀಯ ಜಾನಪದ ಗಾಯಕ ಸಿ. ಎಂ. ನರಸಿಂಹಮೂರ್ತಿ ಮಾತನಾಡಿ, ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಬೇಸಿಗೆ ಶಿಬಿರ ಸಹಕಾರಿಯಾಗಿದ್ದು, ಮಕ್ಕಳಲ್ಲಿ ಆತ್ಮವಿಶ್ವಾಸ, ಕೌಶಲ್ಯಾಭಿವೃದ್ಧಿ, ಆಕರ್ಷಕ ಚಿತ್ರ ಬರೆಸುವಿಕೆ ಹಾಗು ಮಕ್ಕಳಲ್ಲಿರುವ ಸುಪ್ತಪ್ರತಿಭೆ ಹೆಚ್ಚು ಮಾಡಲು ಇಂತಹ ನೆರವಾಗಲಿದ್ದು, ಮಕ್ಕಳಿಗೆ ಅಶಕ್ತಿಯಿರುವ ಕ್ಷೇತ್ರದಲ್ಲಿ ಪೋಷಕರು ಅವಕಾಶ ಮಾಡಿಕೊಟ್ಟರೆ ಅಂತಹ ಕ್ಷೇತ್ರದಲ್ಲಿ ದೊಡ್ಡಮಟ್ಟದಲ್ಲಿ ಮಕ್ಕಳು ಬೆಳೆಯಲು ಸಾಧ್ಯವಾಗುತ್ತದೆ' ಎಂದರು.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಸಿ.ಕೆ.ರಾಮಸ್ವಾಮಿ ಮಾತನಾಡಿದರು.

ಕಾರ್ಯಕ್ರಮದಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭರತ್ ಭೂಷಣ, ಜಿಲ್ಲಾ ಖಜಾಂಚಿ ಶಿವಕುಮಾರಯ್ಯ, ಹಿರಿಯ ಉಪಾಧ್ಯಕ್ಷ ಎಂ.ಡಿ ಮಹದೇವಯ್ಯ, ನಿರ್ದೇಶಕ ಶಾಂತರಾಜು, ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕು ಅಧ್ಯಕ್ಷ ಸಿ.ಕೆ.ರಾಮಸ್ವಾಮಿ, ಶಿಬಿರದ ಅಯೋಜಕ ಸಿ.ಎನ್. ಸಂಪತ್‌ಕುಮಾರ್, ಪವನ್ ಸೇವಾ ಟ್ರಸ್ಟ್ ಕಾರ್ಯದರ್ಶಿ ವೀಣಾ ಸಂಪತ್‌ಕುಮಾರ್, ಕಲಾವಿದರಾದ ಎನ್.ಅನಿಲ್‌ಕುಮಾರ್, ರವಿತೇಜ್, ಗೌಸ್, ರಾಜೇಶ್, ಸಮಾಜ ಕಲ್ಯಾಣ ಇಲಾಖೆಯ ಸಿ.ಎ.ರಾಜು, ಶಿಕ್ಷಕರಾದ ಇಂದಿರಾ, ಕಾವೇರಿ, ಜೈತ್ರಾ, ಜಯಶಂಕರ್, ಪೋಷಕರು, ವಿದ್ಯಾರ್ಥಿಗಳು ಇತರರು ಭಾಗವಹಿಸಿದ್ದರು.

## ಕುಡಿಯುವ ನೀರಿನ ಸಮಸ್ಯೆ ಪರಿಹರಿಸಿ


### ಜಿಲ್ಲಾಧಿಕಾರಿ ಶ್ರೀರೂಪ ಸೂಚನೆ । ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ

**ಚಾಮರಾಜನಗರ:** ಕರ್ನಾಟ ಯಾವುದೇ ಭಾಗದಲ್ಲಿ ಜನ–ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಕಂಡುಬಂದಲ್ಲಿ ತಕ್ಷಣವೇ ಪರ್ಯಾಯ ವ್ಯವಸ್ಥೆಗಳ ಮೂಲಕ ಶೀಘ್ರವಾಗಿ ಪರಿಹರಿಸುವಂತೆ ಜಿಲ್ಲಾಧಿಕಾರಿ ಶ್ರೀರೂಪ ಅವರು ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿಂದು ಕುಡಿಯುವ ನೀರು ಮತ್ತು ಮೇವಿನ ಲಭ್ಯತೆ ಕುರಿತು ಜಿಲ್ಲಾ ಹಾಗೂ ತಾಲೂಕುಮಟ್ಟದ ಅಧಿಕಾರಿಗಳೊಂದಿಗೆ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿ ಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಂಬರುವ ಮೇ ತಿಂಗಳಲ್ಲಿ ಮಳೆಯಾಗುವ ನಿರೀಕ್ಷೆ ಇದೆ. 15ರಿಂದ 30 ದಿನಗಳವರೆಗೆ ಜನ, ಜಾನುವಾರುಗಳಿಗೆ ಕುಡಿಯುವ ನೀರನ್ನು ಸಮರ್ಪಕವಾಗಿ ಒದಗಿಸಬೇಕಿದೆ. ಬೋವೆಲ್, ಖಾಸಗಿ ಬೋವೆಲ್, ಟ್ಯಾಂಕರ್, ತೆರೆದ ಬಾವಿ, ಕೈಪಂಪ್ ಸೇರಿದಂತೆ ಇತರೆ ಪರ್ಯಾಯ ವ್ಯವಸ್ಥೆಗಳ ಮೂಲಕ ಕುಡಿಯುವ ನೀರು ಪೂರೈಸಿ ಸಮಸ್ಯೆ ಎದುರಾಗದಂತೆ ನೋಡಿಕೊಳ್ಳಬೇಕು. ಎಲ್ಲಾ ತಾಲೂಕು ಕಾರ್ಯ ನಿರ್ವಾಹಕ ಅಧಿಕಾರಿಗಳು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಕೇಂದ್ರಸ್ಥಾನದಲ್ಲಿದ್ದು, 24*7 ಅವಧಿ ಯಲ್ಲಿ ಕಾರ್ಯನಿರ್ವಹಿಸಲು ಸನ್ನದ್ಧರಾಗಿರುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಪ್ರತಿ ವಾರ ಹಾಗೂ 15 ದಿನಗಳಿಗೊಮ್ಮೆ ಕುಡಿಯುವ ನೀರಿನ ಲಭ್ಯತೆ, ಪೂರೈಕೆ ಕುರಿತು ತಾಲೂಕು ಮಟ್ಟದ ಟಾಸ್ಕ್‌ಫೋರ್ಸ್ ಸಭೆ ನಡೆಸಿ ಆಯಾ ಭಾಗದ ಸಮಸ್ಯೆಗಳನ್ನು ಅರಿಯಬೇಕು. ಜಿಲ್ಲೆಯ ಎಲ್ಲಾ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ತಮ್ಮ ವ್ಯಾಪ್ತಿಯಲ್ಲಿರುವ ಸಮಸ್ಯೆಗಳನ್ನು ಗಮನದಲ್ಲಿರಿಸಿಕೊಂಡು ಜನರ ಸಮಸ್ಯೆಗೆ ತಕ್ಷಣವೇ ಸ್ಪಂದಿಸುವ ಕೆಲಸವಾಗಬೇಕು. ಶುದ್ಧ ಕುಡಿಯುವ ನೀರಿನ ಘಟಕ (ಆರ್.ಓ ಪ್ಲಾಂಟ್)ಗಳನ್ನು ಸುವ್ಯವಸ್ಥೆಯಲ್ಲಿಟ್ಟುಕೊಳ್ಳಬೇಕು. ಎಲ್ಲಾ ಗ್ರಾಮಗಳಲ್ಲಿ ಜಾನುವಾರುಗಳಿಗಾಗಿ ಕುಡಿಯುವ ನೀರಿನ ತೊಟ್ಟಿಗಳನ್ನು ಸ್ವಚ್ಛಗೊಳಿಸಿ ಪ್ರತಿನಿತ್ಯ ನೀರು ತುಂಬಿಸುವ ವ್ಯವಸ್ಥೆಯಾಗಬೇಕು. ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ನೋಡಿಕೊಳ್ಳಬೇಕು. ಜನರ ದೂರುಗಳಿಗೆ ಸಂಬಂಧಪಟ್ಟ ಅಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿ ಮಾಡಲಾಗುವುದೆಂದು ನಿರ್ದೇಶನ ನೀಡಿದರು.



### ಟಾಸ್ಕ್‌ಫೋರ್ಸ್ ಸಭೆಗಳನ್ನು ನಡೆಸಿ ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕಿದೆ

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮೋನಾ ರೋತ್ ಅವರು ಮಾತನಾಡಿ ಕುಡಿಯುವ ನೀರಿಗೆ ಸಂಬಂಧಿಸಿದಂತೆ ಎಲ್ಲಾ ತಾಲೂಕುಗಳಲ್ಲಿ ಕಡ್ಡಾಯವಾಗಿ ಟಾಸ್ಕ್‌ಫೋರ್ಸ್ ಸಭೆಗಳನ್ನು ನಡೆಸಿ ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು. ಗ್ರಾಮೀಣ ಭಾಗದಲ್ಲಿ ಜಲಜೀವನ್ ಮಿಷನ್ ಯೋಜನೆ ಕಾಮಗಾರಿ ಶೀಘ್ರಗತಿಯಲ್ಲಿ ಪೂರ್ಣವಾಗಬೇಕು. ಕುಡಿಯುವ ನೀರಿನ ಸಮಸ್ಯೆಯಾಗದಂತೆ ರೂಪುರೇಷೆಗಳನ್ನು ಸಿದ್ಧಪಡಿಸಬೇಕು. ಅಗತ್ಯವಿರುವಡೆ ಟ್ಯಾಂಕರ್ ಮೂಲಕ ಕುಡಿಯುವ ನೀರು ಪೂರೈಸಬೇಕು. ಪಂಚಾಯಿತಿಗಳಲ್ಲಿ ತೆರಿಗೆ ಸಂಗ್ರಹ ಕಾರ್ಯ ಚುರುಕುಗೊಳಿಸಬೇಕು ಎಂದು ತಿಳಿಸಿದರು.

ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಮುಂಬರುವ ದಿನಗಳಲ್ಲಿ ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಎದುರಾಗುವ ಸಮಸ್ಯಾತ್ಮಕ ಗ್ರಾಮ ಪಂಚಾಯಿತಿಗಳು ಹಾಗೂ ಗ್ರಾಮಗಳನ್ನು ಗುರುತಿಸಿ ಪಟ್ಟಿ ಮಾಡಲಾಗಿದೆ. ಚಾಮರಾಜನಗರ ತಾಲೂಕಿನ 25 ಗ್ರಾಮಪಂಚಾಯಿತಿಗಳ 41 ಗ್ರಾಮಗಳಲ್ಲಿ, ಗುಂಡ್ಲು ಪೇಟೆಯ 7 ಗ್ರಾಮಪಂಚಾಯಿತಿಯ 7 ಗ್ರಾಮಗಳಲ್ಲಿ, ಯಳಂದೂರಿನ 8 ಗ್ರಾಮ ಪಂಚಾಯಿತಿಗಳ 10 ಗ್ರಾಮಗಳಲ್ಲಿ, ಕೊಳ್ಳೇಗಾಲ 5 ಗ್ರಾಮ ಪಂಚಾಯಿ ತಿಗಳ 11 ಗ್ರಾಮಗಳಲ್ಲಿ ಹಾಗೂ ಹನೂರು ತಾಲೂ ಕಿನ 22 ಗ್ರಾಮ ಪಂಚಾಯಿತಿಗಳ 60 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸುವ ಸಾಧ್ಯತೆ ಇದೆ. ಎಲ್ಲಾ ಗ್ರಾಮಗಳಲ್ಲಿ ಆಯಾ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಹಂತದಲ್ಲಿಯೇ ಸಮಸ್ಯೆ ಪರಿಹರಿಸಲು ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳ ಬೇಕು ಎಂದರು.

ನೀರಿನ ಲಭ್ಯತೆ ಪರಿಶೀಲಿಸಿ ಅಗತ್ಯವಿರುವೆಡೆ ಹೊಸ ದಾಗಿ ಬೋವೆಲ್ ಕೊರೆಸಬೇಕು ಅಥವಾ ರೀಡ್ರಿಲ್, ರೀ ಬೋರ್ ಮಾಡಿಸಬೇಕು. ಖಾಸಗಿ ಬೋವೆಲ್ ಬಳಸಿಕೊಳ್ಳಬೇಕು. ಅವಶ್ಯವಿದ್ದರೆ ಟ್ಯಾಂಕಗಳ ಮೂಲಕ ನೀರು ಪೂರೈಸಬೇಕು. ಕುಡಿಯುವ ನೀರಿನ ಪೈಲೈಗೆ ಚರಂಡಿ ನೀರು ಸೇರದಂತೆ ಎಚ್ಚರ ವಹಿಸಬೇಕು. ಕುಡಿಯುವ ನೀರನ್ನು ಪರೀಕ್ಷೆಗೊಳಪಡಿಸಿ ಶುದ್ಧ ತೆಯ ಕುರಿತು ಖಚಿತಪಡಿಸಿಕೊಳ್ಳಬೇಕು. ಎಲ್ಲಾ ಪಂಚಾಯಿತಿ ಅಧಿಕಾರಿಗಳು ಕುಡಿಯುವ ನೀರಿನ ಗ್ರಾಮವಾರು ಸಮಸ್ಯೆಗಳನ್ನು ಪಟ್ಟಿಮಾಡಿ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರಕ್ಕೆ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿಯವರು ಅಧಿಕಾರಿಗಳಿಗೆ ಸೂಚನೆ ನೀಡಿದರು. ಇದೇ ವೇಳೆ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದಡಿ 9ನೇ ಸುತ್ತಿನ ಕಾಲುಬಾಯಿ ರೋಗದ ಲಸಿಕಾ ಅಭಿಯಾನದ ಜಾಗ್ರತಿ ಪೋಸಗಳನ್ನು ಸಭೆಯಲ್ಲಿ ಬಿಡುಗಡೆಗೊಳಿಸಲಾಯಿತು. ಹೆಚ್ಚುವರಿ ಜಿಲ್ಲಾಧಿಕಾರಿ ಟಿ. ಜವರೇಗೌಡ, ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ ಶೃತಿ, ಜಿಲ್ಲಾಮಟ್ಟದ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

### ಜಲಜೀವನ್ ಮಿಷನ್ ಕಾಮಗಾರಿ ಇನ್ನೂ ಬಾಕಿ

ಜಿಲ್ಲೆಯಾದ್ಯಂತ ಜಲಜೀವನ್ ಮಿಷನ್ ಕಾಮಗಾರಿ ಇನ್ನೂ ಬಾಕಿ ಇರುವುದು ಕಂಡುಬಂದಿದೆ. ಕೆಲವೆಡೆ ಪೈಲೈನ್ ಅಳವಡಿಸುವ ಕಾಮಗಾರಿ ಅಪೂ ರ್ಣವಾಗಿರುವುದನ್ನು ಗಮನಿಸಲಾಗಿದೆ. ಕಾಮಗಾರಿ ಪೂರ್ಣಗೊಳಿಸದಿರುವ ಗುತ್ತಿಗೆದಾರರನ್ನು ಕಪ್ಪುಪ ಟ್ಟಿಗೆ ಸೇರಿಸಲು ಕ್ರಮ ವಹಿಸಲಾಗುವುದು. ಕುಡಿಯುವ ನೀರಿಗೆ ಸಂಬಂಧಿಸಿದಂತೆ ಪ್ರಸ್ತುತ ಸಂದರ್ಭ ದಲ್ಲಿ ವಿದ್ಯುತ್ ಸಂಪರ್ಕ ಕಡಿತಗೊಳಿಸಿ ಜನರಿಗೆ ತೊಂದರೆ ನೀಡಬಾರದೆಂದು ಚೆಸ್ಕಾಂ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

## ಗ್ರಾಮ ಪಂಚಾಯಿತಿಗಳ ಚುನಾಯಿತ ಸದಸ್ಯ ಸ್ಥಾನಗಳ ನಿಗದಿ: ಆಕ್ಷೇಪಣೆ, ಅಹವಾಲು ಸಲ್ಲಿಕೆಗೆ ಅವಕಾಶ

**ಚಾಮರಾಜನಗರ:** ಜಿಲ್ಲೆಯ ಗ್ರಾಮ ಪಂಚಾಯಿತಿಗಳ ಚುನಾಯಿತ ಸದಸ್ಯರ ಸ್ಥಾನಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ ಪ್ರಕರಣ 5(1) ರಂತೆ ನಿಗದಿಪಡಿಸಲಾಗಿದ್ದು, ಈ ಸಂಬಂಧ ಸಾರ್ವಜನಿಕರಿಂದ ಆಕ್ಷೇಪಣೆ ಹಾಗೂ ಅಭಿಪ್ರಾಯಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಜಿಲ್ಲೆಯ ಗ್ರಾಮ ಪಂಚಾಯಿತಿಗಳ ಚುನಾಯಿತ ಸದಸ್ಯರ ಸ್ಥಾನಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ ಪ್ರಕರಣ 5(1) ರಂತೆ ನಿಗದಿಪಡಿಸಲಾಗಿದ್ದು, ಈ ವಿವರಗಳನ್ನು ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗದ ವೆಬ್ ಸೈಟ್ (https://rdpr.karnataka.gov.in/rde/public/) ನಲ್ಲಿ ಮತ್ತು ದಿನಾಂಕ 18.04.2026 ಕರ್ನಾಟಕ ವಿಶೇಷ ರಾಜ್ಯಪತ್ರದಲ್ಲಿ (ರಾಜ್ಯಪತ್ರದದಲ್ಲಿ ಪ್ರಕಟಿಸಲಾಗಿದೆ.

ಪ್ರಕಟಣೆಯ ಕುರಿತಂತೆ ವಿಶೇಷ ರಾಜ್ಯಪತ್ರದ ಪ್ರತಿಯನ್ನು ಜಿಲ್ಲಾಧಿಕಾರಿಗಳ ಕಚೇರಿ ಹಾಗೂ ಆಯಾ ತಾಲ್ಲೂಕು ತಹಶೀಲ್ದಾರ್ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಗ್ರಾಮ ಪಂಚಾಯಿತಿಗಳ ಚುನಾಯಿತ ಸದಸ್ಯ ಸ್ಥಾನಗಳ ಪ್ರಕಟಣೆ ಕುರಿತಂತೆ ಸಾರ್ವಜನಿಕರು ಆಯೋಗದ ವೆಸೈನಲ್ಲಿ, ಸದರಿ ವೆಸೈಟ್ ಮುಖಪುಟದ ಎಡಭಾಗದಲ್ಲಿರುವ ಸಾರ್ವಜನಿಕ ಸಲಹೆಗಳು ಎಂಬ ಶೀರ್ಷಿಕೆಯನ್ನು ಕ್ಲಿಕ್ ಮಾಡಿ, ತಮ್ಮ ಆಕ್ಷೇಪಣೆ / ಅಭಿಪ್ರಾಯಗಳನ್ನು ಆಲೈನ್ ಮೂಲಕ ಆಯೋಗದ ವೆಸೈನಲ್ಲಿ ಮತ್ತು ಖುದ್ದಾಗಿ ಅಂಚೆ ಮೂಲಕ ಬೆಂಗಳೂರಿನ ಆಯೋಗದ ಕಚೇರಿಯಲ್ಲಿ ಮಾತ್ರ ಮೇ 2ರ ಸಂಜೆ 5.30 ಗಂಟೆಯೊಳಗೆ ಸಲ್ಲಿಸಲು ಅವಕಾಶವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಧಿಕಾರಿಗಳ ಕಚೇರಿ ಅಥವಾ ಉಪ ವಿಭಾಗಾಧಿಕಾರಿಗಳ ಕಚೇರಿ ಹಾಗೂ ಆಯಾ ತಾಲ್ಲೂಕಿನ ತಹಶೀಲ್ದಾಗಳ ಕಚೇರಿಯಲ್ಲಿ ಸಂಪರ್ಕಿಸಬಹುದಾಗಿದೆ.

ಮೇ 2ರ ಸಂಜೆ 5.30 ಗಂಟೆಯವರೆಗೆ ಆಕ್ಷೇಪಣೆ ಮತ್ತು ಅಹವಾಲುಗಳನ್ನು ಸಲ್ಲಿಸಿದವರು ಮೇ 5ರಂದು ಮಧ್ಯಾಹ್ನ 2.30 ರಿಂದ 5 ಗಂಟೆಯವರೆಗೆ ಬೆಂಗಳೂರಿನ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿಗಳ ಕಟ್ಟಡ, ಗೇಟ್ ನಂ.2, 2ನೇ ಮಹಡಿ, ಕೊಠಡಿ ಸಂಖ್ಯೆ 229 ಮತ್ತು 230 ರಲ್ಲಿ ನಡೆಯುವ ಅದಾಲತ್ ನಲ್ಲಿ ಭಾಗವಹಿಸಲು ಇಚ್ಛಿಸಿದಲ್ಲಿ, ತಮ್ಮ ಆಧಾರ್ ಅಥವಾ ಗುರುತಿನ ಚೀಟಿ ಅಥವಾ ಸರ್ಕಾರವು ನೀಡಿರುವ ಭಾವಚಿತ್ರವುಳ್ಳ ಯಾವುದೇ ಗುರುತಿನ ಚೀಟಿಯ ಪ್ರತಿಯನ್ನು ಕಡ್ಡಾಯವಾಗಿ ತೆಗೆದುಕೊಂಡು ಹೋಗತಕ್ಕದ್ದೆಂದು ಜಿಲ್ಲಾಧಿಕಾರಿ ಶ್ರೀರೂಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಹದೇವ ಪ್ರಸಾದ್ ವೈ.ಎಸ್. ಉನ್ನತ ಶ್ರೇಣಿಯಲ್ಲಿ ತೇರ್ಗಡೆ



**ತಿ.ನರಸೀಪುರ:** ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಪಟ್ಟಣದ ಲಿಟಲ್ ಫ್ಲವರ್ ಶಾಲೆಯ ವಿದ್ಯಾರ್ಥಿ ಮಹದೇವ ಪ್ರಸಾದ್ ವೈ. ಎಸ್. 578(92.48) ಅಂಕಗಳೊಂದಿಗೆ ಅತ್ಯುನ್ನತ ಶ್ರೇಣಿಯಲ್ಲಿ ಉತ್ತೀರ್ಣನಾಗಿದ್ದಾನೆ.

ಈತ ವಿವೇಕಾನಂದ ನಗರದ ನಿವಾಸಿ ಉಪ ನ್ಯಾಸಕ ಸೋಮಣ್ಣ ಹಾಗೂ ಶಿಕ್ಷಕಿ ಎಂ ವಿಜಯ ದಂಪತಿಗಳ ಪುತ್ರ.

## ಪುಸ್ತಕಗಳು ಆತ್ಮ ಸಂತೋಷವನ್ನು ನೀಡುತ್ತವೆ

**ಚಾಮರಾಜನಗರ:** ಪುಸ್ತಕಗಳು ಆತ್ಮ ಸಂತೋಷವನ್ನು ನೀಡುತ್ತವೆ. ಪುಸ್ತಕಗಳ ಅಧ್ಯಯನದಿಂದ ಮನಸ್ಸು ಒತ್ತಡರಹಿತವಾಗಿ ದೇಹದ ಮೇಲೆ ಸಕಾರಾತ್ಮಕವಾದ ಪರಿಣಾಮವನ್ನು ಬೀರುತ್ತವೆ. ಪುಸ್ತಕಗಳೇ ಜಗತ್ತಿನ ಅತ್ಯುತ್ತಮ ಸ್ನೇಹಿತ ಎಂದು ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಸಂಸ್ಕೃತಿ ಚಿಂತಕ ಸುರೇಶ್ ಎನ್ ಋಗ್ವೇದಿ ತಿಳಿಸಿದರು.

ನಗರದ ಜೈ ಹಿಂದ್ ಪ್ರತಿಷ್ಠಾನ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪುಸ್ತಕ ದಿನಾಚರಣೆ ಹಾಗೂ ಪುಸ್ತಕಗಳ ಮಹತ್ವ ಕುರಿತ ಕಾರ್ಯಕ್ರಮದಲ್ಲಿ ಮಾತನಾಡಿದರು.

ಮೀಸಲಿಡಬೇಕು. ಪುಸ್ತಕಗಳ ಅನಾವರಣದಿಂದ ಮಕ್ಕಳಲ್ಲಿ ಪುಸ್ತಕ ಪ್ರೀತಿ ಹೆಚ್ಚುತ್ತದೆ. ಪುಸ್ತಕವನ್ನು ಓದುವ ಹವ್ಯಾಸ ಬೆಳೆಸಿದಾಗ ಜ್ಞಾನಾರ್ಜನೆ ಹೆಚ್ಚಿ ವ್ಯಕ್ತಿತ್ವ ನಮ್ಮ ಅರಿವಿಲ್ಲದೆ ವಿಕಾಸನವಾಗುತ್ತದೆ. ಜ್ಞಾನ ಲೋಕದಲ್ಲಿರುವ ಜಗತ್ತಿನಲ್ಲಿ ಪುಸ್ತಕಗಳೇ ಆಸ್ತಿಯಾಗಬೇಕು. ಪುಸ್ತಕಗಳ ಅಧ್ಯಯನದಿಂದ ಭಾವ ಚಿಂತನೆ ಹೆಚ್ಚಾಗಿ ಕವಿಯಾಗಿ, ಸಾಹಿತಿಯಾಗಿ, ನಾಟಕಕಾರರಾಗಿ, ಗಾಯಕರಾಗಿ ಸೃಜನಶೀಲತೆ ಬೆಳೆಯಬಹುದು ಎಂದು ಹೇಳಿದರು.

ಶಾಲಾ ಕಾಲೇಜುಗಳು, ಸಾರ್ವಜನಿಕ ಗ್ರಂಥಾಲಯಗಳು, ಪಂಚಾಯತಿಗಳು, ವಿಶ್ವವಿದ್ಯಾಲಯಗಳಲ್ಲಿ ಅಪಾರ ಗ್ರಂಥ ಬಂಡಾರಗಳೇ ಇದೆ. ಅವುಗಳ ಸದುಪಯೋಗಕ್ಕೆ ಜಾಗೃತಿಯ ಅಗತ್ಯವಿದೆ. ಪ್ರತಿಯೊಬ್ಬರು ಒಂದು ಗಂಟೆಗಳ ಕಾಲ ಪುಸ್ತಕದ ಅಧ್ಯಯನವನ್ನು ಮಾಡಿದಾಗ ರೋಗಗಳಿಂದ ದೂರ ವಾಗ ಬಹುದು ಎಂದು ತಿಳಿಸಿದರು.




ಅಖಿಲ ಭಾರತೀಯ ಸಾಹಿತ್ಯ ಪರಿಷತ್ತಿನ ಜಿಲ್ಲಾ ಸಹ ಕಾರ್ಯದರ್ಶಿ ಶ್ರೀಮತಿ ಹೆಚ್ ಎಂ ಲತಾ ಹರದನಹಳ್ಳಿ ಮಾತನಾಡಿ ಜೈ ಹಿಂದ್ ಪ್ರತಿಷ್ಠಾನ ಮತ್ತು ಋಗ್ವೇದಿ ಕ್ಲಬ್ ವಿಶ್ವ ಪುಸ್ತಕ ದಿನಾಚರಣೆ ಅಂಗವಾಗಿ ಪುಸ್ತಕ ಪ್ರದರ್ಶನವನ್ನು ಮಾಡಿರುವುದು ಹೆಮ್ಮೆಯ ಸಂಗತಿ. ಪುಸ್ತಕದ ಪ್ರೀತಿಯನ್ನು ಬೆಳೆಸೋಣ ಎಂದರು.


ಕಾರ್ಯಕ್ರಮದಲ್ಲಿ ಲಕ್ಷಮ್ಮ, ಗಿರೀಗೌಡ, ಬಸವರಾಜು ಪಿ ಕುಮಾರ ರಾಜೇಂದ್ರ ರವಿ, ಶ್ರಾವ್ಯ ಋಗ್ವೇದಿ, ಸಾನಿಕ, ಕುಸುಮ ಹಾಜರಿದ್ದರು.

## ಪೊಲೀಸ್ ಅಧಿಕಾರಿಯಾದ ಜೆಪಿಯ ಯುವ ಮೋರ್ಚಾದ ನಮೋ ಮಂಜು

**ಗುಂಡ್ಲುಪೇಟೆ:** ಜೆಪಿಯ ಯುವ ಮೋರ್ಚಾದ ನಮೋ ಮಂಜು ಎಂಬಾತ ಸಾಮಾಜಿಕ ಜಾಲತಾಣದಲ್ಲಿ ಒಬ್ಬ ಜವಾಬ್ದಾರಿಯುತ ಪೊಲೀಸ್ ಅಧಿಕಾರಿಯಾಗಿ ಸಾಮಾನ್ಯ ಜನರಿಗೆ ಯಾವ ಸಂದೇಶ ಕೊಡುತ್ತಿದ್ದಾರೆ ಬಂಡೀಪುರ ರಾಷ್ಟ್ರೀಯ ಅರಣ್ಯ ಹಂಚಿನ ಯಾವುದೋ ಒಂದು ವಿಕ್ರಮ್ ಸಿದ್ದಿಕ್ಕಿಯ ಖಾಸಗಿ ರೇಸಾರ್ಟ್ ಅಲ್ಲಿ ಸಾರ್ವಜನಿಕರಿಗೂ ಈ ರೀತಿ ಮೋಜು ಮಸ್ತಿ ಮಾಡಲು ಅವಕಾಶ ಕೊಡುವುದೇ..?

ಚಾಮರಾಜನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಈ ವಿಚಾರದಲ್ಲಿ ಸಮಗ್ರ ತನಿಖೆ ಮಾಡಿ ಶಿಸ್ತು ಕ್ರಮ ಕೈಗೊಳ್ಳಬೇಕು ಯಾವುದೋ ಖಾಸಗಿ ರೇಸಾರ್ಟ್ ಅರಣ್ಯ ಇಲಾಖೆಯ ಹಂಚಿನಲ್ಲಿ ಡ್ಯೂಟಿ ಟೈಮ್ ಅಲ್ಲಿ ಸಬ್ ಇನ್ಸೆಕ್ಟರ್ ಜಯಕುಮಾರ್ ರವರು ತಾವೇ ಯಾವುದೋ ಒಂದು ಖಾಸಗಿ ಜೀಪಿನಲ್ಲಿ ಕುಟುಂಬದ ಜೊತೆ ಡ್ರೈವ್ ಮಾಡುವ ಮುಖಾಂತರ ಮೋಜು ಮಸ್ತಿ ಮಾಡಬಹುದೇ..?

ಇತರ ಡ್ಯೂಟಿ ಟೈಮ್ ಅಲ್ಲಿ ಅಧಿಕಾರಿಗಳಿಗೆ



ಪ್ರವೇಶವಿರುವುದಾದರೆ ಸಾರ್ವಜನಿಕರಿಗೂ ಅವಕಾಶ ಕಲ್ಪಿಸಿಕೊಡಿ ಹಾಗೆಯೇ ಅಧಿಕಾರಿ ಸಾಕಷ್ಟು ಅಕ್ರಮ ಚಟುವಟಿಕೆಗಳಲ್ಲಿ ತೊಡಗಿರುವುದು ಎದ್ದು ಕಾಣುತ್ತಿದೆ..?

ಪೊಲೀಸ್ ವರಿಷ್ಠಾಧಿಕಾರಿಗಳು, ಅರಣ್ಯ ಇಲಾಖೆಯವರು ಮೋಜು ಮಸ್ತಿಗೆ ಆ ರೆಸಾರ್ಟ್ ವಿರುದ್ಧ ಹಾಗೂ ಅಧಿಕಾರಿಯ ವಿರುದ್ಧ ಕಡಿವಾಣ ಹಾಕುವವರೇ ಎಂಬ ಪ್ರಶ್ನೆ ಸಾರ್ವಜನಿಕ ವಲಯದಲ್ಲಿ ಕೇಳಿ ಬರುತ್ತಿದೆ..?

ಎಂದು ಬರೆದುಕೊಂಡು ಕೂಡಲೇ ಈ ವಿಚಾರವಾಗಿ ಪೊಲೀಸ್ ವರಿಷ್ಠಾಧಿಕಾರಿ, ಗೃಹಮಂತ್ರಿ ಕ್ರಮ ಕೈಗೊಳ್ಳಲು ಒತ್ತಾಯಿಸಿ ಪೋಸ್ಟ್ ಮಾಡಲಾಗಿದೆ.

## ಸಿದ್ದಯ್ಯನಪುರದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಮೆರವಣಿಗೆ

**ಚಾಮರಾಜನಗರ:** ತಾಲೂಕಿನ ಸಿದ್ದಯ್ಯನಪುರದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ವರ್ಷದ ಜಯಂತಿ ಅಂಗವಾಗಿ ನಡೆದ ಮೂರು ದಿನಗಳ ಅಂಬೇಡ್ಕರ್ ಹಬ್ಬಕ್ಕೆ ಚಾಲನೆ ದೊರೆದು, ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರ ಮೆರವಣಿಗೆಯು ಇಂದು ವಿಜೃಂಭಣೆಯಿಂದ ನಡೆಯಿತು.

ಗ್ರಾಮದಲ್ಲಿ ಮುಂಭಾಗದಲ್ಲಿರುವ ಡಾ.ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ವಿಶೇಷವಾಗಿ ವಿದ್ಯುದ್ದೀಪಾಲಂಕಾರ ಮಾಡಲಾಗಿತ್ತು. ಗ್ರಾಮದ ಮಹಾನಾಯಕ ಡಾ.ಬಿ.ಆರ್.ಅಂಬೇಡ್ಕರ್ ಯುವಕ ಸಂಘದ ಅಧ್ಯಕ್ಷರು, ಪದಾಧಿಕಾರಿಗಳು, ಗ್ರಾಮದ ಯಜಮಾನರು, ಮುಖಂಡರು, ಗ್ರಾಮ ಪಂಚಾಯಿತಿ ಸದಸ್ಯರು ಯುವಕರು ಬಾಬಾ ಸಾಹೇರ ಪುತ್ಥಳಿಗೆ ಭಾರಿ ಗಾತ್ರ ಹಾರ ಹಾಕಿ ಜೈ ಭೀಮ್ ಘೋಷಣೆಯೊಂದಿಗೆ ಮೆರವಣಿಗೆಗೆ ಚಾಲನೆ ನೀಡಿದರು.

ಬೆಳಗ್ಗೆ 10 ಗಂಟೆಗೆ ಆರಂಭವಾದ ಮೆರವಣಿಗೆಯು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿತ್ತು. ಮೆರವಣಿಗೆಯ ಸಾಗುವ ರಸ್ತೆಗಳನ್ನು ಶೃಂಗರಿಸಿ, ಬಣ್ಣ ಬಣ್ಣದ ರಂಗೋಲಿಯನ್ನು ಬಿಡಿಸಿ, ಮಹಿಳೆಯರು, ಮಕ್ಕಳು ಬಾಬಾ ಸಾಹೇಬರಿಗೆ ಪೂಜೆ ಸಲ್ಲಿಸಿದರು. ನಮ್ಮ ಭವಿಷ್ಯವನ್ನು ರೂಪಿಸಿದ ಮಹಾತ್ಮ ಎಂದು ಕೈ ಮುಗಿದು ನಮಿಸಿಕೊಳ್ಳುತ್ತಿದ್ದರು.



**ಡಿಜೆ ಸೌಂಗೆ ಕುಣ ದು ಕುಪ್ಪಳಿಸಿದ ಯುವಕರು:** ಬೆಳಗ್ಗೆಯಿಂದಲೇ ಡಿಜೆ ಸೌಂಗೆ ಯುವಕರು ಕುಣ ದು ಕುಪ್ಪಳಿಸಿದರು. ಬಣ್ಣ ಹಚ್ಚಿಕೊಂಡು ಮೆರವಣಿಗೆಯುದ್ದಕ್ಕು ಸಾಗಿದರು. ಬಿಸಿಲಿನ ಧಗೆಯನ್ನು ಧನಿಸಿಕೊಳ್ಳಲು ನೀರು ಸಿಂಪಿಡಿಸಿಕೊಂಡು ಒಬ್ಬರಿಗೊಬ್ಬರು ಘೋಷಣೆ ಕೂಗುತ್ತಾ ಮೆರವಣಿಗೆಯಲ್ಲಿ ಸಾಗಿದ್ದರು. ಅಲ್ಲಲ್ಲಿ ಮಜ್ಜಿಗೆ, ಪಾನಕ, ಕೋಸಂಬರಿ, ರೈಸ್ ಬಾತ್ ವಿತರಣೆ ಮಾಡಲಾಯಿತು.

ಮೆರವಣಗೆಯಲ್ಲಿ ಯಜಮಾನರಾದ ಚನ್ನಂಜಯ್ಯ, ಮಲ್ಲಿಕಾರ್ಜುನ, ಪಾಪಣ್ಣ, ಮಹಾನಾಯಕ ಡಾ. ಬಿ.ಆರ್.ಅಂಬೇಡ್ಕರ್ ಸಂಘದ ಅಧ್ಯಕ್ಷ ಎಸ್.ಎಚ್. ಮಹೇಶ್, ಉಪಾಧ್ಯಕ್ಷ ನಾಗರಾಜು, ಕಾರ್ಯದರ್ಶಿ ಭಾಸ್ಕರ್,ಖಜಾಂಚಿ ಶರತ್, ಗ್ರಾಮ ಪಂಚಾಯಿತಿ ಸದಸ್ಯರಾದ ಶೈಲಜಾ ಗೋವಿಂದರಾಜು, ಬಸವಣ್ಣ, ಎಸ್.ಎಂ.ಮಂಜು, ಸೋಮಣ್ಣ, ರೇಖಾವತಿ ಮಹದೇವ ಸ್ವಾಮಿ, ನೀರು ಬಳಕೆದಾರರ ಸಂಘದ ಅಧ್ಯಕ್ಷ ಎಸ್.ಆರ್. ಗೋವಿಂದರಾಜು, ಡೇರಿ ಅಧ್ಯಕ್ಷ ಈಶ್ವರ್, ಸಂಘದ ಎಲ್ಲಾ ಪದಾಧಿಕಾರಿಗಳು, ಗ್ರಾಮಸ್ಥರು ಭಾಗವಹಿಸಿದ್ದರು.

# ಏ. 29 ರಂದು ಡಾ. ಬಿ. ಆರ್. ಅಂಬೇಡ್ಕರ್ ರವರ ಜನ್ಮದಿನ ಅಂಗವಾಗಿ ಸಮಾನತೆಯೆಡೆಗೆ ನಮ್ಮ ನಡಿಗೆ ಕಾರ್ಯಕ್ರಮ

**ಮಂಡ್ಯ:** ಕಾಲೇಜು ಶಿಕ್ಷಣ ಇಲಾಖೆ, ಮಂಡ್ಯ ಮಹಿಳಾ ಸರ್ಕಾರಿ ಕಾಲೇಜು (ಸ್ವಾಯತ್ತ) ಸ್ನಾತಕ,ಸ್ನಾತಕೋತ್ತರ ಮತ್ತು ಸಂಶೋಧನಾ ಕೇಂದ್ರ, ಅಂಬೇಡ್ಕರ್ ವಿಚಾರ ವೇದಿಕೆ ವತಿಯಿಂದ ಡಾ. ಬಿ.ಆರ್ ಅಂಬೇಡ್ಕರ್ ಅವರ 135 ನೇ ಜನ್ಮದಿನದ ಅಂಗವಾಗಿ ಸಮಾನತೆಯೆಡೆಗೆ ನಮ್ಮ ನಡಿಗೆ (ವಿಚಾರ ಸಂಕೀರ್ಣ, ಬಹುಮಾನ ವಿತರಣೆ, ಭಾವಚಿತ್ರ ಮತ್ತು ಪುಸ್ತಕಗಳ ಪ್ರದರ್ಶನ ಹಾಗೂ ಗಾಯನ) ಕಾರ್ಯಕ್ರಮವನ್ನು ಏಪ್ರಿಲ್ 29 ರಂದು ಬೆಳಿಗ್ಗೆ 10.00 ಗಂಟೆಗೆ ವನರಂಗ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಮಹಿಳಾ ಸರ್ಕಾರಿ ಕಾಲೇಜು (ಸ್ವಾಯತ್ತ) ಪ್ರಾಂಶುಪಾಲರಾದ ಪ್ರೊ.ಗುರುರಾಜ್ ಪ್ರಭು ಕೆ. ರವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಮೈಸೂರು ವಿಶ್ವವಿದ್ಯಾನಿಲಯದ ನಿರ್ವಹಣಾ ಶಾಸ್ತ್ರ ವಿಭಾಗದ ಬಹುದ್ದೂರ್ ಇನ್ಸ್ಟಿಟ್ಯೂಟ್ ಆಫ್ ಮ್ಯಾನೇಜ್ಮೆಂಟ್ ಸ್ಟಡೀಸ್ ನಿವೃತ್ತ ಪ್ರಾಧ್ಯಾಪಕರಾದ ಡಾ. ಆನಂದ್ ಡಿ. ರವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಜಿಲ್ಲಾ ಮಹಿಳಾ ಸರ್ಕಾರಿ ಕಾಲೇಜು (ಸ್ವಾಯತ್ತ) ರಾಜ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ. ಭರತ್ ರಾಜ್ ಎಂ.ಜಿ ರವರು ಪ್ರಾಸ್ತಾವಿಕ ನುಡಿ ನುಡಿಯಲಿದ್ದಾರೆ.

ಕಾರ್ಯಕ್ರಮದಲ್ಲಿ ಸಸ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ. ಸಯ್ಯದ್ ಕೌಸರ್ ಫಾತಿಮಾ, ಇತಿಹಾಸ ವಿಭಾಗದ ಪ್ರಾಧ್ಯಾಪಕರಾದ ಡಾ. ಕೃಷ್ಣೇಗೌಡ ಹೆಚ್, ರಾಸಾಯನ ಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಡಾ. ಕುಸುಮಾದೇವಿ ಎಸ್. ಗೆಜೆಟೆಡ್ ಮ್ಯಾನೇಜರ್ ರವಿಕುಮಾರ್ ಕೆ. ಪಿ. ಅಂಬೇಡ್ಕರ್ ವಿಚಾರ ವೇದಿಕೆ ಸಂಚಾಲಕರು ಡಾ. ಜಯರಾಮ್ ಆರ್,ಅಂಬೇಡ್ಕರ್ ವಿಚಾರ ವೇದಿಕೆ ಸಹ ಸಂಚಾಲಕರು ನಾಗರಾಜಮೂರ್ತಿ ಪಿ. ಎನ್ ರವರು ಕಾರ್ಯಕ್ರಮದ ಉಪಸ್ಥಿತಿ ವಹಿಸಲಿದ್ದಾರೆ.

# ಸ್ಪರ್ಧಾತ್ಮಕ ಕಂಪ್ಯೂಟರ್ ಆಧಾರಿತ ಪರೀಕ್ಷೆ–2026

**ಮಂಡ್ಯ:** ಭಾರತ ಸರ್ಕಾರದ ಸಿಬ್ಬಂದಿ ನೇಮಕಾತಿ ಆಯೋಗ(ಸ್ಟಾಫ್ ಸೆಲೆಕ್ಷನ್ ಕಮೀಷನ್)ದವರು ಕರ್ನಾಟಕ ಮತ್ತು ಕೇರಳ ಪ್ರಾಂತ್ಯದ ಸ್ಪರ್ಧಾತ್ಮಕ ಕಂಪ್ಯೂಟರ್ ಆಧಾರಿತ ಪರೀಕ್ಷೆ–2026 ಪರೀಕ್ಷೆಯನ್ನು ಜೂನ್–2026 ರ ಮಾಹೆಯಲ್ಲಿ ಆಯೋಜಿಸಲಿದೆ. ಈ ನೇಮಕಾತಿ ಪರೀಕ್ಷೆಗೆ ಆನ್‌ಲೈನ್ ಮುಖಾಂತರ ಅರ್ಜಿಯನುß https://ssc.gov.in ಈ ವೆಬ್‌ಸೈಟ್‌ನಲ್ಲಿ ಸಲ್ಲಿಸಬಹುದು.

ಈ ನೇಮಕಾತಿಯ ಸಂಬಂಧದ ಸಂಪೂರ್ಣ ಮಾಹಿತಿಗಾಗಿ http://ssckkr.kar.nic.in ದಲ್ಲಿ ವೀಕ್ಷಿಸಬಹುದಾಗಿದೆ. ಈ ಸ್ಪಧಾತ್ಮಕ ಪರೀಕ್ಷೆಗಳಿಗೆ ಅಭ್ಯರ್ಥಿಗಳು ಕನಿಷ್ಠ ವಿದ್ಯಾರ್ಹತೆ 10ನೇ ತರಗತಿ ದ್ವಿತೀಯ ಪಿಯುಸಿ ಮತ್ತು ಮಾನ್ಯತೆ ಪಡೆದ ವಿಶ್ವವಿದ್ಯಾನಿಲಯದಿಂದ ಪದವಿ ಅಥವಾ ಅದಕ್ಕೆ ಸಮಾನವಾದ ಪದವಿಯನ್ನು ಹೊಂದಿರಬೇಕು. ವಯೋಮಿತಿಯು 18 ರಿಂದ 35 ವಯಸ್ಸು. (ನಿಯಮಾನುಸಾರ ಎಸ್‌ಸಿ/ ಎಸ್‌ಟಿ/ ಓಬಿಸಿ/ ಪಿಡಬ್ಲ್ಯೂ ಯಡಿ ಅಭ್ಯರ್ಥಿಗಳಿಗೆ ಸಡಿಲಿಕೆಯಿರುತ್ತದೆ.) ಪರೀಕ್ಷಾ ಶುಲ್ಕ: ರೂ.100/– (ನಿಯಮಾನುಸಾರ ಎಸ್‌ಸಿ/ ಎಸ್‌ಟಿ/ ಪಿಡಬ್ಲ್ಯೂ ?ಯಡಿ ಹಾಗೂ ಮಹಿಳಾ ಅಭ್ಯರ್ಥಿಗಳಿಗೆ ಸಡಿಲಿಕೆಯಿರುತ್ತದೆ.) ವೇತನ ಕನಿಷ್ಟ ವೇತನವು ರೂ.33,393=00 ರಿಂದ ಪ್ರಾರಂಭವಾಗುತ್ತದೆ ಗರಿಷ್ಟ ವೇತನವು ರೂ. 88,645=00 ಗಳಿರುತ್ತದೆ.

ಸ್ಪರ್ಧಾತ್ಮಕ ಪರೀಕ್ಷೆಯ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಕಛೇರಿಯ ದೂ. ಸಂ. 08232–220126, 9741939716, 9113500761, 9164642684 ಹಾಗೂ ಸ್ಟಾಫ್ ಸೆಲೆಕ್ಷನ್ ಕಮೀಷನ್, ಮೊದಲ ಮಹಡಿ, ?ಇ? ವಿಂಗ್, ಕೇಂದ್ರೀಯ ಸದನ, ಕೋರಮಂಗಲ, ಬೆಂಗಳೂರು?560034. ದೂ. ಸಂ. 080–25520653 / 25502520 ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಉದ್ಯೋಗಾಧಿಕಾರಿ ವಿ. ನವೀನ್ ಕುಮಾರ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕುಡಿಯುವ ನೀರು ಸರಬರಾಜಿಗೆ ಅಗತ್ಯ ಕ್ರಮಕ್ಕೆ ಸಿಇಓ ನಂದಿನಿ ಸೂಚನೆ



**ಮಂಡ್ಯ:** ಬೇಸಿಗೆ ಹಿನ್ನೆಲೆಯಲ್ಲಿ ಮಂಡ್ಯ ಜಿಲ್ಲೆಯ ಗ್ರಾಮಾಂತರ ಪ್ರದೇಶಗಳ ಸಾರ್ವಜನಿಕರಿಗೆ ಕುಡಿಯುವ ನೀರು ಸರಬರಾಜಿನಲ್ಲಿ ಯಾವುದೇ ತೊಂದರೆ ಉಂಟಾಗದಂತೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು, ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ ಎಂದು ಜಿ.ಪಂ. ಸಿಇಓ ನಂದಿನಿ ಕೆ.ಆರ್. ಅವರು ತಿಳಿಸಿದರು.

ಜಿಲ್ಲಾ ಪಂಚಾಯತ್ ನ ಕೆಸ್ವಾನ್ ಸಭಾಂಗಣದಲ್ಲಿ ನಡೆದ ವಿಡಿಯೋ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ಒಟ್ಟು 289 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಾಗಬಹುದೆಂದು ಅಂದಾಜಿಸಲಾಗಿದ್ದು, ಈಗಾಗಲೇ 13 ಗ್ರಾಮಗಳಲ್ಲಿ ಖಾಸಗಿ ಕೊಳವೆಬಾವಿಗಳ ಮೂಲಕ ಪರ್ಯಾಯವಾಗಿ ಕುಡಿಯುವ ನೀರು ಸರಬರಾಜು ಮಾಡುವ ವ್ಯವಸ್ಥೆ ಕಲ್ಪಿಸಲಾಗಿದೆ. ಉಳಿದ ಗ್ರಾಮಗಳಲ್ಲಿಯೂ ಅಗತ್ಯವಿರುವ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲು ಸಂಬಂಧಿತ ಅಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಕೊಳವೆಬಾವಿಗಳಲ್ಲಿ ಇಳುವರಿ ಕಡಿಮೆಯಾದ ತಕ್ಷಣವೇ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅಧಿಕಾರಿಗಳಿಗೆ ವಿಶೇಷ ಸೂಚನೆ ನೀಡಲಾಗಿದೆ. ಅದರಂತೆ ಕೊಳವೆಬಾವಿಗಳನ್ನು ಮರು ಆಳಗೊಳಿಸುವುದು, ಹೆಚ್ಚುವರಿ ಪೈಪ್ ಅಳವಡಿಸುವುದು, ಅಗತ್ಯವಿರುವ ಕಡೆಗಳಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸುವುದು ಹಾಗೂ ಪಂಪ್ ಮತ್ತು ಮೋಟಾರ್‌ಗಳು ಕೆಟ್ಟು ಹೋದಲ್ಲಿ ತಕ್ಷಣವೇ ದುರಸ್ತಿ ಕೈಗೊಳ್ಳುವಂತೆ ನಿರ್ದೇಶಿಸಲಾಗಿದೆ.

ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿರುವ ಎಲ್ಲಾ ಕುಡಿಯುವ ನೀರಿನ ಮೂಲಗಳು, ಕೊಳವೆಬಾವಿಗಳು, ಪಂಪ್‌ಸೆಟ್‌ಗಳು ಹಾಗೂ ಓವರ್‌ಹೆಡ್ ಟ್ಯಾಂಕ್‌ಗಳನ್ನು ನಿಯಮಿತವಾಗಿ ಪರಿಶೀಲಿಸಿ, ಯಾವುದೇ ಸಮಸ್ಯೆ ಉಂಟಾಗದಂತೆ ಕ್ರಮವಹಿಸಲು ತಿಳಿಸಲಾಗಿದೆ. ಅಗತ್ಯವಿರುವ ಕಡೆಗಳಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಕೆ ಸೇರಿದಂತೆ ಪರ್ಯಾಯ ವ್ಯವಸ್ಥೆಗಳನ್ನು ಕೈಗೊಳ್ಳುವಂತೆ ಸೂಚಿಸಲಾಗಿದೆ ಎಂದು ತಿಳಿಸಿದರು.

ಬಿಸಿ ಗಾಳಿ ಹೆಚ್ಚಾಗುತ್ತಿದ್ದು, ಈ ಸಂದರ್ಭಗಳಲ್ಲಿ ಆರೋಗ್ಯದ ಮೇಲೆಯೂ ಪರಿಣಾಮ ಬೀರುವ ಸಾಧ್ಯತೆ ಇರುವುದರಿಂದ, ಜನರು ಮಧ್ಯಾಹ್ನ ವೇಳೆಯಲ್ಲಿ ಅನಗತ್ಯವಾಗಿ ಹೊರಗೆ ಹೋಗುವುದನ್ನು ತಪ್ಪಿಸಬೇಕು, ಸಾಕಷ್ಟು ನೀರು ಸೇವಿಸಬೇಕು ಮತ್ತು ನೆರಳು ಪ್ರದೇಶಗಳಲ್ಲಿ ವಿಶ್ರಾಂತಿ ಪಡೆಯಬೇಕಾಗಿದ್ದು, ಈ ಬಗ್ಗೆ ಗ್ರಾ.ಪಂ.ಗಳಲ್ಲಿ ಅರಿವು ಮೂಡಿಸಬೇಕು ಎಂದು ತಿಳಿಸಿದರು. ಸಾರ್ವಜನಿಕರ ಅನುಕೂಲಕ್ಕಾಗಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಸಹಾಯವಾಣಿ ತೆರೆಯಲಾಗಿದೆ. ಜಿಲ್ಲೆಯ ಸಾರ್ವಜನಿಕರು ಕುಡಿಯುವ ನೀರಿನ ಸಮಸ್ಯೆಗಳ ಕುರಿತು ಜಿಲ್ಲಾ ಮಟ್ಟದ ಸಹಾಯವಾಣಿ ಸಂಖ್ಯೆ ?? 9480872005 ಗೆ ಸಂಪರ್ಕಿಸಬಹುದಾಗಿದೆ. ತಾಲ್ಲೂಕು ಮಟ್ಟದಲ್ಲಿಯೂ ಸಂಬಂಧಿತ ಅಧಿಕಾರಿಗಳ ಮೊಬೈಲ್ ಸಂಖ್ಯೆಗಳ ಮೂಲಕ ದೂರು ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

**ತಾಲ್ಲೂಕು ಮಟ್ಟದ ಸಹಾಯವಾಣಿ ಸಂಖ್ಯೆಗಳು:** ಕೆ.ಆರ್.ಪೇಟೆ: 9480872105, 9632769002, ಮದ್ದೂರು: 9480872110, 9611156538, ಮಳವಳ್ಳಿ: 9480872115, 8073869030, ಮಂಡ್ಯ: 9480872100, 9448331517, ನಾಗಮಂಗಲ:9480872120,7892595299, ಪಾಂಡವಪುರ:9480872125,9886697412, ಶ್ರೀರಂಗಪಟ್ಟಣ:9480872130, 9900848408

ಇದಲ್ಲದೆ, ಪ್ರತೀ ಸೋಮವಾರ ಜಿಲ್ಲೆಯ ಎಲ್ಲಾ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಸಭೆ ನಡೆಸಿ ಕುಡಿಯುವ ನೀರು ಸರಬರಾಜಿನ ಸ್ಥಿತಿಗತಿ ಹಾಗೂ ಸಮಸ್ಯೆಗಳ ಕುರಿತು ಸಮಗ್ರವಾಗಿ ಪರಿಶೀಲನೆ ಮತ್ತು ಚರ್ಚೆ ನಡೆಸಲಾಗುತ್ತಿದೆ. ಅದೇ ರೀತಿ ತಾಲ್ಲೂಕು ಹಂತದಲ್ಲಿಯೂ ತಹಶಿಲ್ದಾರ್, ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು ಸಮನ್ವಯ ಸಭೆಗಳನ್ನು ನಡೆಸಿ, ಕುಡಿಯುವ ನೀರು ಸರಬರಾಜು ಸಮಸ್ಯೆಗಳ ಕುರಿತು ಚರ್ಚಿಸಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ನಡವಳಿಯನ್ನು ಜಿಲ್ಲಾ ಪಂಚಾಯತ್‌ಗೆ ನಿಯಮಿತವಾಗಿ ಸಲ್ಲಿಸುವಂತೆ ಸೂಚಿಸಲಾಗಿದೆ ಎಂದು ತಿಳಿಸಿದರು. ಸಾರ್ವಜನಿಕರು ಸಹ ಕುಡಿಯುವ ನೀರನ್ನು ಮಿತವಾಗಿ ಬಳಸುವ ಮೂಲಕ ನೀರಿನ ಸಂರಕ್ಷಣೆಗೆ ಸಹಕರಿಸುವಂತೆ ಜಾಗೃತಿ ಮೂಡಿಸಲು ಕ್ರಮವಹಿಸುವಂತೆ ಜಿ.ಪಂ. ಸಿಇಓ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ತಿಳಿಸಿದರು.

ಸಭೆಯಲ್ಲಿ ಯೋಜನಾ ನಿರ್ದೇಶಕರಾದ ಸುಂದರ್ ರಾಜ್, ಜಿಲ್ಲೆಯ ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗಗಳ ಸಹಾಯಕ ಕಾರ್ಯಪಾಲಕ ಅಭಿಯಂತರರು ಮತ್ತು ಜಿಲ್ಲೆಯ ಎಲ್ಲಾ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ವಿಡಿಯೋ ಸಂವಾದದ ಮೂಲಕ ಹಾಜರಿದ್ದರು.

# ಮೇ 01 ರಂದು ಭಗವಾನ್ ಬುದ್ಧರ 2570 ನೇ ಜಯಂತಿ



**ಮಂಡ್ಯ:** ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ 2570ನೇ ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮವನ್ನು ಮೇ 01 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಡಾ. ಬಿ. ಆರ್. ಅಂಬೇಡ್ಕರ್ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಸತ್ಯದ ದೇವಾಲಯ ಬೌದ್ಧ ಅಭಿವೃದ್ಧಿ ಕೇಂದ್ರದ ಪೂಜ್ಯ ಭಂತೆ ಧಮ್ಮವೀರ ರವರು ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಲಿದ್ದಾರೆ.

ಕೇಂದ್ರ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ .ಕುಮಾರಸ್ವಾಮಿ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚಲುವರಾಯಸ್ವಾಮಿ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಶ್ರೀ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಅಧ್ಯಕ್ಷರು ಹಾಗೂ ಶ್ರೀರಂಗಪಟ್ಟಣ ವಿಧಾನಸಭಾ ಶಾಸಕ ಎ.ಬಿ ರಮೇಶ ಬಂಡಿಸಿದ್ದೇಗೌಡ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಅಧ್ಯಕ್ಷರು ಹಾಗೂ ಮಳವಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕರಾದ ಪಿ ಎಂ ನರೇಂದ್ರಸ್ವಾಮಿ, ರಾಜ್ಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಆಯೋಗದ ಅಧ್ಯಕ್ಷರಾದ ಡಾ. ಮೂರ್ತಿ ಅವರು ಕಾರ್ಯಕ್ರಮದ ಗೌರವ ಉಪಸ್ಥಿತಿ ವಹಿಸಲಿದ್ದಾರೆ.

ಮಂಡ್ಯ ವಿಧಾನಸಭಾ ಶಾಸಕರಾದ ಪಿ.ರವಿಕುಮಾರ್ ಅವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರು ಹಾಗೂ ವಿಧಾನಪರಿಷತ್ ಸದಸ್ಯರಾದ ದಿನೇಶ್ ಗೂಳಿಗೌಡ, ವಿಧಾನ ಪರಿಷತ್ ಶಾಸಕರುಗಳಾದ ಮಧು ಜಿ. ಮಾದೇಗೌಡ, ಕೆ. ವಿವೇಕಾನಂದ, ವಿಧಾನ ಸಭಾ ಶಾಸಕರುಗಳಾದ ದರ್ಶನ್ ಪುಟ್ಟಣ್ಣಯ್ಯ, ಹೆಚ್.ಟಿ ಮಂಜು, ಕೆ.ಎಂ ಉದಯ, ರಾಜ್ಯ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಎಸ್ ಆತ್ಮಾನಂದ, ಕರ್ನಾಟಕ ರಾಜ್ಯ ಆಹಾರ ಆಯೋಗದ ಅಧ್ಯಕ್ಷರಾದ ಡಾ.ಹೆಚ್.ಕೃಷ್ಣ, ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಬಿ.ಪಿ ಪ್ರಕಾಶ್, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಉಪಾಧ್ಯಕ್ಷೆ ವಿಜಯಲಕ್ಷ್ಮಿ ರಘುನಂದನ್, ಮೈಸೂರು ಸಕ್ಕರೆ ಕಂಪನಿ ನಿಯಮಿತ ಅಧ್ಯಕ್ಷರಾದ ಸಿ.ಡಿ ಗಂಗಾಧರ, ರಾಜ್ಯ ಕೈಮಗ್ಗ ಅಭಿವೃದ್ಧಿ ನಿಗಮದ ಅಧ್ಯಕ್ಷರು ಬಿ. ನಾಗೇಂದ್ರ ಕುಮಾರ್ ಭಾಗವಹಿಸಲಿದ್ದಾರೆ.

ವಿಶೇಷ ಉಪನ್ಯಾಸವನ್ನು ತಾಂತ್ರಿಕ ಶಿಕ್ಷಣ ಇಲಾಖೆಯ ಬೌದ್ಧ ಹಾಗೂ ಪಾಲಿ ವಿದ್ವಾಂಸರು ಹಾಗೂ ಉಪನ್ಯಾಸಕರಾದ (ನಿವೃತ್ತ) ಮಹದೇವಯ್ಯ ಕೆ. ಕಲ್ಲಾರೆಪುರ ರವರು ಮಂಡಿಸಲಿದ್ದಾರೆ.

# ರಸ್ತೆಬದಿಯಲ್ಲಿಗ್ರಾಮಸ್ಥರಿಗೆ ಮೂರು ಹುಲಿ ಸಂಚಾರ ಗೋಚರ

## ಗ್ರಾಮಸ್ಥರಿಂದ ರಸ್ತೆ ತಡೆ ಬೆಂಕಿ ಹಚ್ಚಿ ಪ್ರತಿಭಟನೆ

**ಪಿರಿಯಾಪಟ್ಟಣ:** ಹುಣಸೂರು ಗೋಣಿಕೊಪ್ಪ ರಾಜ್ಯ ಹೆದ್ದಾರಿ ಪಂಚವಳ್ಳಿ ಸಮೀಪದಲ್ಲಿ ರಸ್ತೆ ಬದಿ ಹುಲಿ ದಾಳಿಗೆ ಹಸು ಮೃತಪಟ್ಟಿರುವ ಘಟನೆ ನಡೆದಿದೆ.

ತಾಲ್ಲೂಕಿನ ಪಂಚವಳ್ಳಿ ಬಳಿ ರಾಜ್ಯ ಹೆದ್ದಾರಿ ಸಮೀಪವೇ ಹುಲಿ ದಾಳಿಗೆ ಹಸು ಬಲಿಯಾಗಿದೆ ಇದರಿಂದ್ದಾಗಿ ಆಕ್ರೋಶಗೊಂಡ ಗ್ರಾಮಸ್ಥರು ಸೋಮವಾರ ಸಂಜೆ ದಿಢೀರ್ ರಸ್ತೆ ತಡೆ ನಡೆಸಿ ಪ್ರತಿಭಟಿಸಿದರು.

ರಸ್ತೆ ಬದಿಯಲ್ಲಿ ಮೂರು ಹುಲಿಗಳು ಸಂಚರಿಸುತ್ತಿರುವುದನ್ನು ಗ್ರಾಮಸ್ಥರು ನೋಡಿದ್ದಾರೆ. ಒಂದು ಹುಲಿ ಹಸುವಿನ ಮೇಲೆ ದಾಳಿ ನಡೆಸಿದಲ್ಲದೆ ರಸ್ತೆ ಬದಿಯಲ್ಲಿ ಹಸುವನ್ನು ಕೊಂದು ತಿಂದು ಹಾಕಿದೆ ಎಂದು ಗ್ರಾಮಸ್ಥರು ರಸ್ತೆ ಮಧ್ಯದಲ್ಲಿ ಟೈರ್ ಗೆ ಬೆಂಕಿ ಹಚ್ಚಿ ಪ್ರತಿಭಟನೆ ನಡೆಸಿದ್ದಾರೆ.ಇದೇ ವೇಳೆ ವಿಚಾರ ತಿಳಿದು ಸ್ಥಳಕ್ಕೆ ಆಗಮಿಸಿದ ಡಿ ಸಿ ಎಫ್ ಕಿರುಬಂತನ್ ಮತ್ತು ಆರ್ ಎಫ್ ಒ ಪದ್ಮಶ್ರೀ ನಂಜಪ್ಪ ಭೇಟಿ ನೀಡಿ ಪ್ರತಿಭಟನಾಕಾರರನ್ನು ಸಮಾಧಾನ ಪಡಿಸಿ ಹಸುವಿನ ಮಾಲೀಕರಿಗೆ ಸೂಕ್ತ ಪರಿಹಾರ ದೊರಕಿಸಿಕೊಡುವುದಾಗಿಯು ಹಾಗೆಯೇ ಹುಲಿಯನ್ನು ಹಿಡಿಯಲು ತುಮಕೂರು ಮಾದರಿ ಬೋನ್ ಇಟ್ಟು, ಡ್ರೋಣ್ ಮೂಲಕ ನಿಗಾ ವಹಿಸುವುದಾಗಿ ಭರವಸೆ ನೀಡಿದ ಬಳಿಕ ಪ್ರತಿಭಟನಾರು ಪ್ರತಿಭಟನೆಯನ್ನು ಕೈಬಿಟ್ಟಿದ್ದಾರೆ.




# ಬಸವಣ್ಣನವರು ನೀಡಿರುವ ಕಾಯಕ ತತ್ವ ಇಡೀ ಜಗತ್ತಿಗೆ ಆದರ್ಶ: ಮಹೇಶ್




**ಪಿರಿಯಾಪಟ್ಟಣ:** ಬಸವಣ್ಣನವರು ನೀಡಿರುವ ಕಾಯಕ ತತ್ವ ಇಡೀ ಜಗತ್ತಿಗೆ ಆದರ್ಶವಾಗಿದೆ ಎಂದು ಕೆಎಸ್‌ಆರ್ ಟಿಸಿ ಮೈಸೂರು ಗ್ರಾಮಾಂತರ ವಿಭಾಗೀಯ ತಾಂತ್ರಿಕ ಅಭಿಯಂತರರಾದ ಮಹೇಶ್ ತಿಳಿಸಿದರು.

ಪಿರಿಯಾಪಟ್ಟಣದ ಸಾರಿಗೆ ಘಟಕದಲ್ಲಿ ಮಂಗಳವಾರ ನಡೆದ ಬಸವ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು, ಶರಣರ ಸಂದೇಶಗಳನ್ನು ನಾವು ಜೀವನದಲ್ಲಿ ಪಾಲಿಸಿದಾಗ ಸನ್ಮಾರ್ಗದಲ್ಲಿ ಸಾಗಬಹುದು, ನಾವು ಮಾಡುವ ಕಾಯಕದಲ್ಲಿ ಶ್ರದ್ಧೆ ಭಕ್ತಿ ಇದ್ದರೆ ಖಂಡಿತ ಯಶಸ್ಸು ಸಿಗುತ್ತದೆ ಈ ನಿಟ್ಟಿನಲ್ಲಿ ಸಂಸ್ಥೆಯ ಸಿಬ್ಬಂದಿಗಳು ಸಾರ್ವಜನಿಕರೊಂದಿಗೆ ಉತ್ತಮ ಒಡನಾಟ ಇಟ್ಟುಕೊಂಡು ಸಂಸ್ಥೆಗೆ ಹೆಸರು ತರುವಂತೆ ತಿಳಿಸಿದರು. ಘಟಕ ವ್ಯವಸ್ಥಾಪಕರಾದ ಸುಬ್ರಮಣ್ಯ ಅವರು ಮಾತನಾಡಿ ವಚನಗಳ ಮೂಲಕ ಸಮಾಜದ ಬದಲಾವಣೆಗೆ ಶ್ರಮಿಸಿದ ಮಹಾನ್ ನಾಯಕರು ಬಸವಣ್ಣನವರಾಗಿದ್ದರು, ನಾವು ಮಾಡುವ ಒಳ್ಳೆ ಕೆಲಸಗಳಲ್ಲಿ ದೇವರನ್ನು ಕಾಣಬಹುದು ಎಂಬ ಸಂದೇಶವನ್ನು ಜಗತ್ತಿಗೆ ಸಾರಿದ ವಿಶ್ವಗುರು ಬಸವಣ್ಣರವರಾಗಿದ್ದರು ಎಂದರು.

ಈ ವೇಳೆ ಬಸವಣ್ಣನವರ ಭಾವಚಿತ್ರಕ್ಕೆ ವಿಶೇಷ ಪೂಜೆ ಸಲ್ಲಿಸಿ ಅನ್ನ ಸಂತರ್ಪಣೆ ನಡೆಸಲಾಯಿತು, ಈ ಸಂದರ್ಭ ಘಟಕದ ಸಂಚಾರ ನಿರೀಕ್ಷಕರಾದ ಪ್ರಶಾಂತ್ ಹಿರೇಮಠ್, ಪಾರು ಪತ್ತೆಗಾರಾರಾದ ಪ್ರಕಾಶ್, ಲೋಕೇಶ್, ಸಂಚಾರ ನಿಯಂತ್ರಕರಾದ ಗಣೇಶ್, ಶ್ರೀಧರ್, ಈಶ್ವರ್ ಸಿಬ್ಬಂದಿಗಳಾದ ಶ್ರೀಕಾಂತ್, ಲೋಕೇಶ್, ವಿಜಯೇಂದ್ರ, ಮನುಕುಮಾರ್, ಶಿವಾಜಿ, ಕುದ್ರತ್, ವಸಂತ್, ರವಿಶಂಕರ್, ವೃಷಭೇಂದ್ರ, ಗಿರೀಶ್, ನಾಗರಾಜ್, ಹರ್ಷ, ಅವಿನಾಶ್, ಅರವಿಂದ್, ಮಹೇಶ್, ರಫೀಕ್, ಲಿಂಗರಾಜ್, ಪುಟ್ಟರಾಜ್, ರಾಜೇಶ್ ಸೇರಿದಂತೆ ಚಾಲಕ ನಿರ್ವಾಹಕ ತಾಂತ್ರಿಕ ಹಾಗೂ ಭದ್ರತಾ ಮತ್ತು ಕಚೇರಿ ಸಿಬ್ಬಂದಿ ಇದ್ದರು.

# ತಾಲ್ಲೂಕಿಗೆ ಪ್ರಥಮ ಸ್ಥಾನ ಪಡೆದ ಸ್ಕಾಲರ್ಸ್ ಪಿಯು ಕಾಲೇಜಿನ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ



**ಕೆ.ಆರ್.ಪೇಟೆ:** ವಿದ್ಯಾರ್ಥಿಗಳು ಏಕಾಗ್ರತೆ ಹಾಗೂ ಕಠಿಣ ಪರಿಶ್ರಮದಿಂದ ವಿದ್ಯಾಭ್ಯಾಸ ಮಾಡಿ ತಮ್ಮ ಗುರಿ ಸಾಧನೆ ಮಾಡಬೇಕು. ಓದುವ ವಯಸ್ಸಲ್ಲಿ ಬೇರೆ ಕಡೆ ಆಕರ್ಷಿತರಾಗದೇ ಓದುವ ಕಡೆಗೆ ಮಾತ್ರ ನಿಗಾವಹಿಸಬೇಕು ಎಂದು ಸಮಾಜ ಸೇವಕರು ಹಾಗೂ ಕರ್ನಾಟಕ ರಾಜ್ಯ ಆರ್.ಟಿ.ಓ ಅಧಿಕಾರಿಗಳ ಸಂಘದ ಅಧ್ಯಕ್ಷರಾದ ಆರ್.ಟಿ.ಓ. ಮಲ್ಲಿಕಾರ್ಜುನ್ ಹೇಳಿದರು

ಅವರು ಪಟ್ಟಣದ ಸುಲೋಚನಮ್ಮ ರಾಮದಾಸ್ ಸಭಾಂಗಣದಲ್ಲಿ ಕೆ.ಆರ್.ಪೇಟೆಯ ಪಟ್ಟಣದ ಸ್ಕಾಲರ್ಸ್ ಪದವಿ ಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಅಂಕಗಳನ್ನು ಪಡೆದು ಸಾಧನೆ ಮಾಡಿರುವ ವಿದ್ಯಾರ್ಥಿಗಳಿಗೆ ಸನ್ಮಾನಿಸಿ ಗೌರವಿಸಿ ಮಾತನಾಡಿದರು. ಇತ್ತೀಚೆಗೆ ನಡೆದ ದ್ವಿತೀಯ ಪಿಯುಸಿ ಪರೀಕ್ಷಾ ಫಲಿತಾಂಶದಲ್ಲಿ ಕೆ ಆರ್ ಪೇಟೆ ಪಟ್ಟಣದ ಕಾಲರ್ಸ್ ಪದವಿಪೂರ್ವ ಕಾಲೇಜಿನ ದ್ವಿತೀಯ ಪಿಯುಸಿ ವ್ಯಾಸಂಗ ಮಾಡುತ್ತಿದ್ದ 151 ವಿದ್ಯಾರ್ಥಿಗಳ ಪೈಕಿ 65 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ನಲ್ಲಿ , 86 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗುವ ಮೂಲಕ ಶೇ.100 ರಷ್ಟು ಫಲಿತಾಂಶವನ್ನು ತಂದುಕೊಡುವ ಜೊತೆಗೆ ಕಾಲೇಜಿನ ಮೂವರು ವಿದ್ಯಾರ್ಥಿಗಳು ತಾಲೂಕಿನ ಟಾಪರ್ ಗಳಾಗಿ ಹೊರಹೊಮ್ಮುವ ಮೂಲಕ ಕಾಲೇಜಿನ ಕೀರ್ತಿಯ ಪತಾಕೆಯನ್ನು ನಾಡಿನಾದ್ಯಂತ ಬೆಳಗಿದ್ದಾರೆ ಎಂದು ಅಭಿಮಾನದಿಂದ ತಿಳಿಸಿದ ಮಲ್ಲಿಕಾರ್ಜುನ ವಿದ್ಯೆಯ ಜ್ಞಾನದ ಬೆಳಕಿನ ಶಕ್ತಿಯು ಸಾಧಕರ ಸ್ವತ್ತೇ ಹೊರತು ಸೋಮಾರಿಗಳ ಗೊತ್ತಲ್ಲ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ನಗರ ಪ್ರದೇಶದ ವಿದ್ಯಾರ್ಥಿಗಳು ಒಡ್ಡುವ ಸ್ಪರ್ಧೆಯನ್ನು ಎದುರಿಸಿ ಸರ್ವ ಶ್ರೇಷ್ಠ ಸಾಧನೆ ಮಾಡಿದ್ದಾರೆ. ಸ್ಕಾಲರ್ಸ್ ಪದವಿ ಪೂರ್ವ ಕಾಲೇಜು , ವಿದ್ಯಾರ್ಥಿಗಳಿಗೆ ಜ್ಞಾನದ ಬೆಳಕಿನ ಸಂಸ್ಕಾರ ನೀಡುವ ಜೊತೆಗೆ ಶಿಸ್ತು ಸಂಯಮ ವಿನಯವಂತಿಕೆಯನ್ನು ಕಲಿಸಿ ವಿದ್ಯಾರ್ಥಿಗಳನ್ನು ಭವಿಷ್ಯದ ನಾಯಕರನ್ನಾಗಿ ಸಜ್ಜುಗೊಳಿಸುವ ಕೆಲಸವನ್ನು ಕಾಲೇಜಿನ ಪ್ರಾಂಶುಪಾಲರು ಸೇರಿದಂತೆ ಉಪನ್ಯಾಸಕರು ಬದ್ಧತೆಯಿಂದ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಸ್ಕಾಲರ್ಸ್ ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಮಂಜುನಾಥ್ ವಿದ್ಯಾರ್ಥಿಗಳ ಅಭಿನಂದನಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳನ್ನು ದಾಖಲು ಮಾಡಿಕೊಂಡು ನುರಿತ ಉಪನ್ಯಾಸಕ ವೃಂದದಿಂದ ಸೂಕ್ತ ತರಬೇತಿ ಹಾಗೂ ಮಾರ್ಗದರ್ಶನ ನೀಡಿ ಅತ್ಯುನ್ನತ ಶ್ರೇಣಿ ಹಾಗೂ ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗುವಂತೆ ಸಜ್ಜುಗೊಳಿಸಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ನಮ್ಮ ಕಾಲೇಜು ಶೇಕಡ ನೂರಕ್ಕೆ ನೂರರಷ್ಟು ಫಲಿತಾಂಶವನ್ನು ಪಡೆಯುವ ಜೊತೆಗೆ ಕಾಲೇಜು ತಾಲೂಕಿನಲ್ಲಿಯೇ ಪ್ರಥಮ ಸ್ಥಾನವನ್ನುಗಳಿಸಿ ತನ್ನ ಜೈತ್ರ ಯಾತ್ರೆಯನ್ನು ಮುಂದುವರಿಸಿದೆ ಈ ಫಲಿತಾಂಶ ಬರಲು ಕಾರಣರಾದ ವಿದ್ಯಾರ್ಥಿಗಳು ಪೋಷಕರು ಹಾಗೂ ಉಪನ್ಯಾಸಕ ವೃಂದವನ್ನು ಅಭಿನಂದಿಸುವುದಾಗಿ ತಿಳಿಸಿದರು. ಸ್ಕಾಲರ್ಸ್ ಶಿಕ್ಷಣ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ವಿದ್ಯಾ ಮಂಜುನಾಥ್, ಉಪಾಧ್ಯಕ್ಷ ರಾಘವೇಂದ್ರ, ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಮಾಜಿ ಅಧ್ಯಕ್ಷ ಕೆ.ಆರ್.ನೀಲಕಂಠ, ಪೋಷಕರಾದ ಬೂಕನಕೆರೆ ಮಂಜುನಾಥ್, ರೈತ ಮುಖಂಡರಾದ ಬಿ.ಬಾಚಹಳ್ಳಿ ಪ್ರಸನ್ನಕುಮಾರ್, ತಾಲೂಕು ಮುಜರಾಯಿ ದೇವಾಲಯಗಳ ಅರ್ಚಕರ ಸಂಘದ ಅಧ್ಯಕ್ಷ ಕೊರಟಿಕೆರೆ ರವಿಚಂದ್ರು, ಹೊನ್ನೇನಹಳ್ಳಿ ಎಸ್ ರವಿ, ಗಂಜಿಗೆರೆ ಮಹೇಶ್, ಅಗ್ರಹಾರಬಾಚಹಳ್ಳಿ ಶ್ರೀನಿವಾಸ್, ಸೈಯದ್ ಖಲೀಲ್ ಸೇರಿದಂತೆ ವಿದ್ಯಾರ್ಥಿಗಳ ಪೋಷಕರು ಹಾಗೂ ಸಾರ್ವಜನಿಕರು ನೂರಾರು ಸಂಖ್ಯೆಯಲ್ಲಿ ಭಾಗವಹಿಸಿದ್ದರು.

## ಕಾಂಕ್ರಿಟ್ ಸಿಟಿಯನ್ನು ಹಸಿರು ನಗರವಾಗಿಸೋಣ: ಸಚಿವ ಈಶ್ವರ ಬಿ. ಖಂಡ್ರೆ

# 153 ಎಕರೆ ಪ್ರದೇಶದಲ್ಲಿ ಬೃಹತ್ ಜೈವಿಕ ಉದ್ಯಾನವನ'



**ಬೆಂಗಳೂರು:** ವೈಜ್ಞಾನಿಕವಾಗಿ ಪರಿಸರ ಸಮತೋಲನ ಕಾಪಾಡಿಕೊಳ್ಳಲು ಶೇ.33ರಷ್ಟು ಹಸಿರು ಹೊದಿಕೆ ಇದ್ದಾಗ ಮಾತ್ರ ಆರೋಗ್ಯಕರ ನಗರವನ್ನು ಕಟ್ಟಲು ಸಾಧ್ಯ, ಬೆಳೆಯುತ್ತಿರುವ ಬೆಂಗಳೂರಿನಲ್ಲಿ ಹಸಿರು ಹೊದಿಕೆ ಕ್ಷೀಣಿಸುತ್ತಿದ್ದು, 1.40 ಕೋಟಿ ಜನಸಂಖ್ಯೆ ಇರುವ ಬೆಂಗಳೂರು ನಗರದಲ್ಲಿ ಕನಿಷ್ಠ 10 ಕೋಟಿ ಮರಗಳನ್ನು ಪೋಷಿಸುವ ಅಗತ್ಯವಿದೆ ಎಂದು ಅರಣ್ಯ, ಪರಿಸರ ಜಾಗೂ ಜೀವಿಶಾಸ್ತ್ರ ಸಚಿವ ಈಶ್ವರ ಬಿ. ಖಂಡ್ರೆ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ಅಸರ್ ಸೋಷಿಯಲ್ ಇಂಪ್ಯಾಕ್ಟ್ ಅಡ್ವೈಸರ್ ಸಂಸ್ಥೆಯ ಸಹಯೋಗದಲ್ಲಿ ಇಂದು ನಗರದ ಖಾಸಗಿ ಹೋಟೆಲ್‌ನಲ್ಲಿ ಆಯೋಜಿಸಿದ್ದ ಬೆಂಗಳೂರಿನಲ್ಲಿ ತಾಪಮಾನ ವೈಪರೀತ್ಯ ಹಾಗೂ ಅದರ ಪರಿಣಾಮಗಳ ಕುರಿತು ಮಾಧ್ಯಮ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿ, ಒಬ್ಬ ಮನಷ್ಯನಿಗೆ ಉತ್ತಮ ಆಮ್ಲಜನಕ ದೊರಕಲು ಕನಿಷ್ಠ 7 ಮರಗಳು ಇರಬೇಕು ಎಂದು ವಿಜ್ಞಾನ ಪ್ರತಿಪಾದಿಸುತ್ತದೆ ಎಂದರು.

ಬೆಂಗಳೂರಿನ ಪರಿಸರದಲ್ಲಾಗುತ್ತಿರುವ ಬದಲಾವಣೆ ಹಾಗೂ ಅರಣ್ಯ ಇಲಾಖೆಯ ಮುಂದಿನ ಯೋಜನೆಗಳ ಕುರಿತು ಸುದೀರ್ಘವಾಗಿ ಮಾತನಾಡಿದ ಅವರು ಒಂದು ಕಾಲದಲ್ಲಿ 'ನಿವೃತ್ತರ ಸ್ವರ್ಗ' ಹಾಗೂ 'ಹವಾನಿಯಂತ್ರಿತ ನಗರ' ಎಂದು ಖ್ಯಾತಿ ಪಡೆದಿದ್ದ ಬೆಂಗಳೂರು ಇಂದು ಕಾಂಕ್ರೀಟ್ ಜಂಗಲ್ ಆಗಿ ಮಾರ್ಪಡುತ್ತಿರುವುದು ಆತಂಕಕಾರಿ ವಿಷಯವಾಗಿದೆ.

ಬೆಂಗಳೂರು ಇದೇ ರೀತಿಯ ಬೆಳವಣಿಗೆ ಹಾಗೂ ವಾಹನ ದಟ್ಟಣೆ ಹೆಚ್ಚಿಸಿಕೊಂಡಲ್ಲಿ ನವದೆಹಲಿಯಂತೆ 'ಗ್ಯಾಸ್ ಚೇಂಬರ್' ಆಗುವುದನ್ನು ತಪ್ಪಿಸಲು ಹಸಿರು ಹೊದಿಕೆಯನ್ನು ಹೆಚ್ಚಿಸುವ ತತ್‌ಕ್ಷಣದ ಅಗತ್ಯವಿದೆ ಎಂದು ಹೇಳಿದರು.

**ಗತವೈಭವದ ಮರುಸ್ಥಾಪನೆ:** ಕೆಂಪೇಗೌಡರು ನಿರ್ಮಿಸಿದ ಹಸಿರು ಬೆಂಗಳೂರನ್ನು ಮರಳಿ ಪಡೆಯಲು ಅರಣ್ಯ ಇಲಾಖೆ ಬದ್ಧವಾಗಿದೆ. ನಗರದ ಸುತ್ತಮುತ್ತಲ ಹಸಿರು ಹೊದಿಕೆಯನ್ನು ಮರುಸ್ಥಾಪಿಸಲು ಮತ್ತು ಪರಿಸರ ಮಾಲಿನ್ಯ ತಡೆಗಟ್ಟಲು ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು.

**ಮಾಲಿನ್ಯ ಮತ್ತು ಕೆರೆಗಳ ಅವನತಿ:** ಬೆಂಗಳೂರಿನಲ್ಲಿದ್ದ ಸುಮಾರು 250 ಕೆರೆಗಳಲ್ಲಿ ಹಲವು ಅಭಿವೃದ್ಧಿಯಲ್ಲಿ ಮಾಯವಾಗಿದ್ದು, ಇನ್ನೂ ಕೆಲವು ಇಂದು ತ್ಯಾಜ್ಯ ನೀರು ಸೇರಿ ಕಲುಷಿತಗೊಂಡಿವೆ. ಇದರಿಂದ ಜಲ ಮತ್ತು ವಾಯು ಮಾಲಿನ್ಯ ಉಂಟಾಗುತ್ತಿದ್ದು, ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಸಂಚಾರ ದಟ್ಟಣೆ ಮತ್ತು ವಾಹನಗಳ ಕಾರ್ಬನ್ ಡೈಆಕ್ಸೈಡ್ ಹೊರಸೂಸುವಿಕೆಯಿಂದ ತಾಪಮಾನ ಏರುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

**11 ಕೋಟಿ ಸಸಿಗಳ ನಾಟಿ:** ಅರಣ್ಯ ಇಲಾಖೆಯ ಸಾಧನೆಯನ್ನು ಹಂಚಿಕೊಂಡ ಸಚಿವರು, "ಕಳೆದ ಮೂರು ವರ್ಷಗಳಲ್ಲಿ ರಾಜ್ಯದಾದ್ಯಂತ ಸುಮಾರು 11 ಕೋಟಿ ಸಸಿಗಳನ್ನು ನೆಡಲಾಗಿದೆ. ಇವುಗಳಲ್ಲಿ ಎಷ್ಟು ಸಸಿಗಳು ಬದುಕುಳಿದಿವೆ ಎಂಬುದರ ಬಗ್ಗೆ ವೈಜ್ಞಾನಿಕ ಸಮೀಕ್ಷೆ ನಡೆಸಿ, ಆ ವರದಿಯನ್ನು ಇಲಾಖೆಯ ವೆಬ್ಸೈಟ್ನಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಅಪ್ಲೋಡ್ ಮಾಡಲು ಸೂಚನೆ ನೀಡಿದ್ದೇನೆ," ಎಂದು ಮಾಹಿತಿ ನೀಡಿದರು.

ಬೆಂಗಳೂರಿನ 'ಶ್ವಾಸ ತಾಣ'ಗಳ ರಕ್ಷಣೆಗೆ ಅರಣ್ಯ ಇಲಾಖೆ ಮೆಗಾ ಪ್ಲಾನ್ ರೂಪಿಸಿದ್ದು, ನಗರದ ಆಯಕಟ್ಟಿನ ಪ್ರದೇಶಗಳಾದ ಕಾಡುಗೋಡಿ ಮತ್ತು ತುರಹಳ್ಳಿ ಭಾಗದಲ್ಲಿ ಅಕ್ರಮವಾಗಿ ಒತ್ತುವರಿಯಾಗಿದ್ದ ಸುಮಾರು ರೂ.10,000 ಕೋಟಿ ಮೌಲ್ಯದ ಅರಣ್ಯ ಭೂಮಿಯನ್ನು ಮರುವಶಪಡಿಸಿಕೊಳ್ಳಲಾಗಿದೆ. ಸಿಲಿಕಾನ್ ಸಿಟಿಯಲ್ಲಿ ದಿನೇ ದಿನೇ ಕುಸಿಯುತ್ತಿರುವ ಹಸಿರು ಹೊದಿಕೆಯನ್ನು ಹೆಚ್ಚಿಸಲು ಮತ್ತು ಪರಿಸರ ಸಮತೋಲನ ಕಾಯ್ದುಕೊಳ್ಳಲು ಕರ್ನಾಟಕ ಅರಣ್ಯ ಇಲಾಖೆ ಐತಿಹಾಸಿಕ ಹೆಜ್ಜೆ ಇರಿಸಿದೆ.

**ಮರುವಶವಾದ ಭೂಮಿಯಲ್ಲಿ 'ನೆಡುತೋಪು'ಗಳ ನಿರ್ಮಾಣ:** ಕೇವಲ ಒತ್ತುವರಿ ತೆರವು ಮಾಡುವುದಷ್ಟೇ ಅಲ್ಲದೆ, ಭೂಗಳ್ಳರು ಮತ್ತೆ ಅತಿಕ್ರಮಣ ಮಾಡದಂತೆ ತಡೆಯಲು ಇಲಾಖೆ ಮಾಸ್ಟರ್ ಪ್ಲಾನ್ ರೂಪಿಸಿದೆ. ಮರುವಶಪಡಿಸಿಕೊಂಡ ಜಾಗಕ್ಕೆ ತಕ್ಷಣವೇ ಕಾಂಪೌಂಡ್ ನಿರ್ಮಿಸಿ, ಸಾವಿರಾರು ಸಸಿಗಳನ್ನು ನೆಡುವ ಮೂಲಕ ಆ ಪ್ರದೇಶಗಳನ್ನು 'ನೆಡುತೋಪು' ಗಳನ್ನಾಗಿ ಪರಿವರ್ತಿಸಲಾಗುವುದು.

## 12,500ಕ್ಕೂ ಹೆಚ್ಚು ಮೆಕ್ಯಾನಿಕ್‌ಗಳು ಭಾಗವಹಿಸುವ ನಿರೀಕ್ಷೆ: ಮೊದಲ 500 ಮಂದಿಗೆ ಉಚಿತ ಬೈಕ್ ಸರ್ವೀಸ್ ಸೇವೆ

# ಮೇ 1 ರಂದು ಬೈಕ್ ಬೃಹತ್ ಸಮಾವೇಶ

**ಬೆಂಗಳೂರು:** ಕರ್ನಾಟಕ ದ್ವಿಚಕ್ರ ವಾಹನ ಕಾರ್ಯಗಾರ ಮಾಲೀಕರು ಮತ್ತು ತಂತ್ರಜ್ಞರ ಸಂಘ ದಿಂದ ಮೇ 1ರಂದು ಕಾರ್ಮಿಕ ದಿನಾಚರಣೆಯ ಅಂಗವಾಗಿ ಬೆಂಗಳೂರಿನ ಅರಮನೆ ಮೈದಾನದಲ್ಲಿ ಆಲ್ ಇಂಡಿಯಾ ಬೈಕ್ ಮೆಕ್ಯಾನಿಕಲ್ ಅಸೋಸಿಯೇಷನ್ ಬೃಹತ್ ಸಮಾವೇಶ ಆಯೋಜಿಸಲಾಗಿದೆ ಎಂದು ಸಂಘದ ರಾಜ್ಯಾಧ್ಯಕ್ಷ ಕೆ.ಎಸ್. ಪ್ರಸನ್ನ ಕುಮಾರ್ ಗೌಡ ಹೇಳಿದ್ದಾರೆ.

ದೇಶದ ವಿವಿಧ ಭಾಗಗಳಿಂದ 12,500ಕ್ಕೂ ಅಧಿಕ ಮ್ಯಾಕಾನಿಕ್ ಗಳು ಭಾಗವಹಿಸುವ ನಿರೀಕ್ಷೆಯಿದ್ದು, ಅರಮನೆ ಮೈದಾನದ ಗೇಟ್ ನಂ.5ರ ಕಿಂಗ್ಸ್ ಕೋರ್ಟ್ ಪ್ಯಾಲೆಸ್‌ನಲ್ಲಿ ಮೊದಲು ಆಗಮಿಸುವ 500 ಮಂದಿಗೆ ಉಚಿತವಾಗಿ ಬೈಕ್ ಜನರಲ್ ಸರ್ವೀಸ್ ಮತ್ತು ಆಯಿಲ್ ಚೇಂಜ್ ಮಾಡಿಕೊಡಲಾಗುವುದು. ಜೊತೆಗೆ ದ್ವಿಚಕ್ರ ವಾಹನಗಳ ಅತ್ಯಾಧುನಿಕ ಬಿಡಿ ಪರಿಕರಗಳ ವೈವಿಧ್ಯಮಯ ಪ್ರದರ್ಶನ ಏರ್ಪಡಿಸಲಾಗಿದೆ ಎಂದರು.

ಸಭಾಧ್ಯಕ್ಷ ಯು.ಟಿ. ಖಾದರ್ ಸಮಾವೇಶ ಉದ್ಘಾಟಿಸಲಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಾರಿಗೆ ಸಚಿವ ರಾಮಾಲಿಂಗಾ ರೆಡ್ಡಿ, ಕಾರ್ಮಿಕ ಸಚಿವ ಸಂತೋಷ್ ಲಾಡ್ ಮತ್ತಿತರರು ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ. ಇದು ದ್ವಿಚಕ್ರ ವಾಹನ ತಂತ್ರಜ್ಞರ ಕ್ಷೇತ್ರದಲ್ಲಿ ದೇಶದ ಮಟ್ಟದಲ್ಲಿ ನಡೆಯುವ ಅತಿ ದೊಡ್ಡ ಸಮಾವೇಶಗಳಲ್ಲಿ ಒಂದಾಗಿದೆ. ?ಈ ಸಮಾವೇಶವು ಕೇವಲ ಒಂದು ಕಾರ್ಯಕ್ರಮವಲ್ಲ, ದೇಶವನ್ನು ಚಲಿಸುವ ಕೈಗಳ ಸಂಭ್ರಮವಾಗಿದೆ.




ತಂತ್ರಜ್ಞರ ಕೌಶಲ್ಯ ವೃದ್ಧಿ, ಜಾಲ ನಿರ್ಮಾಣ ಮತ್ತು ಹೊಸ ತಂತ್ರಜ್ಞಾನವನ್ನು ಪರಿಚಯಿಸಲಾಗುತ್ತಿದೆ ಎಂದರು.

ಸಮಾವೇಶದಲ್ಲಿ ಆಧುನಿಕ ಡಯಾಗ್ನೋಸ್ಟಿಕ್ ಸಾಧನಗಳು, ಬಿಡಿ ಪರಿಕರಗಳು, ತಂತ್ರಜ್ಞಾನ ಪ್ರದರ್ಶನ ಏರ್ಪಡಿಸಲಾಗಿದೆ. ಉಚಿತ ಸೇವಾ ಶಿಬಿರ ಆಯೋಜಿಸಿದ್ದು, ಸಾರ್ವಜನಿಕರಿಗೆ ಉಚಿತ ದ್ವಿಚಕ್ರ ವಾಹನ ತಪಾಸಣೆ ಮತ್ತು ಆಯಿಲ್ ಬದಲಾವಣೆ ಮಾಡಿಕೊಡಲಾಗುವುದು. ಉತ್ಪಾದಕರು, ತಜ್ಞರು ಮತ್ತು ವರ್ಕ್‌ಶಾಪ್ ಮಾಲೀಕರ ನಡುವೆ ನೇರ ಸಂವಾದ ಏರ್ಪಡಿಸಲಾಗಿದೆ. ಈ ಸಮಾವೇಶವು ತಂತ್ರಜ್ಞರ ವೃತ್ತಿಗೆ ಗೌರವ ಮತ್ತು ಗುರುತನ್ನು ನೀಡುವ ದಿಸೆಯಲ್ಲಿ ಮಹತ್ವದ ಹೆಜ್ಜೆಯಾಗಿದ್ದು, ದೇಶದಾದ್ಯಂತದ ಮೆಕ್ಯಾನಿಕ್ ಸಮುದಾಯವನ್ನು ಒಂದೇ ವೇದಿಕೆಯಲ್ಲಿ ಒಗ್ಗೂಡಿಸುವ ಗುರಿ ಹೊಂದಲಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ರಾಜ್ಯ ಕಾರ್ಯದರ್ಶಿ ಭಾಸ್ಕರ್ ಜಿ ನಾಯ್ಡು, ಸಲಹೆಗಾರರಾದ ವೆಂಕಟ್ ಶ್ಯಾಮ್, ತಂಡದ ಉಸ್ತುವಾರಿ ವೆಂಕಟೇಶ್ ಬಾಬು, ಕಾರ್ಯಕಾರಿ ಸದಸ್ಯ ಸಾದಿಕ್ ಪಾಶರ್ ಉಪಸ್ಥಿತರಿದ್ದರು .

## ಕಟ್ಟಡ ಕಾರ್ಮಿಕರ ಸಮಾಲೋಚನಾ ಸಭೆ




**ರಾಮನಗರ:** ಸ್ಪಂದನ ಸಂಘಟನೆ ಸಂಸ್ಥೆ ವತಿಯಿಂದ ಕಟ್ಟಡ ಕಾರ್ಮಿಕರಿಗೆ ಸಮಾಲೋಚನಾ ಸಭೆಯನ್ನು ಏರ್ಪಡಿಸಲಾಗಿತ್ತು.

ಕಾರ್ಯಕ್ರಮದ ಸಂಪನ್ಮೂಲ ವ್ಯಕ್ತಿ ರಾಘವೇಂದ್ರರವರು ಕಟ್ಟಡ ಕಾರ್ಮಿಕ ಕಲ್ಯಾಣ ಇಲಾಖೆಯು 1996ರಲ್ಲಿ ಕಾರ್ಯ ಪ್ರವೃತ್ತವಾಗಿದ್ದು ಕಟ್ಟಡ ಕಾರ್ಮಿಕರ ಶ್ರೇಯೋಭಿವೃದ್ಧಿಗಾಗಿ ಕೆಲಸ ಮಾಡುತ್ತಿದೆ. ಕಟ್ಟಡ ಕಾರ್ಮಿಕರಿಗಾಗಿ ಲೇಬರ್ ಕಾರ್ಡ್ ಗಳನ್ನು ಮಾಡುತ್ತಿದ್ದು, ಈ ಕಾರ್ಡನ್ನು ಹೊಂದಿರುವವರಿಗೆ ಹಲವು ಸೌಲಭ್ಯಗಳು ದೊರೆಯುತ್ತದೆ ಎಂದು ತಿಳಿಸಿದರು.


ಈ ಕಾರ್ಡನ್ನು ಮಾಡಿಸಿಕೊಳ್ಳಲು ಫಲಾನುಭವಿಯು ಆಧಾರ್ ಕಾರ್ಡ್, ರೇಷನ್ ಕಾರ್ಡ್, ಕುಟುಂಬದವರ ಆಧಾರಕಾರ್ಡ್, ಬ್ಯಾಂಕ್ ಖಾತೆ ಮತ್ತು ಬ್ಯಾಂಕ್ ಖಾತೆಯು ಆಧಾರ್ ಕಾರ್ಡ್ ಗೆ ಲಿಂಕ್ ಆಗಿರಬೇಕು. ಇಷ್ಟು ದಾಖಲಾತಿಗಳು ಇದ್ದರೆ ಲೇಬರ್ ಕಾರ್ಡ್ ಮಾಡಿಸಬಹುದು. ಸ್ಪಂದನ ಕಚೇರಿಯಲ್ಲಿ ಈ ಕಾರ್ಡ್ ಗಳನ್ನು ಉಚಿತವಾಗಿ ಮಾಡಿಕೊಡುತ್ತಾರೆ. ಮಾರುಕಟ್ಟೆಯಲ್ಲಿ ಹೆಚ್ಚಿನ ಹಣ ಪಾವತಿಸಿ ಮೋಸ ಹೋಗಬೇಡಿ ಎಂದು ತಿಳಿಸಿದರು.

ಈ ಕಾರ್ಡ್ ಮಾಡಿಸುವುದರಿಂದ ಮಕ್ಕಳ ವಿದ್ಯಾಭ್ಯಾಸಕ್ಕೆ ವಿದ್ಯಾರ್ಥಿ ವೇತನ, ಮಕ್ಕಳ ಮದುವೆ ಖರ್ಚಿಗಾಗಿ ಸಹಾಯಧನ, ಅಪಘಾತ ಮತ್ತು ಸಾವು ಉಂಟಾದರೆ ಪರಿಹಾರ ಮತ್ತಿತರ ಸೌಲಭ್ಯ ದೊರೆಯುತ್ತದೆ. ಕರ್ನಾಟಕದ ಯಾವ ಜಿಲ್ಲೆಯವರಾದರೂ ಇದರ ಸೌಲಭ್ಯ ಪಡೆದುಕೊಳ್ಳಬಹುದು ಎಂದು ತಿಳಿಸಿದರು.

ಸ್ಪಂದನ ಸಂಘಟನೆಯ ಕಾರ್ಯದರ್ಶಿ ಮಾಲಿನಿ ಅಂತರ್ಜನಂ ಮತ್ತು ಸಿಬ್ಬಂದಿಗಳಾದ ಸುನಿತಾ, ಕಾವ್ಯ, ಜಯಶ್ರೀ ಹಾಗೂ ಕಟ್ಟಡ ಕಾರ್ಮಿಕ ಮುಖಂಡರಾದ ರಾಚಪ್ಪ ಕಾರ್ಯಕ್ರಮದಲ್ಲಿ ಇದ್ದರು.

# ಅರಿವಿನ ಅಂತರಾಳ





ಮಾನವನ ಬದುಕು ಒಂದು ವಿರೋಧಾಭಾಸ. ಹುಟ್ಟಿದಾಗ ಮುಷ್ಟಿ ಹಿಡಿದು ಬರುವ ಮಗು, ಜಗತ್ತಿನ ಎಲ್ಲವನ್ನೂ ತನ್ನದಾಗಿಸಿಕೊಳ್ಳುವ ಹಂಬಲವನ್ನು ಅರಿವಿಲ್ಲದೆಯೇ ಪ್ರದರ್ಶಿಸುತ್ತದೆ. ಬೆಳೆಯುತ್ತಾ ಹೋದಂತೆ ಈ ಹಂಬಲವೇ 'ಆಸೆ'ಯಾಗಿ, 'ಮಮಕಾರ'ವಾಗಿ ಮಾರ್ಪಡುತ್ತದೆ. ಆದರೆ, ಬದುಕಿನ ಸಂಧ್ಯಾಕಾಲದಲ್ಲಿ ಅದೇ ಕೈಗಳು ಮುಷ್ಟಿ ಬಿಟ್ಟು, "ನನಗೇನೂ ಬೇಡ" ಎಂಬ ಮೌನಕ್ಕೆ ಶರಣಾಗುತ್ತವೆ.

1. **ಆಸೆಯ ಅತಿರೇಕ:** 'ಎಲ್ಲವೂ ಬೇಕು' ಎಂಬ ಹಂತ
   ನಮ್ಮ ಬದುಕಿನ ಮೊದಲ ಅರ್ಧಭಾಗ ಕೇವಲ ಸಂಚಯನಕ್ಕೆ ಮೀಸಲಾಗಿರುತ್ತದೆ. ವಿದ್ಯೆ, ಉದ್ಯೋಗ, ಅಂತಸ್ತು, ಆಸ್ತಿ ? ಹೀಗೆ ಪ್ರತಿಯೊಂದರಲ್ಲೂ "ನನಗೆ ಬೇಕು" ಎನ್ನುವ ಹಪಾಹಪಿ ಇರುತ್ತದೆ. ಜಗತ್ತಿನಲ್ಲಿ ಮನುಷ್ಯ ವಸ್ತುಗಳನ್ನು ತನ್ನ ಅಸ್ತಿತ್ವದ ಗುರುತಾಗಿ ಕಾಣುತ್ತಾನೆ. "ನನ್ನ ಹತ್ತಿರ ಇಷ್ಟು ಕಾರುಗಳಿವೆ, ಇಷ್ಟು ಮನೆಗಳಿವೆ" ಎಂದು ಹೇಳಿಕೊಳ್ಳುವಲ್ಲಿ ಮನುಷ್ಯ ತನ್ನ ಅಹಂಕಾರವನ್ನು ತಣಿಸಿಕೊಳ್ಳುತ್ತಾನೆ.
   ಆದರೆ, ಈ ಸಂಚಯನ ಬುದ್ಧಿ ಎಷ್ಟು ಅಪಾಯಕಾರಿ ಎಂದರೆ, ಒಂದು ಆಸೆ ಈಡೇರಿದಾಗ ಹತ್ತು ಹೊಸ ಆಸೆಗಳು ಜನ್ಮತಾಳುತ್ತವೆ. ಇದು ಮರೀಚಿಕೆಯ ಬೆನ್ನತ್ತಿದಂತೆ. ನಾವು ಎಷ್ಟು ಸಂಗ್ರಹಿಸುತ್ತೇವೆಯೋ ಅಷ್ಟು ಭಯ ಮತ್ತು ಅಶಾಂತಿ ನಮಗೆ ಅರಿವಿಲ್ಲದೆಯೇ ಬೆಳೆಯುತ್ತಾ ಹೋಗುತ್ತದೆ. ಸಂಸ್ಕೃತದಲ್ಲಿ ಒಂದು ಮಾತಿದೆ: "ನ ಜಾತು ಕಾಮಃ ಕಾಮಾನಾಂ ಉಪಭೋಗೇನ ಶಾಮ್ಯತಿ" ಅಂದರೆ, ಆಸೆಗಳನ್ನು ಅನುಭವಿಸುವುದರಿಂದ ಅವು ಎಂದಿಗೂ ಶಾಂತವಾಗುವುದಿಲ್ಲ, ಬದಲಾಗಿ ತುಪ್ಪ ಸುರಿದ ಬೆಂಕಿಯಂತೆ ಹೆಚ್ಚುತ್ತವೆ.
2. **ಸಂಬಂಧಗಳ ಮಾಯೆ:** 'ಎಲ್ಲರೂ ನನ್ನವರೇ' ಎಂಬ ಭ್ರಮೆ
   ಜೀವನದ ಎರಡನೆಯ ಮಗ್ಗುಲು ಸಂಬಂಧಗಳದ್ದು. ನಾವು ಸುಖದಲ್ಲಿದ್ದಾಗ, ಅಧಿಕಾರದಲ್ಲಿದ್ದಾಗ ಅಥವಾ ಸಂಪತ್ತಿನ ಮದದಲ್ಲಿದ್ದಾಗ ನಮ್ಮ ಸುತ್ತಲೂ ಜನರ ದಂಡೇ ಇರುತ್ತದೆ. ಆಗ "ಎಲ್ಲರೂ ನನ್ನವರೇ, ಇವರೆಲ್ಲರಿಗಾಗಿ ನಾನು ಏನನ್ನಾದರೂ ಮಾಡುತ್ತೇನೆ" ಎಂಬ ಭಾವನೆ ಮೂಡುತ್ತದೆ. ಇದು ಸಾಮಾಜಿಕ ಜೀವನದ ಒಂದು ಅವಿಭಾಜ್ಯ ಅಂಗವೂ ಹೌದು.
   ಆದರೆ, ಈ ಹಂತದಲ್ಲಿ ನಾವು ಮಾಡುವ ದೊಡ್ಡ ತಪ್ಪು ಎಂದರೆ 'ನಿರೀಕ್ಷೆ'. ನಾವು ಯಾರನ್ನು 'ನಮ್ಮವರು' ಎಂದು ಭಾವಿಸುತ್ತೇವೆಯೋ, ಅವರಿಂದ ಪ್ರೀತಿ, ಗೌರವ ಅಥವಾ ಕೃತಜ್ಞತೆಯನ್ನು ನಿರೀಕ್ಷಿಸುತ್ತೇವೆ. ಯಾವಾಗ ಈ ನಿರೀಕ್ಷೆಗಳು ಸುಳ್ಳಾಗುತ್ತವೆಯೋ, ಆಗ 'ನನ್ನವರು' ಎಂದುಕೊಂಡವರೇ ಪರಕೀಯರಾಗಿ ಕಾಣತೊಡಗುತ್ತಾರೆ. ನಿಜ ಜೀವನದ ಪಾಠಗಳು ಆರಂಭವಾಗುವುದು ಇಲ್ಲಿಯೇ.
3. ಅನುಭವದ ಪರಿಪಾಕ ಮತ್ತು ಕಗ್ಗದ ದರ್ಶನ
   ಜೀವನದ ಸತ್ಯಗಳು ನಮಗೆ ಸುಲಭವಾಗಿ ದಕ್ಕುವುದಿಲ್ಲ. ಅದಕ್ಕೆ ಕಾಲದ ಹೊಡೆತ ಬೇಕು. ಡಿ.ವಿ.ಜಿ ಅವರು 'ಮಂಕುತಿಮ್ಮನ ಕಗ್ಗ'ದಲ್ಲಿ ವೈರಾಗ್ಯ ಮತ್ತು ಸಂಬಂಧಗಳ ನಡುವಿನ ಸಮತೋಲನವನ್ನು ಬಹಳ ಮಾರ್ಮಿಕವಾಗಿ ಚಿತ್ರಿಸಿದ್ದಾರೆ.


**ಹುಟ್ಟಿದೊಡನೆಯೆ ಸಾವು ಬೆನ್ನಟ್ಟಿ ಬರುವುದು ।**
**ಇಟ್ಟ ಹೆಜ್ಜೆಯನೆಲ್ಲ ಮೃತ್ಯು ಅರಿವುತ್ತ ॥**
**ಕಟ್ಟುಗಳ ಕಳಚುತಲೆ ನಡೆಯುತಿಹನು ಜೀವ ।**
**ಬಿಟ್ಟರೇನನು ಹೋಗೊ? ಮಂಕುತಿಮ್ಮ ॥**

ನಾವು ಯಾವುದನ್ನು ಶಾಶ್ವತ ಎಂದು ಕೊಂಡಿದ್ದೇವೋ, ಆ ಪ್ರತಿಯೊಂದು ಬಂಧವನ್ನೂ ಕಾಲವು ಒಂದೊಂದಾಗಿ ಕಳಚುತ್ತಾ ಹೋಗುತ್ತದೆ. ಕೊನೆಗೆ ಉಳಿಯುವುದು ಕೇವಲ ನಾವು ಮಾತ್ರ. "ಎಲ್ಲವೂ ಬೇಕು" ಎಂದು ಹಂಬಲಿಸಿದ ನಮಗೆ, ಯಾವುದೂ ನಮ್ಮೊಂದಿಗೆ ಬರುವುದಿಲ್ಲ ಎಂಬ ಸತ್ಯ ಅರಿವಾದಾಗ ಉದಯಿಸುವುದೇ ನಿಜವಾದ 'ವೈರಾಗ್ಯ'.

4. **ವೈರಾಗ್ಯದ ಉದಯ:** 'ನನಗೇನೂ ಬೇಡ' ಎಂಬ ಸ್ಥಿತಿ
   ವೈರಾಗ್ಯ ಎಂದರೆ ಕಾಡಿಗೆ ಹೋಗುವುದಲ್ಲ ಅಥವಾ ಸಂಸಾರವನ್ನು ತ್ಯಜಿಸುವುದಲ್ಲ. ವೈರಾಗ್ಯ ಎಂದರೆ "ನನ್ನ ನೆಮ್ಮದಿಗೆ ಹೊರಗಿನ ಯಾವ ವಸ್ತುವೂ ಕಾರಣವಲ್ಲ" ಎಂಬ ಅರಿವು ಮೂಡುವುದು. ಯಾವಾಗ ಮನುಷ್ಯ ತನ್ನ ಒಳಗೆ ಶಾಂತಿಯನ್ನು ಕಂಡುಕೊಳ್ಳುತ್ತಾನೋ, ಆಗ ಅವನಿಗೆ ಭೌತಿಕ ವಸ್ತುಗಳ ಮೇಲಿನ ವ್ಯಾಮೋಹ ತಾನಾಗಿಯೇ ಕಡಿಮೆಯಾಗುತ್ತದೆ.
   ಇಂದು ನಾವು ನೋಡುತ್ತಿರುವ ಅನೇಕ ಮಾನಸಿಕ ಒತ್ತಡಗಳಿಗೆ ಮೂಲ ಕಾರಣ 'ಸಂಗ್ರಹ ಬುದ್ಧಿ'. ನಾವು ಅವಶ್ಯಕತೆಗಿಂತ ಹೆಚ್ಚು ಸಂಗ್ರಹಿಸುತ್ತೇವೆ, ಅತಿಯಾಗಿ ಹಚ್ಚಿಕೊಳ್ಳುತ್ತೇವೆ. ಯಾವಾಗ "ನನಗೇನೂ ಬೇಡ" ಎಂಬ ತೃಪ್ತಿ ಭಾವ ಮೂಡುತ್ತದೆಯೋ, ಆಗ ಬದುಕು ಹಗುರವಾಗುತ್ತದೆ. ಭಾರವಿಲ್ಲದ ದೋಣಿ ಸುಲಭವಾಗಿ ಸಾಗುವಂತೆ, ಆಸೆಗಳ ಭಾರವಿಲ್ಲದ ಮನಸ್ಸು ಜೀವನದ ಸಂಕಷ್ಟಗಳನ್ನು ಸುಲಭವಾಗಿ ದಾಟುತ್ತದೆ.
5. **ಏಕಾಂತದ ಸತ್ಯ:** "ಯಾರೂ ನನ್ನವರಲ್ಲ ಎನ್ನುವುದೇ ನಿಜ ಜೀವನ." ಇದನ್ನು ಕೇಳಲು ಕಹಿಯಾಗಿ ಕಂಡರೂ, ಇದು ಪರಮ ಸತ್ಯ. ಆಧ್ಯಾತ್ಮಿಕ ದೃಷ್ಟಿಕೋನದಲ್ಲಿ ನೋಡಿದರೆ, ಪ್ರತಿಯೊಬ್ಬ ಜೀವಿಯೂ ಈ ಜಗತ್ತಿಗೆ ಬರುವುದು ಏಕಾಂಗಿಯಾಗಿ, ಹೋಗುವುದು ಏಕಾಂಗಿಯಾಗಿ.
   ನಡುವೆ ಸಿಗುವ ತಂದೆ–ತಾಯಿ, ಪತ್ನಿ–ಮಕ್ಕಳು, ಸ್ನೇಹಿತರು ಎಲ್ಲರೂ ಈ ಪಯಣದ ಸಹಪ್ರಯಾಣಿಕರು ಅಷ್ಟೇ. ರೈಲಿನಲ್ಲಿ ಸಿಗುವ ಸಹಪ್ರಯಾಣಿಕರನ್ನು ನಾವು ಪ್ರೀತಿಸುತ್ತೇವೆ, ಗೌರವಿಸುತ್ತೇವೆ, ಆದರೆ ಅವರ ನಿಲ್ದಾಣ ಬಂದಾಗ ಅವರು ಇಳಿಯಲೇಬೇಕು. ಅವರ ಮೇಲೆ ಹಕ್ಕು ಚಲಾಯಿಸುವುದು ಅಥವಾ ಅವರು ಶಾಶ್ವತವಾಗಿ ನಮ್ಮೊಂದಿಗೇ ಇರಬೇಕೆಂದು ಬಯಸುವುದು ಮೂರ್ಖತನ. "ಯಾರೂ ನನ್ನವರಲ್ಲ" ಎಂಬ ಅರಿವು ಬಂದಾಗ, ನಾವು ನಮ್ಮವರನ್ನು ಹೆಚ್ಚು ಮುಕ್ತವಾಗಿ ಮತ್ತು ನಿಸ್ವಾರ್ಥವಾಗಿ ಪ್ರೀತಿಸಲು ಸಾಧ್ಯವಾಗುತ್ತದೆ. ಯಾಕೆಂದರೆ ಅಲ್ಲಿ ಮಾಲೀಕತ್ವದ (Ownership) ಭಾವ ಇರುವುದಿಲ್ಲ.

ಬದುಕು ಎನ್ನುವುದು ಒಂದು ದೊಡ್ಡ ಶಾಲೆ. ಇಲ್ಲಿ 'ಆಸೆ' ಎನ್ನುವ ಪಾಠದಿಂದ ಆರಂಭಿಸಿ 'ತ್ಯಾಗ' ಎನ್ನುವ ಪದವಿಯವರೆಗೆ ನಾವು ಸಾಗಬೇಕು. "ಎಲ್ಲವೂ ಬೇಕು" ಎನ್ನುವುದು ಅಜ್ಞಾನವಾದರೆ, "ಎಲ್ಲವೂ ಇದೆ, ಆದರೆ ನನಗೇನೂ ಬೇಡ" ಎನ್ನುವುದು ಜ್ಞಾನ.

ನಮ್ಮ ಸಂಬಂಧಗಳಲ್ಲಿ ಪ್ರೀತಿ ಇರಲಿ ಆದರೆ ಬಂಧನವಿರದಿರಲಿ. ನಮ್ಮ ಆಸೆಗಳಲ್ಲಿ ಶ್ರಮವಿರಲಿ ಆದರೆ ಲೋಭವಿರದಿರಲಿ. ಈ ಸಮತೋಲನವೇ ಜೀವನದ ಯಶಸ್ಸಿನ ಸೂತ್ರ. ಅಂದುಕೊಂಡಿದ್ದನ್ನು ಸಾಧಿಸುವ ಛಲ ನಮಗಿರಲಿ, ಆದರೆ ಅಂದುಕೊಂಡಿದ್ದು ಸಿಗದಿದ್ದಾಗಲೂ ಮುಗುಳ್ನಗುವ ವೈರಾಗ್ಯ ನಮ್ಮದಾಗಲಿ. ಆಗಲೇ ನಮಗೆ "ಶುಭೋದಯ" ಎನ್ನುವ ಪದಕ್ಕೆ ಪೂರ್ಣ ಅರ್ಥ ಸಿಗುವುದು.




। ರಚನೆ : ಸ್ವಾಮಿನಾಥನ್
ಮೊಬೈಲ್ : 9880041516
Email : Swamynathann@gmail.com


# ಜೀವನವೆಂದ ಮೇಲೆ ಸರಸ ವಿರಸ ಎಲ್ಲವೂ ಸಹಜವೇ




। ಪುಷ್ಪ ಪ್ರಸಾದ್


ಪ್ರೀತಿ ಎಂದ ಮೇಲೆ ಭಾವನೆಗಳು ಬರುವುದು ಸಹಜ. ಅಂತೆಯೇ ಪ್ರೀತಿ ಹೆಚ್ಚಾದಂತೆ ಭಾವನೆಗಳೆಲ್ಲಾ ಕುರುಡು ಬಯಕೆಗಳಾಗಿ ಮಾರ್ಪಡುತ್ತವೆ. ಇದಕ್ಕೆ ಯಾರೂ ಹೊರತಲ್ಲ. ಕೆಲವೊಮ್ಮೆ ಇದು ವಿಪರೀತವಾದಾಗ ಇಂತಹ ಭಾವನೆಗಳೇ ಇಬ್ಬರ ಮಧ್ಯೆ ಮುಳ್ಳಾಗುತ್ತವೆ ಮತ್ತು ಒಬ್ಬರನ್ನೊಬ್ಬರು ನೋಡದಂತೆ ಎದುರು ಬರದಂತೆ ಮಾಡುತ್ತವೆ. ಆದರೆ ಮನುಷ್ಯ ಈ ಸಮಾಜದಲ್ಲಿ ಸಹಜವಾಗೇ ವಾಸ್ತವದಲ್ಲಿ ಬದುಕಬೇಕಾಗಿರುವುದರಿಂದ ಆರಂಭದ ಕ್ಷಣದಲ್ಲಿ ಪ್ರೀತಿ ಎನ್ನುವುದು ಒಂದು ಸುಂದರ ಗುಲಾಬಿ ಹೂವಿನಂತೆ ಕಂಗೊಳಿಸುತ್ತದೆ. ಇದರಿಂದ ವಾಸ್ತವತೆಯ ಅರಿವೇ ಇಲ್ಲದೆ ಮನುಷ್ಯ ವರ್ತಿಸಬೇಕಾಗುತ್ತದೆ. ಇದೆಲ್ಲ ದಿನ ಕಳೆದಂತೆ ಸಂಬಂಧ ಗಟ್ಟಿಯಾದಂತೆ ಒಬ್ಬರಿಗೊಬ್ಬರು ಸಲುಗೆಯಿಂದ ಇರತೊಡಗಿದಾಗ ಮನುಷ್ಯನಿಗೆ ಎಲ್ಲೋ ಒಂದು ಕಡೆ ನಾನು ಬಾಹ್ಯವಾಗಿ ಕುರುಡಾಗುತ್ತಿದ್ದೇನಾ ಎಂಬ ಭಾವನೆ ಬರಲಾರಂಭಿಸುತ್ತದೆ. ಆದರೆ ನಿಜವಾಗಲೂ ಒಳಗಣ್ಣಿನಿಂದ ನೋಡಿದಾಗ ಇದೆಲ್ಲಾ ನಮಗೆ ಜೀವನ ಕಲಿಸುವ ಒಂದು ಪಾಠವಾಗುತ್ತದೆ ಎಂಬುದನ್ನು ನೆನೆಪಿಟ್ಟುಕೊಳ್ಳಬೇಕು. ಸಂಗಾತಿಯು ಒಂದು ಚೆಂಗುಲಾಬಿಯಂತೆ ಗೋಚರಿಸಿದರೂ ಅದ್ಯಾವುದೂ ಶಾಶ್ವತವಲ್ಲ. ಜೀವನವೆಂದ ಮೇಲೆ ಸರಸ ವಿರಸ ಎಲ್ಲವೂ ಸಹಜವೇ. ಹಾಗೆಂದು ಸರಸ ವಿದ್ದಾಗ ಮಾತ್ರ ಬಾಳ ಸಂಗಾತಿಯಾದವರು ಪ್ರೀತಿಸುತ್ತಾರೆ ಅಥವಾ ವಿರಸ ಉಂಟಾದಾಗ ಪ್ರೀತಿಸುವುದಿಲ್ಲ ಎಂದು ಏನು ಇಲ್ಲ. ಮನುಷ್ಯ ಜೀವನದಲ್ಲಿ ಎಲ್ಲವೂ ಅಗತ್ಯವೇ. ಪ್ರತಿಯೊಂದರಲ್ಲೂ ಅದರದೇ ಆದ ಸಾಮರಸ್ಯ ವಿರುತ್ತದೆ. ಅದನ್ನು ಅರ್ಥ ಮಾಡಿಕೊಳ್ಳುವ ಸಾಮರ್ಥ್ಯ ಮತ್ತು ಅಂತಹ ಗುಣವನ್ನು ನಾವೆಲ್ಲರೂ ಬೆಳೆಸಿಕೊಳ್ಳಬೇಕು. ಏಕೆಂದರೆ ಕೆಲವೊಮ್ಮೆ ಸಂಗಾತಿಯೊಡನೆ ಜಗಳದಿಂದಲೋ ಅಥವಾ ಮನಸ್ತಾಪದಿಂದಲೋ ಜೀವನವೇ ಬೇಡ ಎಂದೆನಿಸಿಬಿಡಬಹುದು.ಎಂತಹ ಕಷ್ಟದ ಸಮಯದಲ್ಲೂ ತಾಳ್ಮೆ ಕಳೆದು ಕೊಳ್ಳಬಾರದು. ನಾವು ಬದುಕಲು ಹೇಗೆ ಕಷ್ಟಪಟ್ಟು ಶ್ರಮದಿಂದ ದುಡಿದು ನಮ್ಮ ಜೀವನವನ್ನು ಕಟ್ಟಿಕೊಳ್ಳಲು ಪ್ರಯತ್ನ ಪಡುತ್ತೇವೋ, ಹಾಗೆ ಇಬ್ಬರ ಪ್ರೀತಿ ಗಟ್ಟಿಯಾಗಿ ಉಳಿಯಬೇಕೆಂದರೆ ಅದಕ್ಕೂ ಸಹ ಶ್ರಮದ ಅವಶ್ಯಕತೆ ತುಂಬಾ ಇರುತ್ತದೆ. ಇದು ಇಬ್ಬರ ಪ್ರೀತಿಯನ್ನು ಉಳಿಸಿ ಬೆಳೆಸಬೇಕೆನ್ನುವ ಶ್ರಮವಾಗಿರಬೇಕು. ಇದನ್ನು ಅರ್ಥೈಸಿಕೊಂಡು ನಡೆದರೆ ಜೀವನದ ಖುಷಿಯನ್ನು ಪಡೆಯಲು ಸಾಧ್ಯ. ನಿನ್ನೆ ಸರಿಯಿದ್ದ ಸಂಬಂಧ ಇಂದು ಹದಗೆಟ್ಟು ಹೋಗಲು ಕಾರಣವೇನೆಂದು ತಿಳಿಯುತ್ತಾ ಹೋದರೆ ತಪ್ಪು ನಮ್ಮಲ್ಲೇ ಸಿಗುತ್ತದೆ. ಸುಮ್ಮನೆ ಎಲ್ಲಾದಕ್ಕೂ ಅಪಾರ್ಥ ಮಾಡಿಕೊಂಡು, ಮುನಿಸಿಕೊಂಡು ಅದಕ್ಕೆ ವಿಚ್ಛೇದನವೇ ಮದ್ದು ಎಂದರೆ ಅದು ಖಂಡಿತಾ ತಪ್ಪು. ಸಣ್ಣಪುಟ್ಟ ವಿಷಯಗಳಿಗೆ ಜಗಳ ಮಾಡಿಕೊಳ್ಳದೇ ಸಮತೋಲನವಾಗಿ ತೂಗಿಸಿಕೊಂಡು ನಡೆದರೆ ಬದುಕಲ್ಲಿ ತುಂಬುವುದು ಖುಷಿ.





# `ಕೀಳರಿಮೆ ತೊರೆದು ಎದ್ದೇಳಿ'




। ಡಾ.ಸುಧಾಕರ.ಜಿ.ಲಕ್ಕವಳ್ಳಿ


ನಾನು ದಡ್ಡ, ನನ್ನಿಂದ ಕಲಿಕೆ ಅಸಾಧ್ಯ ಎಂಬ ಕೀಳರಿಮೆ ಹಾಗೂ ಸೋಮಾರಿತನ ಇಂದಿನ ಯುವಪೀಳಿಗೆಯನ್ನು ಹಳಿ ತಪ್ಪಿಸುತ್ತಿರುವ ಮೌನ ಶತ್ರುಗಳು. ನೆನಪಿರಲಿ, ಪ್ರತಿಭೆ ಎಂಬುದು ಕೇವಲ ಜನ್ಮದತ್ತವಾಗಿ ಬರುವುದಿಲ್ಲ; ಅದು ನಿರಂತರ ಪರಿಶ್ರಮದ ಅಗ್ನಿಕುಂಡದಲ್ಲಿ ಅರಳುವ ಚೈತನ್ಯ. ಇದಕ್ಕೆ ಜೀವಂತ ನಿದರ್ಶನವೇ ಯಕ್ಷಗಾನದ ಧ್ರುವತಾರೆ ಪದ್ಮಶ್ರೀ ಚಿಟ್ಟಾಣಿ ರಾಮಚಂದ್ರ ಹೆಗಡೆಯವರು.

ಎರಡನೇ ತರಗತಿಯವರೆಗೆ ಓದಿದ್ದ ಚಿಟ್ಟಾಣಿಯವರಿಗೆ ಅಕ್ಷರ ಲೋಕ ಅಷ್ಟಾಗಿ ಒಲಿಯಲಿಲ್ಲ. ವಿದ್ಯೆ ನನಗೆ ಮರೀಚಿಕೆ ಎಂದು ಅವರು ಅಸಡ್ಡೆಯಿಂದ ಕೈಚೆಲ್ಲಿ ಕುಳಿತುಕೊಳ್ಳಲಿಲ್ಲ. ಶಾಲಾ ಶಿಕ್ಷಣದ ಕೊರತೆಯನ್ನು ಕಲಾ ಶಿಕ್ಷಣದ ಹಠದಿಂದ ಗೆದ್ದರು.ರಂಗಭೂಮಿಯನ್ನೇ ತಪೋಭೂಮಿಯನ್ನಾಗಿಸಿಕೊಂಡ ಫಲವಾಗಿ,ಭಾರತ ಸರ್ಕಾರದ ಪದ್ಮಶ್ರೀ ಪ್ರಶಸ್ತಿ ಪಡೆದ ಮೊದಲ ಯಕ್ಷಗಾನ ಕಲಾವಿದ ಎಂಬ ಇತಿಹಾಸ ಬರೆದರು.

ಹಂಪಿ ಕನ್ನಡ ವಿಶ್ವವಿದ್ಯಾಲಯದ ನಾಡೋಜ,ರಾಜ್ಯೋತ್ಸವ ಪ್ರಶಸ್ತಿ ಹಾಗೂ ಶಿವರಾಮ ಕಾರಂತ ಪ್ರಶಸ್ತಿಗಳು ಅವರ ಶ್ರಮಕ್ಕೆ ಸಾಕ್ಷಿಯಾದವು. ಅಂದು ಅಕ್ಷರ ಕಲಿಯದ ಬಾಲಕನ ಬದುಕು ಇಂದು ವಿಶ್ವವಿದ್ಯಾಲಯಗಳಿಗೆ ಅಧ್ಯಯನದ ವಿಷಯವಾಗಿದೆ.

ಸೋಮಾರಿತನ ಎಂಬುದು ಸುಂದರವಾದ ಸೆರೆಮನೆ;ಅದು ನಿಮ್ಮನ್ನು ಸುಖವಾಗಿ ಇರಿಸುತ್ತಲೇ ನಿಮ್ಮ ಭವಿಷ್ಯವನ್ನು ಕೊಲ್ಲುತ್ತದೆ. 84ನೇ ವಯಸ್ಸಿನಲ್ಲೂ ರಂಗದ ಮೇಲೆ ಸಿಂಹದಂತೆ ಗರ್ಜಿಸುತ್ತಿದ್ದ ಚಿಟ್ಟಾಣಿಯವರನ್ನು ಕಂಡಾಗ,ಸಕಲ ಶಕ್ತಿ ಹೊಂದಿರುವ ಯುವಕರಿಗೆ ಸೋಮಾರಿತನ ಎಂಬುದು ನಾಚಿಕೆ ತರಬೇಕಲ್ಲವೇ? ಬುದ್ಧಿವಂತಿಕೆ ಯಾರಿಗೂ ಮೀಸಲಾದ ಆಸ್ತಿಯಲ್ಲ; ಅದು ನಿಷ್ಠೆಯಿಂದ ಶ್ರಮಿಸುವವನಿಗೆ ಒಲಿಯುವ ರಕ್ಷೆ.

ಯುವಪೀಳಿಗೆಯೇ, ಸ್ಮಾರ್ಟ್‌ಫೋನ್‌ಗಳ ಮಾಯಾಲೋಕದಿಂದ ಹೊರಬಂದು,ಕೀಳರಿಮೆಯ ಸಂಕೋಲೆಗಳನ್ನು ಕಳಚಿಹಾಕಿ. ಸಮಯವು ಮರಳಿ ಬಾರದ ಚೈತನ್ಯ. ಇಂದೇ ಮಾಡು,ಈಗಲೇ ಮಾಡು ಎಂಬ ಸಂಕಲ್ಪ ನಿಮ್ಮದಾಗಲಿ. ನಿಮ್ಮೊಳಗಿನ ಸಾಧನೆಯ ಹಠದ ಬೆಂಕಿ ಸೋಮಾರಿತನವನ್ನು ಸುಟ್ಟು ಹಾಕಲಿ.ನಿಮ್ಮ ಯಶಸ್ಸೇ ನಿಮ್ಮನ್ನು ದಡ್ಡ ಎಂದವರಿಗೆ ಕಾಲ ನೀಡುವ ಸಮರ್ಪಕ ಉತ್ತರವಾಗಲಿ.

ಸ್ಫೂರ್ತಿ ಸುಧೆ - 08



Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from No 170, Nirvikalpa Road, E&F block, Ramakrishna Nagar, Mysore - 570022, Editor K.N Ravi,